ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ನೊಂದವರ ನೈಜ ಕನ್ನಡಿ

ಸಂಪುಟ : 12 ಸಂಚಿಕೆ : 306

31–5–2025 ಶನಿವಾರ

₹3 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 12 ISSUE : 306

## ಇಂದು ಯತ್ನಿಕ್ ದಿನ, ವಾರ್ಷಿಕೋತ್ಸವ

ದಾವಣಗೆರೆ ಬಾಪೂಜಿ ಇನ್ಸ್ಟಿಟ್ಯೂಟ್ ಆಫ್ ಹೈಟೆಕ್ ಎಜುಕೇಶನ್ ಕಾಲೇಜಿನಲ್ಲಿ ಮೇ 31ರ ಇಂದು ಸಾಂಪ್ರದಾಯಿಕ ದಿನ ಮತ್ತು ಕಾಲೇಜಿನ ವಾರ್ಷಿಕೋತ್ಸವ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ.

ಬೆಳಗ್ಗೆ 10 ಗಂಟೆಗೆ ನಡೆಯುವ ಸಾಂಪ್ರದಾಯಿಕ ಉಡುಗೆ ದಿನದ ಕಾರ್ಯಕ್ರಮವನ್ನು ಕಾಲೇಜಿನ ಚೇರ್ಮನ್ ಡಾ. ಅಥಣಿ ಎಸ್. ವೀರಣ್ಣ ಉದ್ಘಾಟಿಸಲಿದ್ದಾರೆ. ಸಂಜೆ 4:30ಕ್ಕೆ ನಡೆಯುವ ಕಾಲೇಜಿನ ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಬಾಪೂಜಿ ಬಿ. ಸ್ಕೂಲ್‌ನ ನಿರ್ದೇಶಕರಾದ ಡಾ ಎಚ್.ವಿ ಸ್ವಾಮಿ ತ್ರಿಬುವನಾನಂದ ಪಾಲ್ಗೊಳ್ಳಲಿದ್ದು, ಕಾಲೇಜಿನ ಪ್ರಾಂಶುಪಾಲರಾದ ಡಾ. ಬಿ. ವೀರಪ್ಪ ಅಧ್ಯಕ್ಷತೆ ವಹಿಸಲಿದ್ದಾರೆ.

## ಇಂದು ಸಭೆ

**ದಾವಣಗೆರೆ:** ದಾವಣಗೆರೆ ಜಿಲ್ಲಾ ಆರ್ಯ ಈಡಿಗರ ಸಂಘದ 2024–25 ನೇ ಸಾಲಿನ ಸರ್ವ ಸದಸ್ಯರ ಮಹಾಸಭೆಯು ಜೂನ್ 1 ಬೆಳಿಗ್ಗೆ 11 ಗಂಟೆಗೆ ಪಿಬಿ ರಸ್ತೆಯಲ್ಲಿರುವ ಆರ್ಯ ಈಡಿಗರ ವಿದ್ಯಾರ್ಥಿ ನಿಲಯದ ಆವರಣದಲ್ಲಿ ಜರುಗಲಿದೆ.

## ಇಂದು ವಿಶ್ವ ತಂಬಾಕು ರಹಿತ ದಿನ ಕಾರ್ಯಕ್ರಮ

**ದಾವಣಗೆರೆ :** ಮೇ 31 ರಂದು ಬೆಳಿಗ್ಗೆ 9.30ಕ್ಕೆ ನಗರದ ದೊಡ್ಡಬಾತಿಯಲ್ಲಿರುವ ತಪೋವನ ಆಯುರ್ವೇದ ಮಹಾವಿದ್ಯಾಲಯದಲ್ಲಿ 'ವಿಶ್ವ ತಂಬಾಕು ರಹಿತ ದಿನ' ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, , ಜಿಲ್ಲಾ ಸರ್ವೇಕ್ಷಣಾಧಿಕಾರಿಗಳ ಕಚೇರಿ, ಜಿಲ್ಲಾ ತಂಬಾಕು ನಿಯಂತ್ರಣ ಕೋಶ, ತಪೊ?ವನ ಆಯುರ್ವೇದ ಮೆಡಿಕಲ್ ಕಾಲೇಜು ಮತ್ತು ಆಸ್ಪತ್ರೆ, ತಪೊ?ವನ ಯೋಗ ಮತ್ತು ಪ್ರಕೃತಿ ಚಿಕಿತ್ಸಾ ಮೆಡಿಕಲ್ ಕಾಲೇಜು ಮತ್ತು ಆಸ್ಪತ್ರೆ ಹಾಗೂ ತಪೊ?ವನ ಸ್ಕೂಲ್ ಆಫ್ ನಸಿರ್‌ಂಗ್, ದೊಡ್ಡಭಾತಿ ಇವರ ಸಹಯೋಗದಲ್ಲಿ ಆಯೋಜಿಸಲಾಗಿರುವ ಕಾರ್ಯಕ್ರಮವನ್ನು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷರಾದ ವೇಲಾ.ಡಿ.ಕೆ ಉದ್ಘಾಟಿಸುವರು.ತಪೋವನ ಸಮೂಹ ಸಂಸ್ಥೆಯ ಅಧ್ಯಕ್ಷರಾದ ಡಾ.ಶಶಿಕುಮಾರ್.ವಿ.ಮೆರರ್ವಾಡೆ ಅಧ್ಯಕ್ಷತೆ ವಹಿಸುವರು.

## ದ.ಕನ್ನಡದಲ್ಲಿ ಭಾರಿ ಮಳೆ, ಗುಡ್ಡ ಕುಸಿದು ಇಬ್ಬರ ಸಾವು

**ಮಂಗಳೂರು,ಮೇ30:** ದಕ್ಷಿಣ ಕನ್ನಡ ಜಿಲ್ಲೆಯಾದ್ಯಂತ ಭಾರಿ ಮಳೆ ಸುರಿಯುತ್ತಿದೆ. ಉಲ್ಲಾಳದಲ್ಲಿ ಗುಡ್ಡ ಕುಸಿದ ಪರಿಣಾಮ ಬಾಲಕಿ ಹಾಗೂ ಮಹಿಳೆ ಮೃತಪಟ್ಟಿದ್ದಾರೆ.

ಜಿಲ್ಲೆಯಲ್ಲಿ ಭಾರಿ ಮಳೆ ಬೀಳುತ್ತಿರುವ ಹಿನ್ನೆಲೆಯಲ್ಲಿ ಎಲ್ಲ ಅಂಗನವಾಡಿ ಕೇಂದ್ರಗಳು ಪ್ರಾಥಮಿಕ ಪ್ರೌಢಶಾಲೆ, ಸರ್ಕಾರಿ ಅನುದಾನಿತ, ಖಾಸಗಿ ವಿದ್ಯಾಸಂಸ್ಥೆಗಳಿಗೆ ಪ್ರಭಾರ ಜಿಲ್ಲಾಧಿಕಾರಿ ಆನಂದ್ ರಜೆ ಘೋಷಿಸಿದ್ದಾರೆ.

ಉಲ್ಲಾಳದಲ್ಲಿ ನಿರಂತರ ಮಳೆಯಿಂದಾಗಿ ಮನೆಯ ಹಿಂಬದಿಯ ಗುಡ್ಡ, ತಡೆಗೋಡೆ ಕುಸಿದು ನಯೀಮಾ (10) ಹಾಗೂ ಪ್ರೇಮಪೂಜಾರಿ (60) ಮೃತಪಟ್ಟಿದ್ದಾರೆ. ರಾತ್ರಿ ಇಡೀ ಸುರಿದ ಭಾರಿ ಮಳೆಯಿಂದಾಗಿ ದೇರಳಕಟ್ಟೆ ಸಮೀಪದ ಕಾನ ಕೆರೆ ಹಾಗೂ ಮುಂಟೆಪದವು ಕೋಡಿ ಎಂಬಲ್ಲಿ ಈ ಅವಘಡ ಸಂಭವಿಸಿದೆ. ಘಟನೆಯಲ್ಲಿ ನಯೀಮಾ ಸ್ಥಳದಲ್ಲೇ ಸಾವನ್ನಪ್ಪಿದ್ದು, ಮತ್ತೊಬ್ಬರು ಪ್ರಜ್ಞಾಹೀನ ಸ್ಥಿತಿಯಲ್ಲಿರುವ ತನ್ನ ತಾಯಿಯನ್ನು ಬಿಗಿದಪ್ಪಿಕೊಂಡಿದೆ.

ಮುಂಟೆಪದವು ಕೋಡಿಯಲ್ಲಿ ಭಾರಿ ಮಳೆಗೆ ಗುಡ್ಡ ಕುಸಿದು ಕಾಂತಪ್ಪ ಪೂಜಾರಿ ಎಂಬುವರ ಮನೆ ಮೇಲೆ ಬಿದ್ದಿದೆ. ಮನೆಯಲ್ಲಿದ್ದ ಒಂದೇ ಕುಟುಂಬದ ಐವರು ಸಿಕ್ಕಿಹಾಕಿಕೊಂಡಿದ್ದು, ಓರ್ವ ಮಹಿಳೆ ಸಾವನ್ನಪ್ಪಿದ್ದಾರೆ. ಸ್ಥಳಕ್ಕೆ ಎನ್‌ಡಿಆರ್‌ಎಫ್ ಹಾಗೂ ಎಸ್‌ಡಿಆರ್‌ಎಫ್ ತಂಡಗಳು ತೆರಳಿದ್ದು, ಬದುಕುಳಿದವರ ರಕ್ಷಣೆಗಾಗಿ ಕಾರ್ಯಾಚರಣೆ ಕೈಗೊಂಡಿದೆ. ಕಾಂತಪ್ಪಪೂಜಾರಿ (65)ಅವರನ್ನು ರಕ್ಷಿಸಲಾಗಿದ್ದು, ಉಳಿದವರ ರಕ್ಷಣೆಗಾಗಿ ಕಾರ್ಯಾಚರಣೆ ಮುಂದುವರೆದಿದೆ. ಅವಶೇಷಗಳಡಿಯಲ್ಲಿ ಸಿಲುಕಿಕೊಂಡವರ ತಾಯಿ, ಮಕ್ಕಳಿಗೆ ಆಕ್ಸಿಜನ್ ವ್ಯವಸ್ಥೆ ಒದಗಿಸಲಾಗಿದೆ.

## ಸಿಸಿ ಟಿ.ವಿ. ಕ್ಯಾಮೆರಾ, ಸೆಕ್ಯೂರಿಟಿ ಅಲಾರಾಂ ಕುರಿತ ಉಚಿತ ತರಬೇತಿ

**ಚಿಕ್ಕಮಗಳೂರು, ಮೇ 30:** ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್ ಮತ್ತು ಕೆನರಾ ಬ್ಯಾಂಕ್‌ನ ಸಹಯೋಗದಲ್ಲಿ ನಡೆಸುತ್ತಿರುವ ರುಡ್‌ಸೆಟ್ ಸಂಸ್ಥೆಯ ವತಿಯಿಂದ ಸಿಸಿ ಟಿ.ವಿ. ಕ್ಯಾಮೆರಾ, ಸೆಕ್ಯೂರಿಟಿ ಅಲಾರಾಂ ಮತ್ತು ಸ್ಮೋಕ್ ಡಿಟೆಕ್ಟರ್‌ನ ಅಳವಡಿಕೆ ಮತ್ತು ಸೇವೆ ಕುರಿತ 13 ದಿನಗಳ ಉಚಿತ ತರಬೇತಿಯನ್ನು ಜೂನ್ 23 ರಿಂದ ಹಮ್ಮಿಕೊಳ್ಳಲಾಗಿದ್ದು, ಗ್ರಾಮೀಣ ಆಸಕ್ತ ನಿರುದ್ಯೋಗಿ ಯುವಕ–ಯುವತಿಯರು ಅರ್ಜಿಯನ್ನು ಸಲ್ಲಿಸಬಹುದು.

ಆಸಕ್ತರು 18 ರಿಂದ 45 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಗ್ರಾಮೀಣ ಭಾಗದ ಬಿಪಿಎಲ್ ಕಾರ್ಡ್ ಹಾಗೂ ಆಧಾರ್ ಕಾರ್ಡ್ ಅನ್ನು ಕಡ್ಡಾಯವಾಗಿ ಹೊಂದಿರಬೇಕು.

ತರಬೇತಿಯ ಅವಧಿಯಲ್ಲಿ ಉಚಿತವಾಗಿ ಊಟ ಮತ್ತು ವಸತಿ ನೀಡಲಾಗುವುದು ಹಾಗೂ ತರಬೇತಿಯ ಅವಧಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು.

## ನಟ ಕಮಲಹಾಸನ್ ಹೇಳಿಕೆಗೆ ಖಂಡನೆ

**ತರೀಕೆರೆ:** ತಮಿಳು ಹಾಗೂ ಬಹುಭಾಷಾ ನಟ ಕಮಲಹಾಸನ್ ಕನ್ನಡದ ಬಗ್ಗೆ ಅವಹೇಳನ ಮಾಡಿ ತಮಿಳು ಭಾಷೆಯಿಂದ ಕನ್ನಡ ಭಾಷೆ ಹುಟ್ಟಿದೆ ಎಂಬ ಹೇಳಿಕೆ ಕನ್ನಡಿಗರಿಗೆ, ಕನ್ನಡ ಭಾಷೆಗೆ ನೋವುಂಟಾಗಿದ್ದು, ಈ ಹೇಳಿಕೆಯನ್ನು ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಮಾಜಿ ಅಧ್ಯಕ್ಷ ಎಸ್. ಸುರೇಶ್ಚಂದ್ರ ಖಂಡಿಸಿದ್ದಾರೆ.

ಒಬ್ಬ ಜವಾಬ್ದಾರಿಯುತ ನಟ ಈ ರೀತಿ ಹೇಳಿರುವುದು ನಿಜಕ್ಕೂ ಶೋಚನೀಯ. ಈ ರೀತಿ ನೀಡಿರುವ ಹೇಳಿಕೆಯನ್ನು ವಾಪಸ್ಸು ಪಡೆದು ಕನ್ನಡಿಗರ ಕ್ಷಮೆಯಾಚಿಸಬೇಕು. ಇಲ್ಲದಿದ್ದರೆ ಉಗ್ರ ಹೋರಾಟ ಮಾಡಲಾಗುದೆಂದು ಅವರು ತಮ್ಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜನರ ಸಮಸ್ಯೆಗಳಿಗೆ ಸ್ಪಂದಿಸಿ : ಸಿಎಂ ಸಿದ್ದರಾಮಯ್ಯ

**ಬೆಂಗಳೂರು, ಮೇ 30–** ಅಧಿಕಾರಿಗಳ ಮೇಲೆ ನಿಷ್ಠೂರ ಕ್ರಮ ಕೈಗೊಳ್ಳುವುದಾಗಿ ಎಚ್ಚರಿಕೆ ನೀಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಜಿಲ್ಲಾಧಿಕಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮತ್ತು ಜಿಲ್ಲಾ ಪಂಚಾಯತ್ ಸಿಇಓಗಳು ತಮ್ಮ ಅಹಂ ಬದಿಗಿಟ್ಟು ಸಮನ್ವಯದಿಂದ ಕೆಲಸ ಮಾಡಬೇಕು ಎಂದು ತಾಕೀತು ಮಾಡಿದರು.

ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿಂದು ರಾಜ್ಯದ ಎಲ್ಲ ಜಿಲ್ಲೆಗಳ ಜಿಲ್ಲಾಧಿಕಾರಿಗಳು, ಜಿ.ಪಂ. ಸಿಇಓಗಳು ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳ ಸಭೆಯಲ್ಲಿ ಆರಂಭಿಕವಾಗಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಈ ಹಿಂದಿನ ಸಭೆಯಲ್ಲಿ ನೀಡಿದ ಸೂಚನೆಗಳು, ತೆಗೆದುಕೊಂಡ ನಿರ್ಣಯಗಳಲ್ಲಿ ಕೆಲವು ಇಲಾಖೆಗಳು ಶೇ. 100 ರಷ್ಟು ಪ್ರಗತಿ ಸಾಧಿಸಿಲ್ಲ. ಇದನ್ನು ಸಹಿಸಲು ಸಾಧ್ಯವಿಲ್ಲ. ಈ ವಿಚಾರದಲ್ಲಿ ರಾಜಿಯೂ ಇಲ್ಲ ಎಂದು ಗುಡುಗಿದರು.

ಜನರ ಸಮಸ್ಯೆಗಳಿಗೆ ಸ್ಪಂದಿಸದ ಅಧಿಕಾರಿಗಳ ಮೇಲೆ ನಿಷ್ಠೂರವಾಗಿ ಕ್ರಮ ಕೈಗೊಳ್ಳುವುದು ನಮಗೆ ಅನಿವಾರ್ಯವಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಜಿಲ್ಲೆಗಳ ಅಧಿಕಾರಿಗಳು ತಮ್ಮ ಅಹಂ ಬದಿಗಿಟ್ಟು ಸಮನ್ವಯದಿಂದ ಕೆಲಸ



ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಇಂದು ನಡೆದ ರಾಜ್ಯದ ಪ್ರಗತಿ ಪರಿಶೀಲನೆ ಕುರಿತಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್ ಕಾರ್ಯ ನಿರ್ವಹಣಾಧಿಕಾರಿಗಳ ಸಭೆ ನಡೆಯಿತು. ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಚಿವ ಕೆ.ಜೆ. ಜಾರ್ಜ್, ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಮತ್ತಿತರರು ಉಪಸ್ಥಿತರಿದ್ದರು.

ಮಾಡಿದರೆ ಮಾತ್ರ ರಾಜ್ಯದ ಸಮಗ್ರ ಅಭಿವೃದ್ಧಿ ಸಾಧ್ಯ. ಈ ಉದ್ದೇಶಕ್ಕೆ ನೀವುಗಳು ಐಎಎಸ್ ಮಾಡಿರುವುದು. ಇದನ್ನು ಅರ್ಥ ಮಾಡಿಕೊಳ್ಳಬೇಕು ಎಂದು ಅವರು ಹೇಳಿದರು.

**ಸಂವಿಧಾನ ವಿರೋಧಿ ಶಕ್ತಿಗಳನ್ನು ಮಟ್ಟ ಹಾಕಿ :** ಸಂವಿಧಾನದ ಆಶಯ ಮತ್ತು ಧ್ಯೇಯೋದ್ದೇಶಗಳಿಗೆ ವಿರುದ್ಧವಾಗಿ ಯಾರೂ ಕಾರ್ಯನಿರ್ವಹಿಸಬಾರದು. ಅಂತಹ ಶಕ್ತಿಗಳನ್ನು ಮಟ್ಟ ಹಾಕುವುದು ಡಿಸಿ, ಸಿಇಓ, ಎಸ್ಪಿಗಳ ಜವಾಬ್ದಾರಿ ಎಂದು ಮುಖ್ಯಮಂತ್ರಿಗಳು ಹೇಳಿದರು.

ಸಂವಿಧಾನದ ಆಶಯ ಮತ್ತು ಧ್ಯೇಯೋದ್ದೇಶಗಳಿಗೆ ವಿರುದ್ಧವಾದ ಶಕ್ತಿಗಳನ್ನು ಬೆಳೆಯಲು ಯಾವುದೇ ಕಾರಣಕ್ಕೂ ಅವಕಾಶ ನೀಡಬಾರದು. ಇತ್ತೀಚಿನ ದಿನಗಳಲ್ಲಿ ಇಂತಹ ಶಕ್ತಿಗಳು ಹೆಚ್ಚುತ್ತಿವೆ. ಅಂತಹ ಶಕ್ತಿಗಳನ್ನು ಮೊಳಕೆಯಲ್ಲೇ ಚಿವುಟಿ ಹಾಕಿ ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಸಂವಿಧಾನದ ಆಶಯಗಳಿಗೆ ವಿರುದ್ಧವಾಗಿರುವವರು ವ್ಯಕ್ತಿಗಳೇ ಆಗಿರಲಿ, ಯಾರೇ ಆಗಿರಲಿ ಅಂತಹವರನ್ನು ಮಟ್ಟ ಹಾಕುವುದು, ಅಂತಹ ಶಕ್ತಿಗಳು ಬೆಳೆಯದಂತೆ ನೋಡಿಕೊಳ್ಳಬೇಕಾದ್ದು ಡಿಸಿ, ಸಿಇಓ ಹಾಗೂ ಎಸ್ಪಿಗಳ ಜವಾಬ್ದಾರಿ ತಾನೇ ಎಂದು ಮುಖ್ಯಮಂತ್ರಿಗಳು ಕಟುವಾಗಿಯೇ ಅಧಿಕಾರಿಗಳನ್ನು ಪ್ರಶ್ನಿಸಿದರು.

ಸಂವಿಧಾನ ಜಾರಿ ಸಭೆಯಲ್ಲೇ ಭಾರತೀಯ ಆಡಳಿತ ಸೇವೆ ಬೇಕೆ ಎಂಬ ಬಗ್ಗೆ ಚರ್ಚೆಗಳಾಗಿ ಐಎಎಸ್ ಬೇಕು ಎಂಬ ನಿರ್ಧಾರಕ್ಕೆ ಬರಲಾಗಿದೆ. 10–10–1949 ರಂದು ನಡೆದ ಸಂವಿಧಾನ ಜಾರಿ ಸಭೆಯಲ್ಲಿ ವಲ್ಲಭಬಾಯಿ ಪಟೇಲ್ ರವರು ದೇಶವನ್ನು ನೈಜ ಸ್ವಾತಂತ್ರ್ಯ ಹೋರಾಟಗಳ ಆಶಯದಲ್ಲಿ ಮುನ್ನಡೆಸಲು ಐಎಎಸ್ ಸೇವೆ ಇರಬೇಕು ಎಂದಿದ್ದರು. ಇದರ ನೈಜ ಕಾಳಜಿಯನ್ನು ನೀವು ಅರ್ಥ ಮಾಡಿಕೊಳ್ಳಬೇಕು ಎಂದು ಅಧಿಕಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚಿಸಿದರು.

ಸಾಮಾಜಿಕ ನ್ಯಾಯ ಮತ್ತು ವಲ್ಲಭಬಾಯಿ ಪಟೇಲ್‌ರವರ ಮಾತನ್ನು ಅರ್ಥ ಮಾಡಿಕೊಂಡು ಸಂವಿಧಾನದ ಆಶಯಗಳಿಗೆ ವಿರುದ್ಧವಾಗಿ ಕೆಲಸ ಮಾಡುವವರ ವಿರುದ್ಧ ಮತ್ತು ಜನಪರ ಆಶಯಗಳಿಗೆ ಸ್ಪಂದಿಸದಿದ್ದರೆ ಅವರ ವಿರುದ್ಧ ನಾವು ಕ್ರಮ ಕೈಗೊಳ್ಳಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ನೀವೆಲ್ಲಾ ಸಂವಿಧಾನ ಓದಿದ್ದೀರಿ, ಅದರ ಆಶಯಗಳಿಗೆ, ಧ್ಯೇಯೋದ್ದೇಶಗಳಿಗೆ ಬದ್ಧರಾಗಿದ್ದೀರಿ ಎಂದು ನಂಬಿದ್ದೇನೆ. ಇದನ್ನು ಕಾರ್ಯರೂಪಕ್ಕೆ ತರುವುದರಲ್ಲಿ ವಿಫಲವಾದವರ ವಿರುದ್ಧ ನಾನು ನಿರ್ಧಾಕ್ಷಿಣ್ಯ ಕ್ರಮ ಕೈಗೊಳ್ಳಲು ಹಿಂದೆ–ಮುಂದೆ ನೋಡುವುದಿಲ್ಲ ಎಂದು ಅವರು ಹೇಳಿದರು.

ಈ ಸಭೆಯಲ್ಲಿ ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್, ಸಚಿವರಾದ ಕೆ.ಎಚ್ ಮುನಿಯಪ್ಪ, ಕೆ.ಜೆ ಜಾರ್ಜ್, ಚೆಲುವರಾಯಸ್ವಾಮಿ, ಕೃಷ್ಣಬೈರೇಗೌಡ, ಪ್ರಿಯಾಂಕ್ ಖರ್ಗೆ, ಬೋಸರಾಜು, ಶಿವಾನಂದ ಪಾಟೀಲ್, ಕೆ. ವೆಂಕಟೇಶ್ ಸೇರಿದಂತೆ ಹಲವು ಸಚಿವರು, ಸರ್ಕಾರದ ಮುಖ್ಯಕಾರ್ಯದರ್ಶಿ ಶಾಲಿನಿ ರಜನೀಶ್ ಸೇರಿದಂತೆ ವಿವಿಧ ಇಲಾಖೆಗಳ ಮುಖ್ಯಸ್ಥರು, ಹಿರಿಯ ಅಧಿಕಾರಿಗಳು ಎಲ್ಲ ಜಿಲ್ಲೆಗಳ ಜಿಲ್ಲಾಧಿಕಾರಿಗಳು, ಜಿಪಂ ಸಿಇಓಗಳು ಉಪಸ್ಥಿತರಿದ್ದರು.

### ಧಾರವಾಡ: ನಿಂತಿದ್ದ ಲಾರಿಗೆ ಕಾರು ಡಿಕ್ಕಿ

## ಸ್ಥಳದಲ್ಲೇ ಮೂವರ ದುರ್ಮರಣ

**ಧಾರವಾಡ:** ರಸ್ತೆ ಬದಿ ನಿಂತಿದ್ದ ಲಾರಿಗೆ ಅತೀ ವೇಗವಾಗಿ ಬಂದ ಕಾರು ಡಿಕ್ಕಿ ಹೊಡೆದ ಪರಿಣಾಮ ಮೂವರು ಸ್ಥಳದಲ್ಲೇ ಮೃತಪಟ್ಟಿರುವ ಘಟನೆ ಧಾರವಾಡದ ಅಣ್ಣಿಗೇರಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಇಂದು ಬೆಳಗ್ಗೆ ನಡೆದಿದೆ.



ಕಾರಿನಲ್ಲಿದ್ದ ಮೂವರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಮೃತಪಟ್ಟವರನ್ನು ಬೆಂಗಳೂರಿನ ವೇಣುಗೋಪಾಲ್ (63) ಹಾಗೂ ಮೈಸೂರಿನ ಸುರೇಶ್ (60) ಹಾಗೂ ಮದನ್ (61) ಎಂದು ಗುರುತಿಸಲಾಗಿದೆ.

ಇಂದು ಬೆಳಗ್ಗೆ 8.30 ಗಂಟೆ ಸುಮಾರಿನಲ್ಲಿ ಮುಂಡರಗಿಯಿಂದ ಹುಬ್ಬಳ್ಳಿಗೆ ಹೋಗುತ್ತಿದ್ದರು.

ತೋಟ ನೋಡಿಕೊಂಡು ಮುಂಡರಗಿಯಿಂದ ಬೆಂಗಳೂರು ಕಡೆಗೆ ಹೋಗುತ್ತಿದ್ದಾಗ ದುರ್ಘಟನೆ ಸಂಭವಿಸಿದೆ. ಮೃತರು ಮೈಸೂರು ಹಾಗೂ ಬೆಂಗಳೂರಿನವರು ಎಂದು ತಿಳಿದು ಬಂದಿದೆ. ಸುರೇಶ್ ಅವರು ಕಾರು ಚಾಲನೆ ಮಾಡುತ್ತಿದ್ದರು.

ಧಾರವಾಡ ಜಿಲ್ಲೆಯ ಗದಗ–ಹುಬ್ಬಳ್ಳಿ ರಸ್ತೆ, ರಾಷ್ಟ್ರೀಯ ಹೆದ್ದಾರಿ 63ರ ಭದ್ರಾಪುರ ಬಳಿ ಇವರ ಕಾರು ಹೋಗುತ್ತಿದ್ದಾಗ ರಸ್ತೆ ಬದಿ ನಿಂತಿದ್ದ ಲಾರಿಗೆ ಡಿಕ್ಕಿ ಹೊಡೆದ ಪರಿಣಾಮ ಮೂವರು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಅಣ್ಣಿಗೇರಿ ಪೊಲೀಸರು ಘಟನಾ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

## ಕಲಬೆರಕೆ ಭತ್ತ ಬಿತ್ತನೆ: ಯರವನಾಗತಿಹಳ್ಳಿಗೆ ವಿಜ್ಞಾನಿಗಳ ಭೇಟಿ

**ದಾವಣಗೆರೆ:** ನುಜಿವೀಡು ಕಂಪನಿಯ ಅನ್ನಪೂರ್ಣ ತಳಿಯ ಕಲಬೆರಕೆ ಭತ್ತ ಬೆಳೆದಿರುವ ತಾಲ್ಲೂಕಿನ ಯರವನಾಗತಿಹಳ್ಳಿ ಗ್ರಾಮದ ಗದ್ದೆಗಳಿಗೆ ತಳಿ ವಿಜ್ಞಾನಿಗಳು ಶುಕ್ರವಾರ ಭೇಟಿ ನೀಡಿ ಭತ್ತದ ಮಾದರಿಗಳನ್ನು ಸಂಗ್ರಹಿಸಿದರು.

ರಾಜ್ಯ ರೈತ ಸಂಘ ಹಸಿರು ಸೇನೆ ಹುಚ್ಚವ್ವನಹಳ್ಳಿ ಮಂಜುನಾಥ್ ಬಣದ ಹೋರಾಟದ ಪರಿಣಾಮ ಕತ್ತಲಗೆರೆ ಕೃಷಿ ಸಂಶೋಧನಾ ಕೇಂದ್ರದ ಬೇಸಾಯ ಶಾಸ್ತ್ರಜ್ಞ ಡಾ.ಸಣ್ಣ ತಿಮ್ಮಪ್ಪ, ಡಾ.ಸರ್ವಜ್ಞ ಸಾಲಿಮಠ್, ತಳಿ ಶಾಸ್ತ್ರಜ್ಞ ಡಾ.ಮಂಜುನಾಥ್ ಬಿ. ಮತ್ತು ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕ ಶ್ರೀಧರ ಮೂರ್ತಿ ಅವರುಗಳು ಭತ್ತದ ಗದ್ದೆಗಳಿಗೆ ತೆರಳಿ ಒಂದು ಮೀಟರ್ ಅಗಲ ಒಂದು ಮೀಟರ್ ಸುತ್ತಳತೆಯ ಭೂಮಿಯಲ್ಲಿ ಬೆಳೆದಿರುವ ಒಟ್ಟು ಭತ್ತದ ಸಸಿಗಳಲ್ಲಿ ಎಷ್ಟು ಕಲಬೆರಕೆ ಸಸಿಗಳು ಹುಟ್ಟಿವೆ ಎನ್ನುವುದನ್ನು ಪರಿಶೀಲಿಸಿ ತೆನೆ ಮತ್ತು ಸಸಿಗಳ ಮಾದರಿಗಳನ್ನು ಸಂಗ್ರಹಿಸಿದರು.

ಸಂಗ್ರಹಿಸಿದ ಮಾದರಿಗಳನ್ನು ಶಿವಮೊಗ್ಗದಲ್ಲಿರುವ ಕೃಷಿ ವಿವಿಗೆ ಕಳುಹಿಸಿ ವರದಿ ಪಡೆದು ಸೋಮವಾರ ವರದಿ ನೀಡುವುದಾಗಿ ತಜ್ಞರು ತಿಳಿಸಿದರು. ಈ



ಸಂದರ್ಭದಲ್ಲಿ ಮಾತನಾಡಿದ ಹುಚ್ಚವ್ವನಹಳ್ಳಿ ಮಂಜುನಾಥ್, ವಿಜ್ಞಾನಿಗಳು ಯಾವುದೇ ಆಮಿಷಕ್ಕೆ ಒಳಗಾಗದೇ ರೈತರಿಗೆ ಅನ್ಯಾಯವಾಗದಂತೆ ವರದಿ ನೀಡಬೇಕು ಎಂದು ಮನವಿ ಮಾಡಿದರು.

ಶೀಘ್ರದಲ್ಲಿಯೇ ನ್ಯಾಯ ದೊರಕಿಸಿಕೊಡಬೇಕು, ವಿಳಂಬವಾದರೆ ಜಿಲ್ಲಾಡಳಿತ ಭವದ ಎದುರು ಅಹೋರಾತ್ರಿ ಸತ್ಯಾಗ್ರಹ ನಡೆಸಲಾಗುವುದು. ಬೇಸಿಗೆ ಹಂಗಾಮಿನಲ್ಲಿಯೇ ಭತ್ತದ ಇಳುವರಿ ಹೆಚ್ಚಾಗಿರುತ್ತದೆ. ಆದರೆ ಈ ಬಾರಿ ಯರವನಾಗತಿಹಳ್ಳಿಯ ಸುಮಾರು 50 ಕ್ಕೂ ಅಧಿಕ ರೈತರು ಕಲಬೆರಕೆ ಬೀಜದಿಂದ ನಷ್ಟಕ್ಕೆ ತುತ್ತಾಗಿದ್ದಾರೆ. ಕೂಡಲೇ ಸರ್ಕಾರ ನಿಗಧಿಮಾಡಿರುವ ಕನಿಷ್ಠ ಬೆಂಬಲ ಬೆಲೆಯಂತೆ ಕಂಪನಿ ನಷ್ಟ ಭರಿಸಿಕೊಡಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಯರವನಾಗತಿಹಳ್ಳಿ ರುದ್ರಪ್ಪ, ಮೂರ್ತೆಪ್ಪ, ಓಬಳೇಶ್, ಅಣ್ಣಪ್ಪ ಸೇರಿದಂತೆ ನಷ್ಟ ಅನುಭವಿಸಿರುವ ರೈತರು ಉಪಸ್ಥಿತರಿದ್ದರು.

# ರಾಜ್ಯದಲ್ಲಿ 100 ಕಾಲುಸಂಕ ನಿರ್ಮಾಣಕ್ಕೆ ನೀಲಿ ನಕ್ಷೆ: ಸತೀಶ್ ಜಾರಕಿಹೊಳಿ

**ಚಿಕ್ಕಮಗಳೂರು, ಮೇ 30:** ರಾಜ್ಯದಲ್ಲಿ ಪ್ರತೀವರ್ಷ 100 ಕಾಲುಸಂಕ ನಿರ್ಮಿಸಲು ನೀಲಿ ನಕ್ಷೆ ತಯಾರಿಸಲಾಗಿದ್ದು, ಈಗಾಗಲೇ 20 ಕೋಟಿ ರೂ. ಅನುದಾನದಲ್ಲಿ 20 ಕಡೆ ಕಾಲುಸಂಕ ನಿರ್ಮಿಸುವ ಕಾರ್ಯ ಕೈಗೊಳ್ಳಲಾಗಿದೆ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ತಿಳಿಸಿದರು.

ಇಂದು ಮೂಡಿಗೆರೆ ತಾಲ್ಲೂಕಿನ ಹಳಸೆ ಗ್ರಾಮದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈಗಾಗಲೇ ರಾಜ್ಯದ 36 ಶಾಸಕರ ಕ್ಷೇತ್ರ ವ್ಯಾಪ್ತಿಯಲ್ಲಿ ಕಾಲುಸಂಕ ನಿರ್ಮಿಸಲು ಪ್ರಾಥಮಿಕ ಹಂತದಲ್ಲಿ ತಲಾ ಒಂದು ಕೋಟಿ ರೂ. ಅನುದಾನ ಒದಗಿಸಲಾಗಿದೆ. ಮಲೆನಾಡು ಭಾಗದಲ್ಲಿ ಮುಂಗಾರು ಪೂರ್ವ ಮಳೆಯಿಂದ ರಸ್ತೆ, ಸೇತುವೆ, ರೈತರ ಬೆಳೆ ಮತ್ತಿತರ ಆಸ್ತಿಪಾಸ್ತಿಗಳಿಗೆ ಹಾನಿಯಾದ ಬಗ್ಗೆ ಅಧಿಕಾರಿಗಳು ಸಮೀಕ್ಷೆ ನಡೆಸುತ್ತಿದ್ದಾರೆ. ಈ ಸಂಬಂಧದ ವರದಿ ಬಂದ ಕೂಡಲೆ ಪರಿಹಾರ ಕಾರ್ಯ ಕೈಗೊಳ್ಳಲಾಗುವುದು ಎಂದರು.

ಮೂಡಿಗೆರೆ–ಸಕಲೇಶಪುರ ನಡುವಿನ 40 ಕಿ.ಮೀ. ರಸ್ತೆ ಹಾನಿಗೊಳಗಾಗಿದ್ದು, ಈ ರಸ್ತೆ ಅಭಿವೃದ್ಧಿಗೆ ಸಂಬಂಧಿಸಿದಂತೆ ಅಧಿಕಾರಿಗಳು ಕ್ರಿಯಾಯೋಜನೆ ತಯಾರಿಸಲಿದ್ದಾರೆ. ಕ್ರಿಯಾಯೋಜನೆ ಸಿದ್ಧವಾದ ಕೂಡಲೇ ಅಗತ್ಯವಾದ ಅನುದಾನ ಒದಗಿಸಲಾಗುವುದು. 2014 ರಲ್ಲಿ ಲೋಕೋಪಯೋಗಿ ಸಚಿವರಾಗಿದ್ದ ಡಾ.ಎಚ್.ಸಿ. ಮಹದೇವಪ್ಪ ಅವರು ರಾಜ್ಯದ ವಿವಿಧೆಡೆ 40 ಸೇತುವೆ ನಿರ್ಮಿಸಲು



ಮಂಜೂರಾತಿ ನೀಡಿದ್ದರು. ಅದರ ನಿರ್ಮಾಣ ಕಾಮಗಾರಿ ಹೊಣೆಯನ್ನು ಕೆಆರ್‌ಡಿಸಿಎಲ್ ಸಂಸ್ಥೆಗೆ ವಹಿಸಲಾಗಿತ್ತು. ಅದರಲ್ಲಿ 20 ಸೇತುವೆ ನಿರ್ಮಾಣ ಕಾರ್ಯ ಈಗಾಗಲೇ ಪೂರ್ಣಗೊಂಡಿದ್ದು, ಉಳಿದ 20 ಕಡೆ ಸೇತುವೆ ಕಾಮಗಾರಿ ಪ್ರಗತಿಯಲ್ಲಿದೆ. ಮೂಡಿಗೆರೆ–ಸಕಲೇಶಪುರ ರಾಜ್ಯ ಹೆದ್ದಾರಿಯ ಬೆಟ್ಟದಮನೆ ಗ್ರಾಮದಲ್ಲಿ ಹೇಮಾವತಿ ನದಿಗೆ ನಿರ್ಮಿಸುತ್ತಿರುವ ಸೇತುವೆ ಕಾಮಗಾರಿ ಆರಂಭವಾಗಿ 11 ವರ್ಷವಾದರೂ ತಾಂತ್ರಿಕ ಅಡಚಣೆಯಿಂದಾಗಿ ಪೂಣಗೊಂಡಿಲ್ಲ.

ಈ ನಡುವೆ ಕೆಆರ್‌ಡಿಸಿಎಲ್ ಸಂಸ್ಥೆಯನ್ನು ಲೋಕೋಪಯೋಗಿ ಇಲಾಖೆಗೆ ಸೇರ್ಪಡೆಗೊಳಿಸಲು ಚಿಂತನೆ ನಡೆಸಲಾಗಿದೆ ಎಂದು ಹೇಳಿದರು.

ಕಾಡಾನೆ ಮತ್ತಿತರ ವನ್ಯಪ್ರಾಣಿಗಳ ಉಪಟಳ ಹೆಚ್ಚಾಗಿರುವ ಹಿನ್ನೆಲೆಯಲ್ಲಿ ಅರಣ್ಯದ ಸುತ್ತ ವಾರ್ಷಿಕ 100 ಕಿ.ಮೀ. ವ್ಯಾಪ್ತಿಯಲ್ಲಿ ರೈಲ್ವೆ ಬ್ಯಾರಿ–ಕೇಡ್ ನಿರ್ಮಿಸಲಾಗುವುದು. ಈಗಾಗಲೆ ಗುಂಡ್ಲುಪೇಟೆ, ಹಾಸನ ಮತ್ತಿತರ ಕಡೆ ರೈಲ್ವೆ ಬ್ಯಾರಿಕೇಡ್ ನಿರ್ಮಾಣ ಕಾರ್ಯ ನಡೆದಿದೆ. ಜಿಲ್ಲೆಯ ಕಾಡಾನೆ ಇರುವ ಪ್ರದೇಶದ ಅರಣ್ಯ ವ್ಯಾಪ್ತಿಯಲ್ಲಿ ರೈಲ್ವೆ ಬ್ಯಾರಿ–ಕೇಡ್ ನಿರ್ಮಾಣಕ್ಕೆ ನೀಲಿ ನಕ್ಷೆ ತಯಾರಿಸಲಾಗಿದೆ. ಕಾಡಾನೆಗಳಿಗೆ ಅರಣ್ಯದಲ್ಲಿ ನೀರು ಮತ್ತು ಆಹಾರವಿಲ್ಲದೆ ಕಂಗಾಲಾಗಿ ನಾಡಿಗೆ ಆಹಾರ, ನೀರು ಹುಡುಕಿಕೊಂಡು ಬರುತ್ತಿವೆ. ಈ ಹಿನ್ನೆಲೆಯಲ್ಲಿ ಆನೆಪಥ ನಿರ್ಮಿಸಿ ನೀರು, ಆಹಾರ ಸೇರಿದಂತೆ ಎಲ್ಲ ವ್ಯವಸ್ಥೆ ಒದಗಿಸಿ ಕಾಡಾನೆ ಹಾವಳಿಗೆ ಶಾಶ್ವತ ಪರಿಹಾರ ಕಲ್ಪಿಸಲಾಗುವುದು ಎಂದು ತಿಳಿಸಿದರು.

ಹಾಸನ ಸಂಸದ ಶ್ರೇಯಸ್ ಪಟೇಲ್, ಶಾಸಕರಾದ ಟಿ.ಡಿ.ರಾಜೇಗೌಡ, ಎಚ್.ಡಿ.ತಮ್ಮಯ್ಯ, ನಯನ ಮೋಟಮ್ಮ, ಚಿತ್ರದುಗ–ರ್ದ ಮಾಜಿ ಸಂಸದ ಬಿ.ಎನ್. ಚಂದ್ರಪ್ಪ, ಮಾಜಿ ಸಚಿವ ಬಿ.ಬಿ.ನಿಂಗಯ್ಯ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿಕ್ರಮ್ ಅಮಟೆ ಮತ್ತಿತರರು ಗೋಷ್ಠಿಯಲ್ಲಿದ್ದರು.

ನಿನ್ನೆ ಸಂಜೆಯೇ ಮೂಡಿಗೆರೆಗೆ ಆಗಮಿಸಿದ ಸಚಿವರು, ಶಿಥಿಲಗೊಂಡಿರುವ ದೇವವೃಂದ–ಜಪಾವತಿ ಸೇತುವೆಯನ್ನು ವೀಕ್ಷಿಸಿದರು. ರಾತ್ರಿ ಮೂಡಿಗೆರೆಯಲ್ಲಿ ವಾಸ್ತವ್ಯ ಹೂಡಿದ್ದು, ಇಂದು ಬೆಳಿಗ್ಗೆ ಮಳೆಹಾನಿಯಾಗಿರುವ ರಸ್ತೆಗಳನ್ನು ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳೊಂದಿಗೆ ವೀಕ್ಷಿಸಿದರು.

# ಥಗ್ ಲೈಫ್ ಚಿತ್ರ ಬಿಡುಗಡೆಗೆ ಅವಕಾಶ ನೀಡಲ್ಲ : ಕರವೇ



**ದಾವಣಗೆರೆ:** ಕಮಲ್ ಹಾಸನ್ ಕ್ಷಮೆಯಾಚಿಸದಿದ್ದರೆ ಅವರ ಚಿತ್ರ ಬಿಡುಗ–ಡೆಗೆ ಬಿಡುವುದಿಲ್ಲ ಎಂದು ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾ ಘಟಕದ ಪದಾಧಿಕಾರಿಗಳು ನಗರದ ಗುರುಭವನ ಹತ್ತಿರ ಕಮಲ್ ಹಾಸನ್ ಭಾವಚಿತ್ರ ಸುಡುವ ಮೂಲಕ ಆಕ್ರೋಶ ವ್ಯಕ್ತಪಡಿಸಿದರು.

ಈ ವೇಳೆ ಮಾತನಾಡಿದ ಕರವೇ ಜಿಲ್ಲಾಧ್ಯಕ್ಷ ಎಂಎಸ್ ರಾಮೇಗೌಡ, ಚಲನಚಿತ್ರ ನಟ ಇತಿಹಾಸ ಗೊತ್ತಿಲ್ಲದೆ ಕನ್ನಡ ಅನ್ನ ತಿಂದು ದ್ರೋಹ ಬಗೆದಿದ್ದಾರೆ. ಕಮಲ್ ಹಾಸನ್ ಕೊನೆಗೂ ತನ್ನ ರಾಜಕೀಯ ಬುದ್ಧಿ ತೋರಿಸಿಬಿಟ್ಟಿದ್ದಾನೆ. ಖಾಸಗಿ ಕಾರ್ಯಕ್ರಮದಲ್ಲಿ ತಮಿಳು ಭಾಷೆಯಿಂದ ಕನ್ನಡ ಹುಟ್ಟಿದ್ದು ಎಂದು ಹೇಳಿಕೆ ನೀಡಿದ್ದಾನೆ. ಇಂಥ ಚಲನಚಿತ್ರ ನಟರನ್ನು ಕರ್ನಾಟಕದಿಂದ ಬಹಿಷ್ಕಾರ ಹಾಕಬೇಕು. ಆತನ ಚಿತ್ರಗಳು ಯಾವುದೇ ಕಾರಣಕ್ಕೂ ಕರ್ನಾಟಕದಲ್ಲಿ ಪ್ರದರ್ಶನಕ್ಕೆ ಅವಕಾಶ ಕಲ್ಪಿಸಿ ಕೊಡಬಾರದು ಎಂದರು.

ಈ ವಿಚಾರದಲ್ಲಿ ಕನ್ನಡ ಚಲನಚಿತ್ರ ವಾಣಿಜ್ಯ ಮಂಡಳಿಗೆ ಈಗಾಗಲೇ ರಾಜ್ಯಾಧ್ಯಕ್ಷರಾದ ಟಿಎ ನಾರಾಯಣಗೌಡರವರು ಮನವರಿಕೆ ಮಾಡಿಕೊಟ್ಟಿದ್ದಾರೆ. ಇದಕ್ಕೂ ಮೀರಿ ಚಲನಚಿತ್ರ ಪ್ರದರ್ಶನವಾದರೆ. ಅಂತ ಚಲನಚಿತ್ರ ಮಂದಿರಕ್ಕೆ ಮುತ್ತಿಗೆ ಹಾಕಿ ಚಿತ್ರ ಪ್ರದರ್ಶನವನ್ನು ನಿಲ್ಲಿಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ಅದೇ ಕಾರ್ಯಕ್ರಮದಲ್ಲಿ ಇದ್ದ ನಟ ಶಿವರಾಜಕುಮಾರ್ ಕಮಲ್ ಹೇಳಿಕೆಗೆ ವಿರೋಧ ಮಾಡದೆ ಇರುವುದು ತೀವ್ರ ಬೇಸರದ ಸಂಗತಿ. ಡಾ.ರಾಜಕುಮಾರ್ ಅವರ ಪುತ್ರನಾಗಿ ನಾಡು ದ್ರೋಹಿ ಹೇಳಿಕೆ ನೀಡಿದಾಗ ಪ್ರತಿರೋಧ ವ್ಯಕ್ತಪಡಿಸಬೇಕಾಗಿತ್ತು, ಆಗ ಶಿವರಾಜ್‌ಕುಮಾರ್ ಅವರನ್ನ ಮತ್ತೋರ್ವ ರಾಜಕುಮಾರಂತೆ ಕನ್ನಡಿಗರು ಗೌರವಿಸುತ್ತಿದ್ದರು. ಆದರೆ ಇಂದು ಹೇಳಿಕೆ ನೀಡಿ, ಶಿವರಾಜಕುಮಾರ್ ಅವರು ಒಂದು ರೀತಿಯಲ್ಲಿ ಕಮಲ್ ಹಾಸನ್ ಅವರ ಹೇಳಿಕೆಯನ್ನು ಸಮರ್ಥಿಸಿಕೊಳ್ಳುವ ರೀತಿಯಲ್ಲಿ ಚಲನಚಿತ್ರ ನಟರು ಹೇಳಿಕೆ ನೀಡುತ್ತಿರುವುದು ಕರ್ನಾಟಕ ರಕ್ಷಣಾ ವೇದಿಕೆ ತೀವ್ರವಾಗಿ ಖಂಡಿಸುತ್ತದೆ ಎಂದರು.

ಕರ್ನಾಟಕದಲ್ಲಿ ಕನ್ನಡಿಗರ ಮೇಲೆ ಉತ್ತರ ಭಾರತೀಯರ ಕಾಟ ಅವರಿಗೆ ತಕ್ಕ ಉತ್ತರ ಕನ್ನಡಿಗರ ನೀಡುತ್ತಾ ಬಂದಿದ್ದೇವೆ, ಇನ್ನೊಂದು ಕಡೆ ಕಾವೇರಿ ವಿಚಾರ ಬಂದಾಗ ತಮಿಳುನಾಡಿನಿಂದ ಹೋರಾಟ ನಡೆಸುವುದು ಕರ್ನಾಟಕಕ್ಕೆ ಅನಿವಾರ್ಯವಾಗಿದೆ. ಆದರೂ ಸಹ ಕನ್ನಡಿಗರು ದಕ್ಷಿಣ ಭಾರತದವರು ನಾವೆಲ್ಲ ಒಂದೇ ಎಂಬ ಭಾವನೆಯಲ್ಲಿ ಬದುಕುತ್ತಿದ್ದರೆ. ಇಂಥ ಮೂರ್ಖ ಕಮಲ್ ಹಾಸನ್ ಕರ್ನಾಟಕ ತಮಿಳುನಾಡು ನಡುವೆ ಬೆಂಕಿ ಹಚ್ಚಿದ್ದಾನೆ. ತಕ್ಷಣ ಈತನ ವಿರುದ್ಧ ಪೊಲೀಸ್ ಇಲಾಖೆ ಕ್ರಮ ಕೈಗೊಳ್ಳಬೇಕು. ರಾಜ್ಯ ಸರಕಾರ ಇವನ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು.

ಕರ್ನಾಟಕದಲ್ಲಿ ಯಾವುದೇ ಕಾರಣ–ಕ್ಕೂ ಆತನಿಗೆ ಪ್ರವೇಶ ಅವಕಾಶ ಕೊಡಬಾರದು, ಅವನ ಚಲನಚಿತ್ರಗಳು ಸಹ ಪ್ರದರ್ಶನವಾಗಲು 5 ರಂದು ಬಿಡುಗಡೆ ಆಗಲಿರುವ ಥಗ್ ಲೈಫ್ ಸಿನಿಮಾ ಬಿಡುಗಡೆಗೆ ಅವಕಾಶ ನೀಡುವುದಿಲ್ಲವೆಂದು ಕರ್ನಾಟಕ ರಕ್ಷಣಾ ವೇದಿಕೆ ಎಂದು ಎಚ್ಚರಿಕೆ ನೀಡಿದೆ. ಪ್ರತಿಭಟನೆಯಲ್ಲಿ ಬಸಮ್ಮ, ಮಂಜುಳ ಮಾಂತೇಶ್, ಮಂಜುಳಾ, ಗಣೇಶ್ ಶಾಂತಮ್ಮ, ಸಾಕಮ್ಮ, ರವಿ ಕುಮಾರ್, ಗಿರೀಶ್ ಕುಮಾರ್, ಗೋಪಾಲ್ ದೇವರಮನೆ, ಬಾಷಾ, ಸುರೇಶ್, ಚಂದ್ರು, ಮಹೇಶ್ವರಪ್ಪ, ವಾಸುದೇವ ರಾಯ್ಕರ್, ಈಶ್ವರ್, ಸಂತೋಷ್ ಜಿ .ಎಸ್., ನಾಗರಾಜ್ ತುಳಸಿ ರಾಮ್, ಪರಮೇಶ್, ಮಂಜು, ಧರ್ಮರಾಜ, ನಾಗರಾಜ್, ಆಟೋ ರಫಿಕ್, ಜಬಿಉಲ್ಲಾ ಪೈಲ್ವಾನ್, ಹರಿಹರ ತಾಲ್ಲೂಕು ಅಧ್ಯಕ್ಷ ರಾಜೇಶ್, ಇಮ್ತಿಯಾಜ್, ಶಶಿಕುಮಾರ್, ಮನ್ಸೂರ್ ಅಲಿ, ಚನ್ನಗಿರಿ ತಾಲ್ಲೂಕು ಅಧ್ಯಕ್ಷ ಮಲ್ಲನಾಯಕ್, ಬಸವರಾಜ್, ಕುಪೇಂದ್ರ ನಾಯಕ್, ಇನ್ನಿತರರು ಉಪಸ್ಥಿತರಿದ್ದರು.

## ಅಕ್ರಂಬಾಷಗೆ 'ಕರ್ನಾಟಕ ಭೀಷ್ಮ–2025' ಪ್ರಶಸ್ತಿ



**ದಾವಣಗೆರೆ:** ಈಚೆಗೆ ಕರ್ನಾಟಕ ರಾಜ್ಯ ಮಹಾಸಂಸ್ಥಾನ ಮೈಸೂರು ನಗರದ ಟೌನ್ ಹಾಲ್‌ನಲ್ಲಿ ನಡೆದ 13ನೇ ರಾಜ್ಯ ಮಟ್ಟದ ಪಂಜ ಕುಸ್ತಿ ಸ್ಪರ್ಧೆಯಲ್ಲಿ ದಾವಣಗೆರೆಯ ಡಿಎಆರ್ ಪೊಲೀಸ್ ಅಕ್ರಂಬಾಷ ಪೋಲೀಸ್ ಇಲಾಖೆಯ ವತಿಯಿಂದ ಭಾಗವಹಿಸಿ ಚಿನ್ನದ ಪದಕ ಪಡೆದಿರುವುದಷ್ಟೇ ಅಲ್ಲದೇ ಎಲ್ಲಾ ಸ್ಪರ್ಧೆಗಳಲ್ಲೂ ವಿಜೇತರಾಗಿ ಕರ್ನಾಟಕ ಭೀಷ್ಮ–2025 ಪ್ರಶಸ್ತಿಯನ್ನು ತಮ್ಮದಾಗಿಸಿಕೊಂಡಿದ್ದಾರೆ.

ರಾಜ್ಯದ ವಿವಿಧ ಜಿಲ್ಲೆಗಳಿಂದ ಸುಮಾರು 265 ಜನ ಪುರುಷ ಹಾಗು ಮಹಿಳಾ ಕ್ರೀಡಾಪಟುಗಳು ಈ ಸ್ಪರ್ಧೆಯಲ್ಲಿ ಭಾಗವಹಿಸಿದ್ದರು. 90 ಕೆಜಿ ವಿಭಾಗದಲ್ಲಿ ಬಲಗೈ ಮತ್ತು ಎಡಗೈ ಎರಡು ಸ್ಪರ್ಧೆಗಳಲ್ಲಿಯೂ ಸ್ಪರ್ಧಿಸಿ ಎರಡರಲ್ಲೂ ಚಿನ್ನದ ಪದಕವನ್ನು ಪಡೆದಿರುವ ಅಕ್ರಂಬಾಷ ಒಟ್ಟಾರೆ ಎಲ್ಲಾ ಸ್ಪರ್ಧೆಗಳಲ್ಲಿ ವಿಜೇತರಾಗಿದ್ದು, ಆಗಸ್ಟ್‌ನಲ್ಲಿ ಪಂಜಾಬ್ ರಾಜ್ಯದ ಲುಧಿಯಾನ ನಗರದಲ್ಲಿ ನಡೆಯಲಿರುವ ರಾಷ್ಟ್ರೀಯ ಪಂಜ ಕುಸ್ತಿ ಸ್ಪರ್ಧೆಗಳಿಗೆ ಆಯ್ಕೆಯಾಗಿದ್ದಾರೆ.

ಜಿಲ್ಲಾ ಪೊಲೀಸ್ ಅಧೀಕ್ಷಕಿ ಉಮಾ ಪ್ರಶಾಂತ್ ಹಾಗೂ ಡಿಎಆರ್ ಡಿವೈಎಸ್ಪಿ ಪಿ.ಬಿ. ಪ್ರಕಾಶ್, ಆರ್‌ಪಿಐ ಸೋಮಶೇಖರಪ್ಪ ಹಾಗೂ ಎಲ್ಲಾ ಪೊಲೀಸ್ ಅಧಿಕಾರಿ ಸಿಬ್ಬಂದಿಗಳು ಅಭಿನಂದಿಸಿದ್ದಾರೆ.

# ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ಇಂದು, ನಿಮ್ಮ ಆರೋಗ್ಯವು ಆರೋಗ್ಯಕರವಾಗಿರುತ್ತದೆ ಎಂದು ನಿರೀಕ್ಷಿಸಲಾಗಿದೆ. ದಿನದಲ್ಲಿ ನಂತರ ಹಣಕಾಸು ಪರಿಸ್ಥಿತಿಗಳು ಸುಧಾರಿಸುತ್ತವೆ. ಸಾಮಾಜಿಕ ಕಾರ್ಯಗಳಿಗೆ ಹಾಜರಾಗಲು ಅವಕಾಶಗಳಿರಬಹುದು ಹಾಗೂ ಇದು ನಿಮ್ಮನ್ನು ಪ್ರಭಾವಿ ವ್ಯಕ್ತಿಗಳ ಜೊತೆ ನಿಕಟ ಸಂಪರ್ಕ ಹೊಂದುವಂತೆ ಮಾಡಬಹುದು. ಅನಿರೀಕ್ಷಿತ ಪ್ರಣಯ ಪ್ರಸಂಗಗಳು ಇಂದು ಎದುರಾಗಬಹುದು.

### ವೃಷಭ ರಾಶಿ

ಸಂಜೆಯಲ್ಲಿ ವಿಶ್ರಾಂತಿ ತೆಗೆದುಕೊಳ್ಳಿ. ಹಣದ ಪ್ರಾಮುಖ್ಯತೆ ನಿಮಗೆ ಚೆನ್ನಾಗಿ ಗೊತ್ತಿದೆ, ಆದ್ದರಿಂದ ಇಂದು ನಿಮ್ಮ ಮೂಲಕ ಉಳಿಸಲಾಗಿರುವ ಹಣ ನಿಮ್ಮ ತುಂಬಾ ಕೆಲಸಕ್ಕೆ ಬರಬಹುದು ಮತ್ತು ನೀವು ಯಾವುದೇ ದೊಡ್ಡ ಸಮಸ್ಯೆಯಿಂದ ಹೊರಬರಬಹುದು. ಕುಟುಂಬದ ಸದಸ್ಯರೊಂದಿಗಿನ ಭಿನ್ನಾಭಿಪ್ರಾಯಗಳನ್ನು ಪರಿಹರಿಸಿಕೊಳ್ಳುವ ಮೂಲಕ .ನೀವು ನಿಮ್ಮ ಗುರಿಗಳನ್ನು ಸುಲಭವಾಗಿ ಸಾಧಿಸುತ್ತೀರಿ.

### ಮಿಥುನ ರಾಶಿ

ಕೆಲಸದಲ್ಲಿ ಹಿರಿಯರಿಂದ ಒತ್ತಡ ಮತ್ತು ಮನೆಯಲ್ಲಿ ಅಪಶ್ರುತಿ ನಿಮ್ಮ ಏಕಾಗ್ರತೆಗೆ ತೊಂದರೆ ತರಬಹುದು. ನಿಮಗೆ ತಿಳಿದ ಜನರ ಮೂಲಕ ಆದಾಯದ ಹೊಸ ಮೂಲಗಳು ಕಂಡುಬರುತ್ತವೆ. ಧರ್ಮಕಾರ್ಯಗಳು ಅಥವಾ ಶುಭಕರವಾದ ಸಮಾರಂಭಗಳನ್ನು ಮನೆಯಲ್ಲಿ ನಡೆಸಬೇಕು. ನಿಮ್ಮ ಕತ್ತಲೆಯ ಜೀವನ ನಿಮ್ಮ ಸಂಗಾತಿಗೆ ಒತ್ತಡ ತರಬಹುದು.

### ಕರ್ಕ ರಾಶಿ

ಜನರನ್ನು ನಿಮ್ಮಿಷ್ಟದಂತೆ ನಡೆದುಕೊಳ್ಳುವಂತೆ ಒತ್ತಾಯಿಸಬೇಡಿ. ಇತರರ ಬಯಕೆ ಮತ್ತು ಆಸಕ್ತಿಯ ಬಗ್ಗೆ ಯೋಚಿಸಿದಲ್ಲಿ ನಿಮಗೆ ಅನಿಯಮಿತ ಸಂತೋಷ ಬರುತ್ತದೆ. ಇಂದಿನವರೆಗೂ ಅಗತ್ಯವಿಲ್ಲದೆ ಹಣವನ್ನು ಖರ್ಚು ಮಾಡುತ್ತಿದ್ದ ಜನರು, ಇಂದು ಅವರು ತನ್ನನ್ನು ನಿಯಂತ್ರಿಸಬೇಕು ಮತ್ತು ಹಣವನ್ನು ಉಳಿಸಬೇಕು. ಸ್ನೇಹಿತರ ಸಮಸ್ಯೆಗಳು ನಿಮಗೆ ಕೆಟ್ಟದೆನಿಸುವಂತೆ ಮಾಡಬಹುದು. ಇತರರ ಹಸಕ್ಷೇಪ ವ್ಯಾಜ್ಯವುಂಟುಮಾಡುತ್ತದೆ.

### ಸಿಂಹ ರಾಶಿ

ದೇಹದ ನೋವು ಮತ್ತು ಒತ್ತಡ ಸಂಬಂಧಿತ ಸಮಸ್ಯೆಗಳನ್ನು ತಳ್ಳಿಹಾಕಲು ಸಾಧ್ಯವಿಲ್ಲ. ಆಹ್ವಾನಿಸದ ಯಾವುದೇ ಅತಿಥಿ ಇಂದು ಮನೆಗೆ ಬರಬಹುದು ಆದರೆ ಈ ಅತಿಥಿಯ ಅದೃಷ್ಟದ ಕಾರಣದಿಂದ ಇಂದು ನೀವು ಆರ್ಥಿಕ ಲಾಭವನ್ನು ಪಡೆಯಬಹುದು. ನೀವು ಮಕ್ಕಳೊಡನೆ ಸ್ವಲ್ಪ ಸಮಯ ಕಳೆಯಬೇಕು ಮತ್ತು ಅವರಿಗೆ ಒಳ್ಳೆಯ ಮೌಲ್ಯಗಳನ್ನು ಕಲಿಸಬೇಕು ಮತ್ತು ತಮ್ಮ ಜವಾಬ್ದಾರಿಗಳನ್ನು ಅರ್ಥ ಮಾಡಿಕೊಳ್ಳಲು ಕಲಿಸಬೇಕು. ನೀವು ಇಂದು ಪ್ರೀತಿ ಮಾಲಿನ್ಯವನ್ನು ಹರಡುತ್ತೀರಿ.

### ಕನ್ಯಾ ರಾಶಿ

ಒಂದು ಲಾಭಕರ ದಿನ ಮತ್ತು ನೀವು ಧೀರ್ಘಕಾಲದ ಅನಾರೋಗ್ಯಕ್ಕೆ ಪರಿಹಾರ ಹುಡುಕಲು ಸಾಧ್ಯವಾಗಬಹುದು. ಯಾವುದೇ ಆಪ್ತ ಸಂಬಂಧಿಕರ ಬೆಂಬಲದಿಂದ ನೀವು ನಿಮ್ಮ ವ್ಯಾಪಾರದಲ್ಲಿ ಉತ್ತಮವಾಗಿ ಮಾಡಬಹುದು. ಇದು ನಿಮಗೆ ಆರ್ಥಿಕ ಲಾಭವನ್ನು ನೀಡುತ್ತದೆ. ಸ್ನೇಹಿತರ ಸಮಸ್ಯೆಗಳು ನಿಮಗೆ ಕೆಟ್ಟದೆನಿಸುವಂತೆ ಮಾಡಬಹುದು. ಪ್ರೀತಿಪಾತ್ರರಲ್ಲದೇ ನಿಮ್ಮ ಸಮಯ ಕೆಣಟಿಜಜಜಿಟಿಜಜಲ್ಲುವುದು ಕಷ್ಟ.

### ತುಲಾ ರಾಶಿ

ಮನೆಯಲ್ಲಿ ಕೆಲಸ ಮಾಡುವಾಗ ವಿಶೇಷ ಎಚ್ಚರ ವಹಿಸಿ. ಮನೆ ಬಳಕೆಯ ವಸ್ತುಗಳ ಯಾವುದೇ ಅಸಡ್ಡೆಯ ಬಳಕೆ ನಿಮಗೆ ಸಮಸ್ಯೆ ಉಂಟುಮಾಡಬಹುದು. ಈ ರಾಶಿಚಕ್ರದ ದೊಡ್ಡ ಉದ್ಯಮಿಗಳು ಇಂದು ತುಂಬಾ ಯೋಚಿಸಿ ಅರ್ಥಮಾಡಿಕೊಂಡು ಹಣದ ಹೂಡಿಕೆ ಮಾಡುವ ಅಗತ್ಯವಿದೆ. ಮನೆಯಲ್ಲಿ ಸಮಸ್ಯೆಗಳು ಉದ್ಭವವಾಗುವಂತೆ ತೋರುತ್ತಿರುವುದರಿಂದ ನಿಮ್ಮ ಮಾತುಗಳ ಬಗ್ಗೆ ಎಚ್ಚರ ವಹಿಸಿ.

### ವೃಶ್ಚಿಕ ರಾಶಿ

ನಿಮ್ಮ ಇತರರನ್ನು ಶ್ಲಾಘಿಸುವ ಮೂಲಕ ಅವರ ಯಶಸ್ಸನ್ನು ಆನಂದಿಸುವ ಸಾಧ್ಯತೆಗಳಿವೆ. ಹಣಕ್ಕೆ ಸಂಬಂಧಿಸಿದ ಯಾವುದೇ ವಿಷಯ ನ್ಯಾಯಾಲಯ ಪ್ರಕರಣದಲ್ಲಿ ಸಿಲುಕಿಕೊಂಡಿದ್ದರೆ, ಇಂದು ನೀವು ಅದರಲ್ಲಿ ವಿಜಯವನ್ನು ಪಡೆಯಬಹುದು ಮತ್ತು ನೀವು ಹಣದ ಲಾಭವನ್ನು ಪಡೆಯಬಹುದು. ನಿಮ್ಮ ಗೌಪ್ಯ ಮಾಹಿತಿಯನ್ನು ನಿಮ್ಮ ಸಂಗಾತಿಯ ಜೊತೆ ಹಂಚಿಕೊಳ್ಳುವ ಮೊದಲು ಯೋಚಿಸಿ.

.

### ಧನು ರಾಶಿ

ಬಿಡುವಿರದ ಕಾರ್ಯಕ್ರಮದ ಹೊರತಾಗಿಯೂ ಆರೋಗ್ಯ ಚೆನ್ನಾಗಿರುತ್ತದೆ. ಯಾರ ಹತ್ತಿರವಾದರು ಸಾಲವನ್ನು ತೆಗೆದುಕೊಂಡಿರುವ ಜನರು, ಇಂದು ಯಾವುದೇ ಪರಿಸ್ಥಿತಿಯಲ್ಲೂ ಸಾಲವನ್ನು ಮರುಪಾವತಿಸಬೇಕಾಗುತ್ತದೆ, ಇದರಿಂದ ಆರ್ಥಿಕ ಪರಿಸ್ಥಿತಿ ಸ್ವಲ್ಪ ದುರ್ಬಲವಾಗುತ್ತದೆ.

ಇಂದು ನೀವು ಮನೆಯಲ್ಲಿ ಸೂಕ್ಷ್ಮ ಸಮಸ್ಯೆಯನ್ನು ಬಗೆಹರಿಸಲು ನಿಮ್ಮ ಬುದ್ಧಿವಂತಿಕೆ ಮತ್ತು ಪ್ರಭಾವವನ್ನು ಬಳಸಬೇಕಾಗುತ್ತದೆ. ಅನಗತ್ಯ ಅನುಮಾನ ಸಂಬಂಧಗಳನ್ನು ಹದಗೆಡಿಸುವ ಕೆಲಸ ಮಾಡುತ್ತದೆ. ನೀವು ಸಹ ನಿಮ್ಮ ಪ್ರೀತಿಪಾತ್ರರ ಮೇಲೆ ಅನುಮಾನ ಮಾಡಬಾರದು.

### ಮಕರ ರಾಶಿ

ನೀವು ಧೀರ್ಘಕಾಲೀನ ಅನಾರೋಗ್ಯದ ಚೇತರಿಸಿಕೊಳ್ಳುತ್ತೀರಿ. ಆದರೆ ಸ್ವಾರ್ಥಿಗಳಾದ, ಮುಂಗೋಪಿ ವ್ಯಕ್ತಿಯ ಸಹವಾಸವನ್ನು ತಪ್ಪಿಸಿ – ಅವರು ನಿಮ್ಮ ಮೇಲೆ ಒತ್ತಡ ಹಾಕಬಹುದು–ಇದು ಸಮಸ್ಯೆಯನ್ನು ಮತ್ತಷ್ಟು ಉಲ್ಬಣಗೊಳಿಸಬಹುದು. ವಿಳಂಬಿತ ಪಾವತಿಗಳನ್ನು ಮಾಡುತ್ತಿದ್ದ ಹಾಗೆ ಹಣದ ಪರಿಸ್ಥಿತಿ ಸುಧಾರಿಸುತ್ತದೆ. ಕುಟುಂಬದ ಸದಸ್ಯರು ನಿಮ್ಮಜೀವನದಲ್ಲಿ ಒಂದು ವಿಶೇಷ ಸ್ಥಾನವನ್ನು ಹೊಂದಿರುತ್ತಾರೆ. ಪ್ರಣಯದ ನಡತೆಗಳು ಫಲ ನೀಡುವುದಿಲ್ಲ.

### ಕುಂಭ ರಾಶಿ

ನಿಮ್ಮ ಜಗಳಗಂಟ ನಡವಳಿಕೆ ನಿಮ್ಮ ಸಂಬಂಧವನ್ನು ಶಾಶ್ವತವಾಗಿ ಹಾಳು ಮಾಡಬಹುದಾದ್ದರಿಂದ ಅದನ್ನು ನಿಯಂತ್ರಣದಲ್ಲಿಡಿ. ನೀವು ತೆರೆದ ಮನಸ್ಸನ್ನು ಹೊಂದುವ ಮೂಲಕ ಮತ್ತು ಯಾರಾದರ ವಿರುದ್ಧ ಪೂರ್ವಾಗ್ರಹವನ್ನು ಕೈಬಿಡುವ ಮೂಲಕ ಇದರಿಂದ ಹೊರಬರಬಹುದು. ನಿಮ್ಮ ಖರ್ಚುಗಳನ್ನು ನಿಯಂತ್ರಿಸಲು ಮತ್ತು ಕೇವಲ ಅಗತ್ಯವಾದ ವಸ್ತುಗಳ ಮಾತ್ರ ಇಂದು ಖರೀದಿಸಲು ಪ್ರಯತ್ನಿಸಿ.

### ಮೀನ ರಾಶಿ

ನಿಮ್ಮ ಶಾಂತತೆಯನ್ನು ಕಾಪಾಡಿಕೊಳ್ಳಲು ಸಹಾಯ ಮಾಡುವ ಚಟುವಟಿಕೆಗಳಲ್ಲಿ ನಿಮ್ಮನ್ನು ತೊಡಗಿಸಿಕೊಂಡಿರಿ. ವಿಳಂಬಿತ ಪಾವತಿಗಳನ್ನು ಮಾಡುತ್ತಿದ್ದ ಹಾಗೆ ಹಣದ ಪರಿಸ್ಥಿತಿ ಸುಧಾರಿಸುತ್ತದೆ. ನಿಮ್ಮ ಕುಟುಂಬಕ್ಕೆ ಸೂಕ್ತ ಸಮಯ ನೀಡಿ. ನೀವು ಅವರ ಸಲುವಾಗಿ ಕಾಳಜಿ ವಹಿಸುತ್ತೀರೆಂದು ಅವರಿಗೆ ಅರ್ಥವಾಗಲಿ. ಅವರೊಂದಿಗೆ ನಿಮ್ಮ ಗುಣಮಟ್ಟದ ಸಮಯ ಕಳೆಯಿರಿ

. ದೂರು ನೀಡಲು ಯಾವುದೇ ಅವಕಾಶ ನೀಡಬೇಡಿ. ನಿಮ್ಮ ಪ್ರೇಮಿಗೆ ಇಷ್ಟವಿಲ್ಲದ ಉಡುಪುಗಳು ಅವರಿಗೆ ಮುಜುಗರ ಉಂಟುಮಾಡಬಹುದಾದ್ದರಿಂದ ಅವುಗಳನ್ನು ಧರಿಸಬೇಡಿ. ವಿಚಾರಗೋಷ್ಠಿಗಳು ಮತ್ತು ಪ್ರದರ್ಶನಗಳು ನಿಮಗೆ ಹೊಸ ಜ್ಞಾನ ಮತ್ತು ಸಂಪರ್ಕಗಳನ್ನು ಒದಗಿಸುತ್ತವೆ.

## ರಜೆ ಕಳೆದು ಇಂದಿನಿಂದ ಶಾಲಾರಂಭ: ಕೊರೊನಾ ಛಾಯೆಯಲ್ಲೇ ಮಕ್ಕಳ ಸ್ವಾಗತಕ್ಕೆ ಸಜ್ಜು

**ದಾವಣಗೆರೆ:** ಮಜೆಯ ಬೇಸಿಗೆ ರಜೆ ಕಳೆದು, ಶಾಲೆಗಳು ಇಂದಿನಿಂದ ಆರಂಭವಾಗುತ್ತಿದ್ದು, ಜಿಲ್ಲೆಯ ಶಾಲೆಗಳು ಮಕ್ಕಳನ್ನು ಸ್ವಾಗತಿಸಲು ಶಿಕ್ಷಣ ಇಲಾಖೆ ಸೂಚನೆಯಂತೆ ಸರ್ವಸನ್ನದ್ಧವಾಗಿದೆ.

ಹಿಂದಿನ ದಿನ ಗುರುವಾರವೇ ಮುಖ್ಯ ಶಿಕ್ಷಕರು, ಶಿಕ್ಷಕರು ಹಾಗೂ ಸಿಬ್ಬಂದಿ ವರ್ಗದವರು ಶಾಲೆಗೆ ತೆರಳಿ ಶಾಲಾ ಆವರಣ, ತರಗತಿಗಳು, ಬಿಸಿಯೂಟದ ಅಡುಗೆ ಮನೆ, ನೀರಿನ ಸಂಪು, ಶೌಚಾಲಯಗಳ ಸ್ವಚ್ಛತೆಯನ್ನು ಮಾಡಿಸಿ, ಮಕ್ಕಳನ್ನು ಶಾಲೆಗೆ ಸ್ವಾಗತಿಸಲು ತಳಿರು ತೋರಣಗಳು, ಬಣ್ಣದ ಬಂಟಿಂಗ್ಸ್, ರಂಗೋಲಿ ಹಾಕುವುದು ಹೀಗೆ ವೈವಿಧ್ಯಮಯ ರೀತಿಯಲ್ಲಿ ಶಾಲೆಯನ್ನು ಶೃಂಗಾರಗೊಳಿಸುತ್ತಿದ್ದು, ಮಕ್ಕಳನ್ನು ಶಾಲೆಯತ್ತ ಆಕರ್ಷಿಸುವ ಪ್ರಯತ್ನ ಮಾಡಿವೆ.

ಇಲಾಖೆಯ ಸೂಚನೆಯಂತೆ ಮಕ್ಕಳಿಗೆ ಇಂದು ಸಿಹಿಯೂಟ ತಯಾರಾಗುತ್ತಿದೆ. ರಜೆ ಮುಗಿಸಿ ಬಂದಿರುವ ಮಕ್ಕಳಿಗೆ ಮೊದಲ ದಿನವೇ ಪೌಷ್ಟಿಕ ಆಹಾರವಾದ ಮೊಟ್ಟೆಯನ್ನು ನೀಡುವಂತೆ ತಿಳಿಸಲಾಗಿದೆ.

ಮುಂಗಾರು ಬೇಗನೆ ಪ್ರವೇಶಿಸಿರುವ ಕಾರಣ ಜಿಲ್ಲೆಯಲ್ಲಿ ಜಿಟಿ ಜಿಟಿ ಮಳೆ ಇದೆ. ಬಿಸಿಲು ಮುಗಿದು ಮಳೆ ಆರಂಭವಾದ ಕಾರಣ ವಾತಾವರಣ ಬದಲಾವಣೆಗೆ ಮಕ್ಕಳಲ್ಲಿ ಶೀತ, ಕೆಮ್ಮು, ಜ್ವರ ಬಾಧಿಸುತ್ತಿದ್ದು, ಕೋವಿಡ್ ಗುಮ್ಮನಿಂದ ಪೋಷಕರಲ್ಲಿ ಆತಂಕ ಮನೆ ಮಾಡಿದೆ. ಕೋವಿಡ್ ಪಸರಿಸುತ್ತಿರುವ ಹಿನ್ನೆಲೆಯಲ್ಲಿ ಬಿಸಿಯೂಟ ತಯಾರಕರು ಹಾಗೂ ಸಹಾಯಕರ ಆರೋಗ್ಯ ತಪಾಸಣೆ ನಡೆಸಿ, ಕರೆದುಕೊಳ್ಳುವಂತೆ ಇಲಾಖೆ ತಿಳಿಸಿದೆ.



**ಮಕ್ಕಳಲ್ಲಿ ಶೀತ, ಜ್ವರ ಅಥವ ಕೋವಿಡ್ ಲಕ್ಷಣಗಳು ಇದ್ದಲ್ಲಿ ಪೋಷಕರು ಮಕ್ಕಳು ಹುಷಾರಾಗುವವರೆಗೆ ಶಾಲೆಗೆ ಕಳುಹಿಸದಿರುವಂತೆ ಮನವಿ ಮಾಡಲಾಗಿದೆ.**

**ಶಾಲೆ ಆರಂಭವಾಗುವ ದಿನ ಹತ್ತಿರ ಬಂದಂತೆ ಮಕ್ಕಳ ಸ್ಕೂಲ್ ಬ್ಯಾಗ್, ಶೂಸ್, ಸಾಕ್ಸ್, ಪುಸ್ತಕ, ಲೇಖನ ಸಾಮಾಗ್ರಿಗಳ ಖರೀದಿ ಜೋರಾಗಿದ್ದು, ಪುಸ್ತಕ ಮಳಿಗೆಗಳು ಗ್ರಾಹಕರಿಂದ ತುಂಬಿ ತುಳುಕುತ್ತಿವೆ.**

## ಜೂನ್ 1 ರಂದು ಅತಿಥಿ ಶಿಕ್ಷಕರು, ಉಪನ್ಯಾಸಕರಿಗೆ ಪ್ರವೇಶ ಪರೀಕ್ಷೆ

**ದಾವಣಗೆರೆ;** 2025–26ನೇ ಸಾಲಿಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖಾ ವತಿಯಿಂದ ಕಾರ್ಯನಿರ್ವಹಿಸುತ್ತಿರುವ ವಸತಿಶಾಲೆ, ಕಾಲೇಜು ಮತ್ತು ಮಾದರಿ ಶಾಲೆ, ಪದವಿ ಪೂರ್ವ ಕಾಲೇಜುಗಳಲ್ಲಿ ತಾತ್ಕಾಲಿಕ ಅತಿಥಿ ಶಿಕ್ಷಕರು, ಅತಿಥಿ ಉಪನ್ಯಾಸಕರಿಗೆ ಜೂನ್ 1 ರಂದು ನಗರದ ಅಕ್ಕಮಹಾದೇವಿ ರಸ್ತೆಯಲ್ಲಿರುವ ಎ.ವಿ.ಕಮಲಮ್ಮ ಮಹಿಳಾ ಕಾಲೇಜು, ಇಲ್ಲಿ ಪರೀಕ್ಷೆಯನ್ನು ನಡೆಸಲಾಗುವುದು.

ಅತಿಥಿ ಶಿಕ್ಷಕರು, ಅತಿಥಿ ಉಪನ್ಯಾಸಕರ ಹುದ್ದೆಗಳಿಗೆ ಅರ್ಜಿ ಸಲ್ಲಿಸಿರುವ ಅರ್ಹ ಅಭ್ಯರ್ಥಿಗಳು ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಕಚೇರಿಯಲ್ಲಿ ಪರೀಕ್ಷೆಯ ಪ್ರವೇಶ ಪತ್ರವನ್ನು ಪಡೆದು ಪರೀಕ್ಷೆಗೆ ಹಾಜರಾಗುವಂತೆ ಇಲಾಖೆ ಅಧಿಕಾರಿ ತಿಳಿಸಿದ್ದಾರೆ.

## ಎನ್ ಎಸ್ ಪಿ ಪೋರ್ಟನಲ್ಲಿ ಒಟಿಆರ್ ಸಂಖ್ಯೆಯನ್ನು ಸೃಜಿಸಿ

**ದಾವಣಗೆರೆ;** ಪ್ರಸಕ್ತ ಸಾಲಿನಿಂದ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಂದ ಮೆಟ್ರಿಕ್ ಪೂರ್ವ 9 ಮತು 10 ನೇ ತರಗತಿ ಹಾಗೂ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ವಿದ್ಯಾರ್ಥಿವೇತನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ. ರಾಷ್ಟ್ರೀಯ ಸ್ಕಾಲರ್‌ಶಿಪ್ ಪೋರ್ಟನಲ್ಲಿ ಒಟೈಂ ಪಾವರ್ಡ್ ಸೃಜನೆ ಮಾಡಿ ನೊಂದಣಿ ಮಾಡಿದ ನಂತರ ರಾಜ್ಯ ವಿದ್ಯಾರ್ಥಿ ವೇತನದ ತಂತ್ರಾಂಶದಲ್ಲಿ ಎನ್ ಎಸ್ ಪಿ ಅರ್ಜಿ ಸಲ್ಲಿಸಬೇಕೆಂದು ಚನ್ನಗಿರಿಯ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ತಿಳಿಸಿದ್ದಾರೆ.

## ಅನ್ನ ನೀಡುವ ರೈತರಿಗಾಗಿ ಏರ್ಪಡಿಸಿರುವ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಶ್ಲಾಘನೀಯ : ಬಿ.ವೈ.ರಾಘವೇಂದ್ರ

**ಶಿವಮೊಗ್ಗ:** ರೈತರು ವರ್ಷವಿಡೀ ಶ್ರಮಪಟ್ಟು ಎಲ್ಲರಿಗೂ ಅನ್ನ ನೀಡುತ್ತಾರೆ. ಇಂತಹ ಪುಣ್ಯದ ಕೆಲಸ ಮಾಡುತ್ತಿರುವ ರೈತರಿಗಾಗಿ ಏರ್ಪಡಿಸಿರುವ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಶ್ಲಾಘನೀಯ ಎಂದು ಸಂಸದರಾದ ಬಿ.ವೈ.ರಾಘವೇಂದ್ರ ನುಡಿದರು.

ಕೆಳದಿ ಶಿವಪ್ಪನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಐಸಿಎಆರ್– ಕೃಷಿ ವಿಜ್ಞಾನ ಕೇಂದ್ರ, ಶಿವಮೊಗ್ಗ ಇವರ ವತಿಯಿಂದ ಕೃಷಿ ಇಲಾಖೆ ಮತ್ತು ಕೃಷಿ ಸಂಬಂಧಿತ ಅಭಿವೃದ್ಧಿ ಇಲಾಖೆಗಳ ಸಹಯೋಗದೊಂದಿಗೆ 'ವಿಕಸಿತ ಕೃಷಿ ಸಂಕಲ್ಪ ಅಭಿಯಾನ'ದ ಅಂಗವಾಗಿ ಹೊಳಲೂರು ಗ್ರಾಮದಲ್ಲಿ ಏರ್ಪಡಿಸಿರುವ ಮುಂಗಾರು ಹಂಗಾಮಿನ ಕೃಷಿ ಚಟುವಟಿಕೆಗಳ ಕಾರ್ಯಾಗಾರಕ್ಕೆ ಗುರುವಾರ ಅವರು ಚಾಲನೆ ನೀಡಿ ಮಾತನಾಡಿದರು.

ನಮ್ಮ ದೇಶದಲ್ಲಿ ಶೇ.5 ರಷ್ಟು ಸರ್ಕಾರಿ ನೌಕರರು, ಶೇ.20 ರಷ್ಟು ಖಾಸಗಿ ನೌಕರರಿದ್ದರೆ ಉಳಿದ ಶೇ.75 ಅನ್ನದಾತ ರೈತಾಪಿ ವರ್ಗವಿದೆ. ಇಂತಹ ರೈತರಿಗಾಗಿ ಪ್ರಧಾನ ಮಮತ್ರಿಗಳು ಮಂಗಾರು ಹಂಗಾಮಿಗೆ ಆಧುನಿಕ ಕೃಷಿ ಚಟುವಟಿಕೆಗಳ ಕುರಿತು ರೈತರಿಗೆ ಮಾಹಿತಿ ನಿಡಲು ವಿಜ್ಞಾನಿಗಳನ್ನು ದೇಶದಾದ್ಯಮತ ರೈತರ ಕಡೆ ಕಳುಹಿಸಬೇಕೆಂಬ ಉದ್ದೇಶವನ್ನು ಹೊಂದಿರುವುದು ಕೃಷಿ ವಲಯದಲ್ಲಿ ಬೃಹತ್ ಮಟ್ಟದ ಹೆಜ್ಜೆಯಾಗಿದೆ. ಈ ನಿಟ್ಟಿನಲ್ಲಿ ಕೃಷಿ ಸಂಶೋಧನೆ ಮತ್ತು ಶಿಕ್ಷಣ ಇಲಾಖೆ, ಭಾರತೀಯ ಕೃಷಿ ಸಂಶೋಧನಾ ಮಂಡಳಿ, ಭಾರತ ಸರ್ಕಾರದ ಕೃಷಿ ಮತ್ತು ರೈತ ಕಲ್ಯಾಣ ಸಚಿವಾಲಯದ ಕೃಷಿ ಮತ್ತು ರೈತರ ಕಲ್ಯಾಣ ಇಲಾಖೆ, ಶಿವಮೊಗ್ಗದ ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಿಗಳ ವಿಶ್ವವಿದ್ಯಾಲಯ, ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿಗಳನ್ನು ಒಳಗೊಂಡ ತಂಡವು ಹೊಳಲೂರು ಗ್ರಾಮಕ್ಕೆ ಬಂದು ರೈತರಿಗೆ ಮಾಹಿತಿ ನೀಡುತ್ತಿದ್ದಾರೆ ಎಂದರು.




ಕೇಂದ್ರ ಸರ್ಕಾರ ಸುಮಾರು 1.27 ಲಕ್ಷ ಸಾವಿರ ಕೋಟಿ ಅನುದಾನ ನೀಡಿ, ರೈತರಿಗೆ ಸಹಾಯ ಮಾಡುತ್ತಿದ್ದು ಸುಮಾರು 27 ಲಕ್ಷ ಸಾವಿರ ರೈತರಿಗೆ ಮಣ್ಣು ಆರೋಗ್ಯ ಚೀಟಿ ನೀಡಿದೆ. ರೂ.2500 ಲಕ್ಷಗಳನ್ನು ಬೀಜ ಅಭಿವೃದ್ಧಿ ಮಾಡಲು ಮೀಸಲಿಡಲಾಗುತ್ತಿದೆ. ನೈಸರ್ಗಿಕ ಕೃಷಿ, ಪಿಎಂ ಕಿಸಾನ್ ಸಮ್ಮಾನ್ ನಿಧಿ, ಕಿಸಾನ್ ಕ್ರೆಡಿಟ್ ಕಾರ್ಡ್, ಗೊಬ್ಬರ ಸಬ್ಸಿಡಿ, ಕೃಷಿಯಲ್ಲಿ ಡ್ರೋನ್ ಬಳಕೆಯಂತರ ಯೋಜನೆಗಳನ್ನು ರೂಪಿಸಿ, ರೈತರಿಗೆ ನೆರವಾಗುತ್ತಿದೆ. ಈ ವಿಕಸಿತ ಕೃಷಿ ಸಂಕಲ್ಪ ಅಭಿಯಾನದಿಂದ ರೈತರು ಇನ್ನಷ್ಟು ಉತ್ಪಾದನೆ ಮಾಡಲು ಸಹಾಯವಾಗಿದೆ ಎಂದು ತಿಳಿಸಿದರು.

ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ.ಆರ್.ಸಿ.ಜಗದೀಶ್ ಮಾತನಾಡಿ, ಈ ಅಭಿಯಾನದಲ್ಲಿ ಸುಮಾರು 18000 ರೈತರಿಗೆ ನೇರವಾಗಿ ಮಾಹಿತಿ ನೀಡಲಾಗುತ್ತಿದೆ. ನಮ್ಮ ದೇಶದ ಶ್ರಮಜೀವಿ ರೈತ ಬಾಂಧವರಿಗಾಗಿ ಈ ಮಂಗಾರು ಹಂಗಾಮಿನಲ್ಲಿ ವಿಶ್ವವಿದ್ಯಾಲಯದ ಕೃಷಿ ಕಾಲೇಜು ಮತ್ತು ಕೃಷಿ ಸಂಬಂಧಿತ ಅಭಿವೃದ್ಧಿ ಇಲಾಖೆಗಳ ಸಹಯೋಗದೊಂದಿಗೆ ಮುಂಗಾರು ಪೂರ್ವ ಕೃಷಿ ಚಟುವಟಿಕೆಗಳ ಕುರಿತ ಮಾಹಿತಿ, ಸಮಗ್ರ ಕೃಷಿ ಪದ್ದತಿ, ಜಾನುವಾರು ಸಾಕಾಣಿಕೆ, ಕೋಳಿ ಸಾಕಾಣಿಕೆ, ಮೀನುಗಾರಿಕೆ, ಜೇನು ಸಾಕಾಣಿಕೆ ಇತ್ಯಾದಿಗಳನ್ನೊಳಗೊಂಡಂತೆ ರೈತರಿಗೆ ಅರಿವು ಮೂಡಿಸಲಾಗುವುದು. ಮಣ್ಣಿನ ಆರೋಗ್ಯ ಕಾರ್ಡ್ ಆಧಾರಿತ ಸಮತೋಲಿತ ರಸಗೊಬ್ಬರಗಳ ಬಳಕೆ, ಬೆಳೆಗಳ ಆಯ್ಕೆ, ಸುಧಾರಿತ ತಳಿಗಳು, ಬೀಜೋಪಚಾರ ಮತ್ತು ಕೀಟ ಹಾಗೂ ರೋಗಗಳ ನಿರ್ವಹಣೆ ಕುರಿತು ಮಾಹಿತಿ ನೀಡಲಾಗುತ್ತಿದೆ. ರೈತರು ಈ ಕಾರ್ಯಕ್ರಮದ ಉಪಯೋಗ ಪಡೆಯಬೇಕೆಂದು ತಿಳಿಸಿದರು.

ಕಾಯಕ್ರಮದಲ್ಲಿ ಹೊಳಲೂರು ಗ್ರಾ.ಪಂ ಅಧ್ಯಕ್ಷೆ ರಮ್ಯ ಮಧು, ಕೃಷಿ ಇಲಾಖೆ ಜಂಟಿ ನಿರ್ದೇಶಕ ಡಾ.ಕಿರಣ್ ಕುಮಾರ್, ಕೆವಿಕೆ ಮುಖ್ಯಸ್ಥ ಡಾ.ಸುನಿಲ್ ಸಿ, ಕೃಷಿ ವಿವಿ ವಿಸ್ತರಣಾ ನಿರ್ದೇಶಕ , ಡಾ.ಜಿ.ಕೆ ಗಿರಿಜೇಶ್, ತೋಟಗಾರಿಕೆ ಉಪನಿರ್ದೇಶಕಿ ಸವಿತಾ ಜಿ, ಮೀನುಗಾರಿಕೆ ಇಲಾಖೆ ಜಂಟಿ ನಿರ್ದೇಶಕ ಡಾ.ಗಿರೀಶ್ ಓ, ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಉಪ ನಿರ್ದೇಶಕ ಡಾ.ಬಾಬುರತ್ನ ಎ, ಡಾ.ಎಸ್.ಪ್ರದೀಪ್, ಡಾ.ಬಿ.ಸಿ ಹನುಮಂತಸವಾಮಿ, ದೇವರಾಜ್, ಉಲ್ಲಾಸ್ ಮೆಸ್ತ, ರೈತರ ಉತ್ಪಾದಕ ಸಂಸ್ಥೆಗಳ ಸದಸ್ಯರು, ಸ್ವಸಹಾಯ ಸಂಘದ ಸದಸ್ಯರುಗಳು, ರೈತರು, ಗ್ರಾಮಸ್ಥರು ಪಾಲ್ಗೊಂಡಿದ್ದರು.

## ಲೋಕೋಪಯೋಗಿ ಸಚಿವರಿಂದ ಮಳೆ ಹಾನಿ ಪ್ರದೇಶಗಳ ವೀಕ್ಷಣೆ

**ಹಾಸನ ;** ಲೋಕೋಪಯೋಗಿ ಸಚಿವರಾದ ಸತೀಶ್ ಜಾರಕಿಹೊಳಿ ಅವರುಇಂದುರಾಷ್ಟ್ರೀಯ ಹೆದ್ದಾರಿ 75 ರಲ್ಲಿ ಸಕಲೇಶಪುರತಾಲ್ಲೂಕಿನ ಆನೆ ಮಹಲ್ ಹಾಗೂ ದೊಡ್ಡತಪ್ಪಲು ಪ್ರದೇಶದಲ್ಲಿ ಮಳೆಯಿಂದ ಹಾನಿಯಾಗಿರುವ ರಸ್ತೆಗಳು ಹಾಗೂ ಮಣ್ಣು ಕುಸಿತವಾಗಿರುವುದನ್ನು ವೀಕ್ಷಣೆ ಮಾಡಿದರು.

ಕೆಲಸ ವೇಗವಾಗಿ ಆಗಬೇಕಿತ್ತು, ಹಿಂದಿನ ಬಾರಿಗೂ ಈಗಿಗೂ ಗಮನಿಸಿದರೆ ಕೆಲಸ ಆಗಿದೆಎರಡು–ಮೂರು ತಿಂಗಳಲ್ಲಿ ಕೆಲಸ ಪೂರ್ಣಗೊಳಿ ಸಲಾಗುತ್ತದೆಎಂದುಅಧಿಕಾರಿಗಳು ಹೇಳುತ್ತಿದ್ದಾರೆ.ಸಂಚಾರಕ್ಕೆ ತೊಂದರೆಯಾಗದಂತೆ ಎಚ್ಚರಿಕೆವಹಿಸಿ ಕೆಲಸ ಮಾಡುವಂತೆ ಅಧಿಕಾರಿಗಳಿಗೆ ತಿಳಿಸಿದರು.

ಕರ್ನಾಟಕರಾಜ್ಯ ಗೃಹ ಮಂಡಳಿ ಅಧ್ಯಕ್ಷರು ಹಾಗೂ ಶಾಸಕರಾದಕೆ.ಎಂ.ಶಿವಲಿಂಗೇಗೌಡಅವರು ಮಾತನಾಡಿ ಮಣ್ಣು ಕುಸಿಯದಂತೆ ಹಂತ ಹಂತವಾಗಿತಡೆಗೋಡೆ ನಿರ್ಮಾಣ ಮಾಡಬೇಕು ಈ ನಿಟ್ಟಿನಲ್ಲಿ ಅಧಿಕಾರಿಗಳು ಕ್ರಮ ವಹಿಸುವಂತೆ ತಿಳಿಸಿದರು.

ಸದರಿಕಾಮಗಾರಿಗೆ ಸಂಬಂಧಿಸಿದಂತೆ ಭೂಸ್ವಾಧೀನಕ್ಕೆ ಈಗಾಗಲೇ ಪರಿಹಾರ ನೀಡಲಾಗಿದೆ.ಮನೆ ಮಾಲೀಕರು ಎಚ್ಚರಿಕೆವಹಿಸಿ ಮನೆಗಳನ್ನು ತೆರವುಗೊಳಿಸುವ ಕಾರ್ಯವಾಗಬೇಕುಎಂದುಜಿಲ್ಲಾಧಿಕಾರಿಅವರು ತಿಳಿಸಿದರು.



ಸಂಸದರಾದ ಶ್ರೇಯಸ್ ಪಟೇಲ್, ಶಾಸಕರಾದ ಸಿಮೆಂಟ್ ಮಂಜು,ಹೆಚ್.ಕೆ.ಸುರೇಶ್, ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಾಹಕಅಧಿಕಾರಿ ಬಿ.ಆರ್. ಪೂರ್ಣಿಮಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೊಹಮ್ಮದ್ ಸುಜೀತ,ಉಪ ವಿಭಾಗಾಧಿಕಾರಿ ಶೃತಿ, ರಾಷ್ಟ್ರೀಯ ಹೆದ್ದಾರಿಅಭಿವೃದ್ಧಿ ಪ್ರಾಧಿಕಾರದಯೋಜನಾ ನಿರ್ದೇಶಕರಾದ ಪ್ರವೀಣ್ ಮತ್ತಿತರರ ಅಧಿಕಾರಿಗಳು ಹಾಜರಿದ್ದರು.

## ತಾಳೆ ಬೆಳೆ ವಿಸ್ತರಣೆಗೆ ಸಹಾಯಧನ

**ಚಿಕ್ಕಮಗಳೂರು;** ತೋಟಗಾರಿಕೆ ಇಲಾಖೆಯ ವತಿಯಿಂದ 2025–26ನೇ ಸಾಲಿಗೆ ರಾಷ್ಟ್ರೀಯ ಖಾದ್ಯ ತೈಲ ಅಭಿಯಾನ ತಾಳೆಬೆಳೆ ಅಭಿವೃದ್ಧಿ ಯೋಜನೆಯಡಿ ತಾಳೆ ಬೆಳೆ ಬೆಳೆಯುವ ಪ್ರದೇಶ ವಿಸ್ತರಣೆ ಮಾಡಲು ಅವಕಾಶವಿದ್ದು, ಎಲ್ಲಾ ವರ್ಗದ ರೈತರಿಗೂ ಸಹಾಯಧನ ಲಭ್ಯವಿದೆ. ಈ ಕುರಿತು ಹೆಚ್ಚಿನ ಮಾಹಿತಿಗಾಗಿ ರೈತರು ತಮ್ಮ ಹೋಬಳಿಯ ಸಹಾಯಕ ತೋಟಗಾರಿಕೆ ಅಧಿಕಾರಿಗಳನ್ನು ಸಂಪರ್ಕಿಸಬಹುದು. ತಾಳೆ ಬೆಳೆ ಪ್ರದೇಶ ವಿಸ್ತರಣೆ ಮಾಡಲು ಫಲಾನುಭವಿಗಳು ಹೊಸ ಪಹಣಿ ಪ್ರತಿ, ಆಧಾರ್ ಕಾರ್ಡ್ ಜೆರಾಕ್ಸ್ ಪ್ರತಿ, ಬ್ಯಾಂಕ್ ಪುಸ್ತಕ ಪ್ರತಿ – ಇವುಗಳನ್ನು ಒದಗಿಸಬೇಕಾಗಿದ್ದು, ಸಂಬಂಧೀಸಿದ ರೈತರು ಆಯಾ ಹೋಬಳಿಯ ಸಹಾಯಕ ತೋಟಗಾರಿಕೆ ಅಧಿಕಾರಿಗಳಾದ ಅರುಣ್ ವಿ.ಎ. (ವಸ್ತಾರೆ ಹೋಬಳಿ)–8277038990, ನಟೇಶ್ ಕುಮಾರ್ ಹೆಚ್.ಎ. (ಜಾಗರ ಹೋಬಳಿ)–7899048055, ಪೂಜಾ ಡಿ.ಎ. (ಆವತಿ ಹೋಬಳಿ) – 89705503690, ಸೀಮಾ ಹೆಚ್.ಎ. (ಖಾಂಡ್ಯ ಹೋಬಳಿ) – 9380956582, ಭಾನುಶ್ರೀ (ಆಲ್ದೂರು ಹೋಬಳಿ) – ಇವರನ್ನು ಸಂಪರ್ಕಿಸಬಹುದು ಎಂದು ನಗರದ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿ.ಪಂ.) ಪ್ರಕಟವಣೆಯಲ್ಲಿ ತಿಳಿಸಿದ್ದಾರೆ.ಮೂಡಿಗೆರೆ ಹಾಗೂ ಕಳಸ ತಾಲ್ಲೂಕು ರೈತರಿಗೆ ಸಹ ತೋಟಗಾರಿಕೆ ಇಲಾಖೆ ವತಿಯಿಂದ ತಾಳೆ ಬೆಳೆ ಅಭಿವೃದ್ಧಿ ಯೋಜನೆಯಡಿ ತಾಳೆ ಬೆಳೆ ಪ್ರದೇಶ ವಿಸ್ತರಣೆಗೆ ಸಂಬಂಧಿಸಿದಂತೆ ಸಹಾಯಧನ ಒದಗಿಸಲಾಗುತ್ತಿದ್ದು, ರೈತರು ತೋಟಗಾರಿಕೆ ಇಲಾಖೆಯ ಮೂಡಿಗೆರೆ ಕಚೇರಿಯನ್ನು ಸಂಪರ್ಕಿಸಬಹುದು ಎಂದು ಮೂಡಿಗೆರೆಯ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿ.ಪಂ.) ತಿಳಿಸಿದ್ದಾರೆ.

## ಅಂತರ್ ಇಲಾಖಾ ಸಮನ್ವಯ ಸಮಿತಿ ಸಭೆ



**ಗದಗ :** ಗದಗ ಜಿಲ್ಲಾಧಿಕಾರಿಗಳ ಸಭಾ ಭವನದಲ್ಲಿ ಮಂಗಳವಾರ ಡೆಂಗೀ ದೈನಂದಿನ ನಿಗಾವಣೆಗಾಗಿ "ಅಂತರ್ ಇಲಾಖಾ ಸಮನ್ವಯ ಸಮಿತಿಯ ಸಭೆ"ಯು ಜಿಲ್ಲಾಧಿಕಾರಿಗಳಾದ ಸಿ ಎನ್. ಶ್ರೀಧರ್ ಅವರ ಅಧ್ಯಕ್ಷತೆಯಲ್ಲಿ ಜರುಗಿತು.

ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಅವರು ಮಾತನಾಡಿ ಡೆಂಗೀ ರೋಗವನ್ನು ನಿಯಂತ್ರಿಸಲು ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲು ಆರೋಗ್ಯ ಇಲಾಖೆಯೊಂದಿಗೆ ವಿವಿಧ ಇಲಾಖೆಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕೆಂದು ಕರೆ ನೀಡಿದರು.


ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್ ಅವರು ಮಾತನಾಡಿ ಪ್ರತಿ ವರ್ಷವು ವಾಡಿಕೆಯಂತೆ ಮಳೆಗಾಲ ಪ್ರಾರಂಭವಾಗಿದ್ದು, ಸೊಳ್ಳೆಗಳು ಹೆಚ್ಚಿನ ಪ್ರಮಾಣದಲ್ಲಿ ಉತ್ಪತ್ತಿಗೊಳ್ಳುತ್ತವೆ, ಡೆಂಗೀ ನಿವಾರಣೆ ನಿಟ್ಟಿನಲ್ಲಿ ಸಮುದಾಯ ಪಾತ್ರವು ಮಹತ್ವದಾಗಿದ್ದಾಗಿದೆ ಎಂದು ತಿಳಿಸಿದರು.

ಜಿಲ್ಲಾ ನೋಡಲ್ ಅಧಿಕಾರಿಗಳಾದ ಡಾ. ಶಿವಕುಮಾರ ಕೆ ಮಾನಕರ್ ಅವರು ಮಾತನಾಡಿ ಆರೋಗ್ಯ ಇಲಾಖೆಯ ಸಿಬ್ಬಂದಿ ವರ್ಗದವರು ಲಾರ್ವಾ ಸಮೀಕ್ಷೆ ಕೈಗೊಳ್ಳಲು ಬಂದಾಗ ಸಾರ್ವಜನಿಕರು ಸಹಕರಿಸಬೇಕೆಂದು ತಿಳಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್ ನೀಲಗುಂದ ಸರ್ವರಿಗೂ ಸ್ವಾಗತಿಸಿ ಜಿಲ್ಲೆಯಲ್ಲಿ ಡೆಂಗೀ ನಿಯಂತ್ರಣ ಕೈಗೊಳ್ಳಲು ಗುಣಮಟ್ಟದ ಲಾರ್ವಾ ಸಮೀಕ್ಷೆ ಹಾಗೂ ಜ್ವರ ಸಮೀಕ್ಷೆ ಮಾಡಿ ಖಚಿತ ಪ್ರಕರಣಗಳು ಕಂಡು ಬಂದಲ್ಲಿ ಸೂಕ್ತ ಚಿಕಿತ್ಸೆ ನೀಡಿ, ಸೂಕ್ತ ಆರೈಕೆ ಹಾಗೂ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲು ಸಭೆಯಲ್ಲಿ ತಿಳಿಸಿದರು.

ಈ ಸಂದರ್ಭದಲ್ಲಿ ಹೆಚ್ಚುವರಿ ಜಿಲ್ಲಾ ಪೊಲೀಸ ವರಿಷ್ಟಾದಿಕಾರಿ ಎಂ.ಬಿ.ಸಂಕದ, ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಅಧಿಕಾರಿಗಳು, ಕಾರ್ಯಕ್ರಮ ಅನುಷ್ಠಾನ ಅಧಿಕಾರಿಗಳು, ತಾಲ್ಲೂಕಾ ಆರೋಗ್ಯಾಧಿಕಾರಿಗಳು, ಸಹಾಯಕ ಕೀಟಶಾಸ್ತ್ರಜ್ಞರು ಹಾಗೂ ಆರೋಗ್ಯ ಇಲಾಖೆಯ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು. ಜಿಲ್ಲಾ ಆರೋಗ್ಯ ಶಿಕ್ಷಣ ಅಧಿಕಾರಿ ರೋಪಸೇನ ಚವ್ಹಾಣ ವಂದಿಸಿದರು.

## ಸವಿತಾ ಪತ್ತಿನ ಸಹಕಾರ ಸಂಘದಿಂದ ಸಮಾಜ ಬಾಂಧವರ ಆರ್ಥಿಕ ಸ್ಥಿತಿ ಸುಧಾರಣೆ : ಮಂಜುನಾಥ ಅಬ್ಬಿಗೇರಿ



**ಗದಗ:** ಗದಗ ಜಿಲ್ಲೆಯಲ್ಲಿ ಸವಿತಾ ಸಮಾಜ ಬಾಂಧವರ ಆರ್ಥಿಕ ಸ್ಥಿತಿ' ಸುಧಾರಿಸಲು ಹಾಗೂ ಆರ್ಥಿಕವಾಗಿ ಬಲಾಡ್ಯರಾಗಲು ಹಿರಿಯರ ಆಶಯದಂತೆ ಮತ್ತು ಗದಗ ಜಿಲ್ಲಾ ಸವಿತಾ ಸಮಾಜದ ಜಿಲ್ಲಾಧ್ಯಕ್ಷ ಕೃಷ್ಣಾ ಹಡಪದ ನೇತೃತ್ವದ ನಿಯೋಗದ ಸಂಕಲ್ಪದಂತೆ ಗದಗ ಜಿಲ್ಲಾ ಸವಿತಾ ಸಮಾಜದಿಂದ ಸವಿತಾ ಸಮಾಜ (ಹಿಂದುಳಿದ ವರ್ಗ) ಪತ್ತಿನ ಸಹಕಾರ ಸಂಘ ಸ್ಥಾಪನೆಗೊಂಡು ಇಂದು ಬಹುತೇಕ ಜನರಿಗೆ ಅನಕೂಲ ಮಾಡುತ್ತ ಕಾರ್ಯ ನಿರ್ವಹಣೆ ಮಾಡುತ್ತಿರುವುದು ಮತ್ತು ನೂತನವಾಗಿ ಕಾರ್ಯಾಲಯ ಉದ್ಘಾಟನೆಯಾಗಿದ್ದು ಸಂತೋಷದ ವಿಚಾರ ಎಂದು ಕಿತ್ತೂರ ಕರ್ನಾಟಕ ದಿನ ಪತ್ರಿಕೆಯ ಪ್ರಧಾನ ಸಂಪಾದಕರು ಹಾಗೂ ಹಿರಿಯರಾದ ಮಂಜುನಾಥ ಬಸಪ್ಪ ಅಬ್ಬಿಗೇರಿ ಸರ್ ಅವರು ಹರ್ಷ ವ್ಯಕ್ತಪಡಿಸಿದರು.

ಗದಗ ಜಿಲ್ಲಾ ಸವಿತಾ ಸಮಾಜದಿಂದ ಸ್ಥಾಪನೆಗೊಂಡ ಸವಿತಾ ಸಮಾಜ (ಹಿಂದುಳಿದ ವರ್ಗ) ಪತ್ತಿನ ಸಹಕಾರ ಸಂಘ ಹಾಗೂ ಗದಗ ಜಿಲ್ಲಾ ಸವಿತಾ ಸಮಾಜದ ಕಾರ್ಯಾಲಯಕ್ಕೆ ಬೇಟಿ ನೀಡಿ ಸವಿತಾ ಸಮಾಜದ ಗೌರವ ಸನ್ಮಾನ ಸ್ವೀಕರಿಸಿ ಶ್ರೀ ಲಕ್ಷ್ಮಿದೇವಿಯ ಕೃಫಾ ಆಶೀರ್ವಾದ ಸದಾ ಸವಿತಾ ಸಮಾಜ ಕೈ ಕರುಣಿಸಲಿ ಎಂದು ಶ್ರೀ ಲಕ್ಷ್ಮಿದೇವಿ ತಾಯಿಯಲ್ಲಿ ಪ್ರಾರ್ಥಿಸಿ ಮಾತನಾಡಿದರು

ಈ ಸಂದರ್ಭದಲ್ಲಿ ಸವಿತಾ ಸಮಾಜದ ಹಿರಿಯರಾದ ಪರಶುರಾಮ (ಬಜ್ಜು) ರಾಂಪೂರ. ಹನಮಂತಪ್ಪ ರಾಂಪೂರ. ಪಾಂಡು ಕಾಳೆ. ಯಲ್ಲಪ್ಪ ರಾಯಚೂರ. ಬಸವರಾಜ ಗೌಡರ್. ಗದಗ ಜಿಲ್ಲಾ ಸವಿತಾ ಸಮಾಜದ ಜಿಲ್ಲಾಧ್ಯಕ್ಷರು ಹಾಗೂ ಸವಿತಾ ಸಮಾಜ (ಹಿಂದುಳಿದ ವರ್ಗ) ಪತ್ತಿನ ಸಹಕಾರ ಸಂಘದ ಸಂಸ್ಥಾಪಕರಾದ ಕೃಷ್ಣಾ ಎಚ್ ಹಡಪದ. ಗದಗ ಸವಿತಾ ಸಮಾಜ ಸುಧಾರಣಾ ಸಂಘದ ಉಪಾಧ್ಯಕ್ಷರಾದ ಜಂಮ್ಮಣ್ಣ ಕಡಮೂರ. ಯುವ ನಾಯಕರಾದ ಕೃಷ್ಣಾ ಬುದೂರ. ಗಣೇಶ ಕಡಮೂರ. ವಿನಾಯಕ ರಾಯಚೂರ ವೆಂಕಟೇಶ ಕೊಟೇಕಲ್ಲ. ಹಾಗೂ ಸಮಾಜದ ಇತರರು ಉಪಸ್ಥಿತರಿದ್ದರು.

### ವಿಶೇಷ ಲಸಿಕಾ ಅಭಿಯಾನ

# ಮಗುವಿನ ವಯಸ್ಸಿಗನುಸಾರವಾಗಿ ತಪ್ಪದೇ ಲಸಿಕೆ ಹಾಕಿಸಿ: ಡಾ.ಯಲ್ಲಾ ರಮೇಶ್ ಬಾಬು

**ಬಳ್ಳಾರಿ:** ಜಿಲ್ಲೆಯಲ್ಲಿ ಮೇ 26 ರಿಂದ 31 ರವರೆಗೆ ಒಂದು ವಾರ ವಿಶೇಷ ಲಸಿಕಾ ಅಭಿಯಾನ ನಡೆ–ಯುತ್ತಿದ್ದು, ಮಗುವಿನ ಬಾಲ್ಯದಲ್ಲಿ ಬರಬಹುದಾದಂತಹ 12 ಮಾರಕ ರೋಗಗಳನ್ನು ತಡೆಗಟ್ಟಲು ಮಗುವಿನ ವಯಸ್ಸಿಗನುಸಾರವಾಗಿ ತಪ್ಪದೇ ಲಸಿಕೆ ಹಾಕಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಕರೆ ನೀಡಿದರು.




ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ನಗರ ಪ್ರಾಥಮಿಕ ಆರೋಗ್ಯ ಕೇಂದ್ರ ಮಿಲ್ಲರ್‌ಪೇಟೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಶೇಷಾವಲಿ ದರ್ಗಾ ಬಡಾವಣೆಯ ಅಂಗನವಾಡಿ ಕೇಂದ್ರದಲ್ಲಿ ಮೇ 31 ರ ವರೆಗೆ ನಡೆಯುವ ವಿಶೇಷ ಲಸಿಕಾ ಅಭಿಯಾನದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಮಗುವಿನ ಜನನದ ನಂತರ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಬಾಲಕ್ಷಯ ತಡೆಗಟ್ಟಲು ಬಿಸಿಜಿ, ಪೋಲಿಯೋ ರೋಗ ತಡೆಗಟ್ಟಲು ಪೋಲಿಯೋ ಹನಿ, ಕಾಮಾಲೆ ರೋಗ ತಡೆಗಟ್ಟಲು ಹೆಪಟೈಟೀಸ್ ಹಾಗೂ ನವಜಾತ ಶಿಶುವಿನ ದೇಹದ ಒಳಗಡೆ ಆಂತರಿಕ ರಕ್ತಸ್ರಾವ ಸಾಧ್ಯತೆ ತಡೆಗಟ್ಟಲು ವಿಟಮಿನ್–ಕೆ ಚುಚ್ಚುಮದ್ದನ್ನು ಮೊದಲ ದಿನವೇ ನೀಡಲಾಗುತ್ತಿದೆ. ನಂತರ ವಯಸ್ಸಿಗೆ ಅನುಸಾರವಾಗಿ ಮಾರಕ ರೋಗಗಳನ್ನು ತಡೆಗಟ್ಟಲು ಒಂದು ವರ್ಷದೊಳಗಿನ ಎಲ್ಲಾ ಲಸಿಕೆಗಳನ್ನು ಉಚಿತವಾಗಿ ಹಾಕಲಾಗುತ್ತಿದೆ. ಪಾಲಕರು ತಮ್ಮ ಹತ್ತಿರದ ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿ ಮಗುವಿಗೆ ಹಾಕಿಸಬೇಕಾದ ಲಸಿಕೆಗಳನ್ನು ತಪ್ಪದೇ ಹಾಕಿಸಬೇಕು ಎಂದರು.

ಈಗಾಗಲೇ ಪ್ರತಿ ಗುರುವಾರ ಎಲ್ಲಾ ಗ್ರಾಮ, ವಾರ್ಡ್‌ಗಳಲ್ಲಿ ಲಸಿಕೆ ಹಾಕಲಾಗುತ್ತಿದ್ದು, ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಪ್ರತಿ ದಿನ ಲಸಿಕೆ ಹಾಕಲಾಗುತ್ತಿದೆ. ಮಗು ಲಸಿಕೆ ವಂಚಿತರಾಗಬಾರದೆಂಬ ಹಿನ್ನಲೆಯಲ್ಲಿ ಸರ್ಕಾರವು ಏಪ್ರಿಲ್, ಮೇ, ಜೂನ್ ಮೂರು ತಿಂಗಳ ಕಾಲ ನಿಗಧಿತ ಅವಧಿಯಲ್ಲಿ ಲಸಿಕೆ ಪಡೆಯದ ಹಾಗೂ ಒಂದು ಲಸಿಕೆಯನ್ನು ಪಡೆಯದೇ ಇರುವ ಮಕ್ಕಳನ್ನು ಗುರ್ತಿಸಿ ಲಸಿಕೆ ಹಾಕುವ ಕಾರ್ಯವನ್ನು ಮೇ 26 ರಿಂದ 31 ರ ವರೆಗೆ ಮಾಡಲಾಗುತ್ತಿದೆ ಎಂದು ತಿಳಿಸಿದರು.

ಇತ್ತೀಚೆಗೆ ಕೆಲವು ಪ್ರದೇಶಗಳಲ್ಲಿ ಕಂಡುಬರುತ್ತಿರುವ ದಡಾರ ಪ್ರಕರಣಗಳ ನಿಯಂತ್ರಣಕ್ಕಾಗಿ ಮಗುವಿನ ವಯಸ್ಸು 9 ತಿಂಗಳು ತುಂಬಿದ ನಂತರ ಹಾಗೂ ಒಂದುವರೆ ವರ್ಷ ವಯಸ್ಸಿನಲ್ಲಿ ಎರಡು ಬಾರಿ ಲಸಿಕೆ ಹಾಕಿಸುವ ಮೂಲಕ ದಡಾರ ತಡೆಗಟ್ಟಬಹುದು ಎಂದರು.

ಮಗುವಿನ ಒಂದುವರೆ ತಿಂಗಳು, ಎರಡುವರೆ ತಿಂಗಳು ಹಾಗೂ ಮೂರುವರೆ ತಿಂಗಳ ವಯಸ್ಸಿನಲ್ಲಿ ಕ್ರಮವಾಗಿ ಗಂಟಲು ಮಾರಿ, ನಾಯಿಕೆಮ್ಮು, ಧನುರ್ವಾಯು ರೋಟ ವೈರಸ್, ಹೆಚ್ ಇನ್‌ಫ್ಲ್ಯೂಯೆಂಜಾ, ಕಾಮಾಲೆಗಾಗಿ ಪೆಂಟಾವೈಲೆಂಟ್ ಲಸಿಕೆ, ರೋಟಾವೈರಸ್ ಅತಿಸಾರಬೇದಿಗೆ ನಿಮೋಕಾಕಲ್ ಲಸಿಕೆ ಹಾಕಲಾಗುತ್ತದೆ. ಅದೇರೀತಿಯಾಗಿ ಮಗುವಿನ ಒಂಬತ್ತು ತಿಂಗಳು ವಯಸ್ಸು ತುಂಬಿದ ನಂತರ ಮೆದುಳು ಜ್ವರ ರೋಗಕ್ಕೆ ಜಾಪನೀಸ್ ಎನ್ಸ್‌ಫಲಿಟಿಸ್ ಲಸಿಕೆ, ದಡಾರ ರೂಬೇಲ್ಲಾ ರೋಗಕ್ಕೆ ಮಿಸಲ್ಸ್ ರೂಬೆಲ್ಲಾ ಲಸಿಕೆ, ಹಾಗೂ ಸಂಜೆ–ಯ ಹೊತ್ತು ಕಂಡುಬರುವ ಇರುಳುಗಣ್ಣು ರೋಗಕ್ಕೆ ವಿಟಾಮಿನ್–ಎ ಅನ್ನಾಂಗ ದ್ರಾವಣ ನೀಡಲಾಗುತ್ತಿದ್ದು, ತಪ್ಪದೇ ಹಾಕಿಸಬೇಕು ಎಂದು ಅವರು ಹೇಳಿದರು.

ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ಹನುಮಂತಪ್ಪ ಅವರು ಮಾತನಾಡಿ, ಲಸಿಕೆ ನೀಡುವಲ್ಲಿ ಸಾರ್ವಜನಿಕರ ಅಭಿಪ್ರಾಯ ಮತ್ತು ಅನಿಸಿಕೆಗಳನ್ನು ಕ್ರೂಢೀಕರಿಸಿ ತಪ್ಪು ನಂಬಿಕೆಗಳ ಕುರಿತು ಜಾಗೃತಿ ನೀಡಲಾಗುತ್ತಿದ್ದು, ಗಾಳಿಸುದ್ದಿ ನಂಬಿ ಲಸಿಕೆ ಬೇಡವೆನ್ನುವವರಿಗೆ ವ್ಯಾಪಕವಾಗಿ ಮನೆ ಭೇಟಿ ಮೂಲಕ ಗುಂಪು ಸಭೆ, ಸಮುದಾಯ ಮುಖಂಡರ ಮೂಲಕ ಮಾಹಿತಿ ಒದಗಿಸಿ ಅವರಲ್ಲಿಯ ತಪ್ಪು ನಂಬಿಕೆಗಳನ್ನು ಹೋಗಲಾಡಿಸಿ ಎಲ್ಲಾ ಲಸಿಕೆಗಳನ್ನು ಹಾಕಿಸಬೇಕು ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ವಿಶ್ವ ಆರೋಗ್ಯ ಸಂಸ್ಥೆ ಬಳ್ಳಾರಿ ವಲಯ ಪ್ರತಿನಿಧಿ ಆರ್.ಎಸ್.ಶ್ರೀಧರ್, ಉಪಸ್ಥಿತರಿದ್ದರು.

# ತುಂಗಾ ಡ್ಯಾಂನಿಂದ 1 ಸಾವಿರ ಕ್ಯೂಸೆಕ್ ನೀರು ಹೊರಕ್ಕೆ



**ಶಿವಮೊಗ್ಗ:** ಮಲೆನಾಡು ಭಾಗದಲ್ಲಿ ಮಳೆ ಮುಂದುವರೆದಿದ್ದು, ಹಲವೆಡೆ ಆರ್ಭಟಿಸುತ್ತಿದೆ. ಈ ನಡುವೆ ಶಿವಮೊಗ್ಗ ತಾಲೂಕಿನ ಗಾಜನೂರು ತುಂಗಾ ಜಲಾಶಯ ಭರ್ತಿಯಾಗಿದೆ. ನೀರಿನ ಸಂಗ್ರಹ 588.24 ಮೀಟರ್ ಗರಿಷ್ಠ ಮಟ್ಟ ತಲುಪಿದ ಹಿನ್ನೆಲೆಯಲ್ಲಿ, ಮೇ 25 ರ ಬೆಳಿಗ್ಗೆಯಿಂದ ಡ್ಯಾಂನಿಂದ ನೀರು ಹೊರ ಹರಿಸಲಾಗುತ್ತಿದೆ.

ಡ್ಯಾಂನಿಂದ 1 ಸಾವಿರ ಕ್ಯೂಸೆಕ್ ನೀರನ್ನು ಪವರ್ ಹೌಸ್ ಮೂಲಕ ನದಿಗೆ ಹೊರ ಬಿಡಲಾಗುತ್ತಿದೆ. ಸದ್ಯ ಡ್ಯಾಂನ ಒಳಹರಿವು 5 ಸಾವಿರ ಕ್ಯೂಸೆಕ್ ಇದೆ. ಜಲಾನಯನ ಪ್ರದೇಶ ವ್ಯಾಪ್ತಿಯಲ್ಲಿ ಉತ್ತಮ ಮಳೆಯಾಗುತ್ತಿರುವುದರಿಂದ, ಒಳಹರಿವಿನ ಪ್ರಮಾಣದಲ್ಲಿ ಏರಿಕೆ ಕಂಡುಬರುತ್ತಿದೆ' ಎಂದು ಡ್ಯಾಂ ವ್ಯಾಪ್ತಿಯ ಎಂಜಿನಿಯರ್ ತಿಪ್ಪನಾಯ್ಕ್ ಸುದ್ದಿಗಾರರಿಗೆ ಮಾಹಿತಿ ನೀಡಿದರು.

ತುಂಗಾ ಜಲಾಶಯವು 3.24 ಟಿಎಂಸಿ ನೀರು ಸಂಗ್ರಹಣಾ ಸಾಮರ್ಥ್ಯ ಹೊಂದಿದೆ. ಅತ್ಯಂತ ಕಡಿಮೆ ವ್ಯಾಪ್ತಿ, ವಿಸ್ತೀರ್ಣ ಹೊಂದಿದೆ. ಪ್ರತಿ ಮಳೆಗಾಲದ ವೇಳೆ, ಶಿವಮೊಗ್ಗ ಜಿಲ್ಲೆಯಲ್ಲಿ ಮೊದಲಿಗೆ ಭರ್ತಿಯಾಗುವ ಜಲಾಶಯವಾಗಿದೆ.

ಏರಿಕೆ : ಮತ್ತೊಂದೆಡೆ, ರಾಜ್ಯದ ಪ್ರಮುಖ ಜಲವಿದ್ಯುತ್ ಉತ್ಪಾದನಾ ಕೇಂದ್ರವಾದ ಲಿಂಗನಮಕ್ಕಿ ಜಲಾಶಯದ ಒಳಹರಿವಿನಲ್ಲಿಯೂ ಏರಿಕೆ ಕಂಡುಬಂದಿದೆ. ಭಾನುವಾರದ ಬೆಳಿಗ್ಗೆಯ ಮಾಹಿತಿಯಂತೆ, ಡ್ಯಾಂನ ಒಳಹರಿವು 10,954 ಕ್ಯೂಸೆಕ್ ಇದೆ. ಡ್ಯಾಂನ ನೀರಿನ ಮಟ್ಟ 1764 (ಗರಿಷ್ಠ ಮಟ್ಟ : 1819) ಅಡಿಯಿದೆ.

ಭರ್ಜರಿ ಮಳೆ : ಪಶ್ಚಿಮಘಟ್ಟ ವ್ಯಾಪ್ತಿಯಲ್ಲಿ ಮಳೆಯ ಆರ್ಭಟ ಜೋರಾಗಲಾರಂಭಿಸಿದೆ. ಚಕ್ರಾದಲ್ಲಿ 197 ಮಿ.ಮೀ (ಮಿಲಿ ಮೀಟರ್) ಮಳೆಯಾಗಿದೆ. ಮಾಣಿ 129 ಮಿ.ಮೀ, ಯಡೂರು 100 ಮಿ.ಮೀ, ಹುಲಿಕಲ್ 179 ಮಿ.ಮೀ, ಮಾಸ್ತಿಕಟ್ಟೆ 154 ಮಿ.ಮೀ ಹಾಗೂ ಸಾವೇಹಕ್ಲುವಿನಲ್ಲಿ 184 ಮಿ.ಮೀ ಮಳೆಯಾಗಿದೆ.

# ಕಳಸದಲ್ಲಿ ಮೆಸ್ಕಾಂ ಜನಸಂಪರ್ಕ ಸಭೆ

**ಚಿಕ್ಕಮಗಳೂರು, ಮೇ 30:** ಮೆಸ್ಕಾಂನ ಕಳಸ ವಿಭಾಗದ ಜನಸಂಪರ್ಕ ಸಭೆಯನ್ನು ಜೂನ್ 2 ರಂದು ಬೆಳಿಗ್ಗೆ 11 ಗಂಟೆಗೆ ಕಳಸ ಮೆಸ್ಕಾಂ ಉಪವಿಭಾಗ ಕಚೇರಿಯಲ್ಲಿ ಮೆಸ್ಕಾಂ ಅಧೀಕ್ಷಕ ಇಂಜಿನಿಯರ್‌ರವರ ಅಧ್ಯಕ್ಷತೆಯಲ್ಲಿ ನಡೆಸಲಾಗುವುದು.

ಸಾರ್ವಜನಿಕರು ಈ ಸಭೆಯಲ್ಲಿ ಭಾಗವಹಿಸುವಂತೆ ಕಳಸ ಮೆಸ್ಕಾಂ ಕಾರ್ಯ ಮತ್ತು ಪಾಲನಾ ಉಪವಿಭಾಗದ ಸಹಾಯಕ ಕಾರ್ಯ ನಿರ್ವಾಹಕ ಇಂಜಿನಿಯರ್‌ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಜ್ಯದಲ್ಲಿ ಹಿಟ್ಲರ್ ಆಡಳಿತ: ಜೋಶಿ ಕಿಡಿ

**ಬೆಂಗಳೂರು :** ರಾಜ್ಯದಲ್ಲಿ ಹಿಟ್ಲರ್ ಆಡಳಿತ ಜಾರಿಗೆ



ಬಂದಿದ್ದೇಯೇ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಕಿಡಿಕಾರಿದ್ದಾ–ರೆ. ರಾಜ್ಯ ಕಾಂಗ್ರೆಸ್ ಸರ್ಕಾರದ ಬಗ್ಗೆ ತಪ್ಪು ಹಾಗೂ ತಿರುಚಿದ ಮಾಹಿತಿ, ಸುಳ್ಳು ಸಂಗತಿ ಅಳವಡಿಸಿ ಬಿಜೆಪಿ ಸುಳ್ಳು ಪ್ರಚಾರ ಮಾಡಿದೆ ಎಂದು ಕಾಂಗ್ರೆಸ್ ಆರೋಪಿಸಿದ ಬೆನ್ನಲ್ಲೇ ಜೋಷಿ ಅವರಿಂದ ಈ ಹೇಳಿಕೆ ಹೊರಬಿದ್ದಿದೆ.

ಬಿಜೆಪಿ ವಿರುದ್ಧ ಮಾನನಷ್ಟ ಮೊಕದ್ದಮೆ ಹೂಡಲು ರಾಜ್ಯ ಸರ್ಕಾರ ಒಳಾಡಳಿತ ಇಲಾಖೆ ಅಧಿಸೂಚನೆ ಹೊರಡಿಸುವುದಕ್ಕೆ ಆಕ್ರೋಶ ವ್ಯಕ್ತಪಡಿಸಿದ್ದಾರೆ. ರಾಜ್ಯ ಸರ್ಕಾರದ ನಿಲುವು ಗಮನಿಸಿದರೆ ರಾಜ್ಯದಲ್ಲಿ ಹಿಟ್ಲರ್ ಆಡಳಿತ ಜಾರಿಗೆ ಬಂದಿದ್ದೇಯಾ ಎಂಬ ಪ್ರಶ್ನೆ ಮೂಡಿದೆ ಎಂದು ಹೇಳಿದ್ದಾರೆ.

ಈ ಕುರಿತು ಟ್ವೀಟ್ ಮಾಡಿರುವ ಜೋಶಿ ಅವರು ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರ ನೀತಿಗಳನ್ನು ಪಾಲಿಸುತ್ತೇವೆ ಎಂದು ಹೇಳುವ ಕಾಂಗ್ರೆಸ್ ಸರ್ಕಾರದ ನಡುವೆ ಹಿಟ್ಲರ್ ಆಡಳಿತಕ್ಕಿಂತಲೂ ಕಡೆಯಾಗಿದೆ. ವಾಕ್ ಸ್ವಾತಂತ್ರ್ಯ ಕಸಿಯುವುದು ಸಂವಿಧಾನದಲ್ಲಿ ಬರೆದಿದೇಯೇ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಪ್ರಶ್ನಿಸಿದ್ದಾರೆ.

ಸರ್ಕಾರದ ವೈಫಲ್ಯಗಳ ಬಗ್ಗೆ ಮಾತನಾಡಿದರೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್‌ಗೆ ಸಂಕೋಚ ಏಕೆ? ಕಾಂಗ್ರೆಸ್ ಸರ್ಕಾರ ದುರಾಡಳಿತ ಮತ್ತು ಭ್ರಷ್ಟಾಚರದ ರಾಜ್ಯದ ಅರ್ಥವ್ಯವಸ್ಥೆಯೆಂದು ಹಾಳು ಮಾಡಿದ್ದಿರೀ. ಈ ಬಗ್ಗೆ ಮಾತನಾಡಿದರೆ ನಿಮಗೆ ಭಯ ಏಕೆ ಎಂದು ಕಿಡಿಕಾರಿದ್ದಾರೆ.

ಖಾಸಗಿ ಚಾನೆಲ್ ಮುಖ್ಯಸ್ಥರನ್ನು ಬಂಧಿಸಲು ಪೊಲೀಸರನ್ನು ಕಳುಹಿಸಿರುವುದು ಯಾವ ಸಂದೇಶ ನೀಡುತ್ತದೆ. ಸರ್ಕಾರ ವೈಫಲ್ಯವನ್ನು ಮುಚ್ಚಿಡಲು ಆತಂಕ, ದುಗುಡ ಈ ಆದೇಶದಲ್ಲಿ ಕಂಡು ಬರುತ್ತಿದೆ. ನಿಮ್ಮ ಹತಾಶೆ ನಮಗೆ ಅರ್ಥವಾಗುತ್ತದೆ. ಈ ಹಿಟ್ಲರ್ ಆಡಳಿತದ ಪದ್ಧತಿ ಮೊಘಲರ ಆಡಳಿತ ಪದ್ಧತಿಯನ್ನು ರಾಜ್ಯ ಎಂದಿಂಗೂ ಸಹಿಸಿಕೊಳ್ಳುವುದಿಲ್ಲ ಎಂದು ತಿರುಗೇಟು ನೀಡಿದ್ದಾರೆ.

# ದಯೆ, ಕರುಣೆ, ಕ್ಷಮೆಗೆ ಧ್ಯಾನ ಅನಿವಾರ್ಯ : ಸುದೇಶ್ ದೀದೀಜಿ

**ದಾವಣಗೆರೆ:** "ಇಡೀ ವಿಶ್ವವೇ ಒಂದು ಕುಟುಂಬವಿದ್ದಂತೆ, ಪ್ರತಿ ಮನೆಯನ್ನು ಆಶ್ರಮವನ್ನಾಗಿ ಪರಿವರ್ತಿಸಿ, ಜಗತ್ತನ್ನು ಸುಂದರಗೊಳಿಸುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ. ಈ ನಿಟ್ಟಿನಲ್ಲಿ ದಯೆ, ಕರುಣೆ ಮತ್ತು ಕ್ಷಮಾಗುಣಗಳನ್ನು ಬೆಳೆಸಿಕೊಳ್ಳಲು ಧ್ಯಾನ ಅನಿವಾರ್ಯ" ಎಂದು ಬ್ರಹ್ಮಾಕುಮಾರಿ ಸಂಸ್ಥೆಯ ಪ್ರಧಾನ ಕೇಂದ್ರದ ಸಹ–ಮುಖ್ಯ ಆಡಳಿತಾಧಿಕಾರಿ ರಾಜಯೋಗಿನಿ ಬ್ರಹ್ಮಾಕುಮಾರಿ ಸುದೇಶ್ ದೀದೀಜಿ ಹೇಳಿದರು.

ನಗರದ ದೇವರಾಜ ಅರಸು ಬಡಾವಣೆಯಲ್ಲಿರುವ ಸಂಸ್ಥೆಯ ಶಿವಧ್ಯಾನ ಮಂದಿರದಲ್ಲಿ ಇಂದು ನಡೆದ ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ದಾವಣಗೆರೆ ಶಾಖೆಯ 50ನೇ ವರ್ಷಾಚರಣೆಯ ಸುವರ್ಣ ಮಹೋತ್ಸವ ಉದ್ಘಾಟಿಸಿ ಅವರು ಮಾತನಾಡಿದರು.

ಧ್ಯಾನದಿಂದ ಮನಃಶ್ಯಾಂತಿ ಲಭಿಸಿ, ಆತ್ಮಶುದ್ಧಿಯಾಗುತ್ತದೆ. ಇದರಿಂದ ವ್ಯಕ್ತಿ, ಜೀವನ, ಸಮಾಜ ಹೀಗೆ ಎಲ್ಲವೂ ಪವಿತ್ರವಾಗುತ್ತದೆ. ಪುಣ್ಯದ ಕೆಲಸದಲ್ಲಿ ನಮ್ಮನ್ನು ತೊಡಗಿಸಿಕೊಂಡರೆ ಮನಸ್ಸಿಗೆ ಸಂತೋಷ ಸಿಗುತ್ತದೆ. ಮನದಲ್ಲಿ ಶಾಂತಿ, ಪ್ರೀತಿ ತುಂಬಿದಾಗ ಮನೆ ಶಾಂತಿಯ ಧಾಮವಾಗುತ್ತದೆ, ಮನ ಮಂದಿರವಾಗುತ್ತದೆ ಮತ್ತು ಸೃಷ್ಟಿ ಸುಂದರವಾಗುತ್ತದೆ ಎಂದು ವಿವರಿಸಿದರು.



"ಪರಮಪಿತ ಈಶ್ವರನು ನೀಡಿದ ಜ್ಞಾನ ಮತ್ತು ಶಕ್ತಿಯಿಂದಲೇ ಈ ಭೂಮಿಯಲ್ಲಿ ಜನಿಸಿದ ಕೆಲವರು ದೇವತೆಗಳ ಅವತಾರಗಳಾಗಿದ್ದಾರೆ. ತ್ರಿಶೂಲವನ್ನು ಹಿಡಿದಿರುವ ಶಿವ ಪರಮಾತ್ಮನು ತನ್ನ ಶಕ್ತಿಯನ್ನು ಧಾರೆಯೆರೆದ ಕಾರಣ ಶ್ರೀಕೃಷ್ಣನ ಬಳಿ ಸುದರ್ಶನ ಚಕ್ರ, ಹನುಮಂತನಲ್ಲಿ ಗದೆ, ವಿಷ್ಣುವಿನ ಬಳಿ ಶಂಖ ಮತ್ತು ದೇವತೆಗಳ ಬಳಿ ಆಯುಧಗಳಿವೆ. ಕೆಸರಿನಲ್ಲಿ ಕಮಲ ಹುಟ್ಟಿದರೂ ಅದಕ್ಕೆ ಕೆಸರು ಅಂಟದಂತೆ, ನಾವೂ ಸಹ ಶುದ್ಧ, ಸುಂದರ ಹಾಗೂ ಪವಿತ್ರ ಬದುಕನ್ನು ನಡೆಸ ಬೇಕು" ಎಂದು ಅವರು ಕಿವಿಮಾತು ಹೇಳಿದರು.

ಬ್ರಹ್ಮಾಕುಮಾರೀಸ್‌ನ ರಷ್ಯಾದ ಪ್ರಧಾನ ನಿರ್ದೇಶಕರಾದ ರಾಜಯೋಗಿನಿ ಬ್ರಹ್ಮಾಕುಮಾರಿ ಚಕ್ರಧಾರಿ ದೀದೀಜಿ ಮಾತನಾಡಿ, "ನಮ್ಮಲ್ಲಿರುವ ಕಾಮ, ಕ್ರೋಧ, ಮದ, ಮತ್ಸರ ಮತ್ತು ಲೋಭಗಳೆಂಬ ವಿಕಾರಗಳನ್ನು ತೊರೆದು ರಾಮರಾಜ್ಯ ನಿರ್ಮಾಣಕ್ಕಾಗಿ ಸಂಕಲ್ಪ ಮಾಡಬೇಕು" ಎಂದು ಹಿತ ನುಡಿದರು.

# ವಿದ್ಯಾರ್ಥಿನಿಗೆ ಲೈಂಗಿಕ ಕಿರುಕುಳ ನೀಡಿದ ಕಾಮುಕ ಪ್ರಾಧ್ಯಾಪಕ ಅಮಾನತು

**ಮುಜಫರ್‌ನಗರ :** ಸರ್ಕಾರಿ ಅನುದಾನಿತ ಛೋಟು ರಾಮ್ ಪದವಿ ಕಾಲೇಜಿನ ಪ್ರಾಧ್ಯಾಪಕರೊಬ್ಬರನ್ನು ವಿದ್ಯಾರ್ಥಿನಿಯೊಬ್ಬರಿಗೆ ಲೈಂಗಿಕ ಕಿರುಕುಳ ನೀಡಿದ ಆರೋಪದ ಮೇಲೆ ಅಮಾನತುಗೊಳಿಸಲಾಗಿದೆ.

ಬಿಎಸ್‌ಸಿ ವಿದ್ಯಾರ್ಥಿನಿಯೊಬ್ಬಳು ಮೇ 24 ರಂದು ಕಾಲೇಜಿನ ಸಸ್ಯ ರೋಗಶಾಸ್ತ್ರ ವಿಭಾಗದ ಪ್ರಾಧ್ಯಾಪಕ ದುಶ್ಯಂತ್ ಕುಮಾರ್ ವಿರುದ್ಧ ಲೈಂಗಿಕ ಕಿರುಕುಳದ ಆರೋಪ ಹೊರಿಸಿದ್ದರು.

ತುರ್ತು ಸಭೆಯ ನಂತರ ಕುಮಾರ್ ಅವರನ್ನು ಸೇವೆಯಿಂದ ಅಮಾನತುಗೊಳಿಸಲಾಗಿದೆ ಎಂದು ಕಾಲೇಜು ಆಡಳಿತ ಕಾರ್ಯದರ್ಶಿ ಶರದ್ ಕುಮಾರ್ ವರದಿಗಾರರಿಗೆ ತಿಳಿಸಿದರು.

ಘಟನೆಯ ಬಗ್ಗೆ ಉಪಸಮಿತಿ ತನಿಖೆ ನಡೆಸಲಿದೆ ಎಂದು ಅವರು ಹೇಳಿದರು. ಪೊಲೀಸ್ ಕಸ್ಟಡಿಯಲ್ಲಿರುವ ಕುಮಾರ್ ಅವರನ್ನು ಮುಖ್ಯ ನ್ಯಾಯಾಂಗ ಮ್ಯಾಜಿಸ್ಟ್ರೇಟ್ ಕವಿತಾ ಅಗರ್ವಾಲ್ ಜಾಮೀನು ನಿರಾಕರಿಸಿದರು.

ಪ್ರಾಸಿಕ್ಯೂಷನ್ ಅಧಿಕಾರಿ ಕೆ.ಸಿ. ಮೋರಿ ಅವರ ಪ್ರಕಾರ, ವಿದ್ಯಾರ್ಥಿನಿಯೊಬ್ಬಳಿಗೆ ಲೈಂಗಿಕ ಕಿರುಕುಳ ನೀಡಿದ ಆರೋಪದ ಮೇಲೆ ಕುಮಾರ್ ಅವರನ್ನು ಮೇ 24 ರಂದು ಬಂಧಿಸಲಾಯಿತು. ಅಂದಿನಿಂದ ಪೊಲೀಸರು ಅವರ ವಿರುದ್ಧ ಇನ್ನೂ ಎರಡು ವಿಭಾಗಗಳನ್ನು ಸೇರಿಸಿದ್ದಾರೆ.

### ಸೂಡಾದಿಂದ ಬಡಾವಣೆಗಳಲ್ಲಿ ಅಭಿವೃದ್ಧಿ ಕಾಮಗಾರಿಗಳು

# ನಗರವನ್ನು ಸುಂದರ–ಸ್ವಚ್ಛವಾಗಿಟ್ಟುಕೊಳ್ಳಲು ಸುಂದರೇಶ್ ಕರೆ

**ಶಿವಮೊಗ್ಗ :** ಸೂಡಾ ವತಿಯಿಂದ ನಗರದ ವಿವಿಧ ಬಡಾವಣೆಗಳಲ್ಲಿ ಉದ್ಯಾನವನ ಅಭಿವೃದ್ಧಿ ಸೇರಿದಂತೆ ಇತರೆ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳುತ್ತಿದ್ದು, ನಗರದ ನಿವಾಸಿಗಳು ತಮ್ಮ ಬಡಾವಣೆಗಳ ಉದ್ಯಾನವನಗಳು ಹಾಗೂ ತಮ್ಮ ಸುತ್ತಮುತ್ತಲಿನ ಪ್ರದೇಶವನ್ನು ಸ್ವಚ್ಛ ಮತ್ತು ಸುಂದರವಾಗಿಟ್ಟುಕೊಳ್ಳಬೇಕು ಎಂದು ಶಿವಮೊಗ್ಗ–ಭದ್ರಾವತಿ ನಗರಾಭಿವೃದ್ಧಿ ಪಾಧಿಕಾರದ ಅಧ್ಯಕ್ಷರಾದ ಹೆಚ್ ಎಸ್ ಸುಂದರೇಶ್ ಕರೆ ನೀಡಿದರು.


ಶಿವಮೊಗ್ಗ–ಭದ್ರಾವತಿ ನಗರಾಭಿವೃದ್ಧಿ ಪಾಧಿಕಾರದ ವತಿಯಿಮದ ಸೋಮವಾರದಂದು ನಗರದ ವಿವಿಧ ಬಡಾವಣೆಗಳಲ್ಲಿ ಉದ್ಯಾನವನ ಹಾಗೂ ಇತರೆ ಅಭಿವೃದ್ಧಿ ಕಾಮಗಾರಿಗಳಿಗೆ ಗುದ್ದಲಿ ಪೂಜೆ ನೆರವೇರಿಸಿ ಅವರು ಮಾತನಾಡಿದರು.

ಸೂಡಾ ವತಿಯಿಂದ ನಗರದ ವಿವಿಧ ಬಡಾವಣೆಗಳಲ್ಲಿನ ಉದ್ಯಾನವನಗಳನ್ನು ಅಭಿವೃದ್ಧಿ ಪಡಿಸುವ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ. ಹಾಗೂ ಕೆಲವೆಡೆ ರಸ್ತೆ ಡಾಂಬರೀಕರಣ, ಚರಂಡಿ ನಿರ್ಮಾಣ ಮಾಡಲಾಗುತ್ತಿದೆ.

ಸ್ಥಳೀಯ ನಿವಾಸಿಗಳು ತಮ್ಮ ಬಡಾವಣೆಗಳ ಉದ್ಯಾನವನ, ಸುತ್ತಮುತ್ತಲಿನ ಜಾಗವನ್ನು ಸ್ವಚ್ಛವಾಗಿ ಇಟ್ಟುಕೊಳ್ಳಲು ಸಹಕರಿಸಬೇಕು. ಮನೆಯ ಸುತ್ತಮುತ್ತ ಗಿಡಗಳನ್ನು ನೆಟ್ಟು ಬೆಳೆಸಬೇಕು. ಇದರಿಂದ ಬೇಸಿಗೆಯಲ್ಲಿ ತಂಪು ವಾತಾವರಣ ಸಾಧ್ಯವಾಗುತ್ತದೆ. ಹಾಗೂ ನಗರದ ಸೌಂದರ್ಯವೂ ಹೆಚ್ಚುತ್ತದೆ ಎಂದ ಅವರು ಪಾರ್ಕು, ರಸ್ತೆಯಂತಹ ಸಾರ್ವಜನಿಕ ಆಸ್ತಿ, ನಿವಾಸಿಗಳದ್ದೇ ಆಗಿದ್ದು ಇದನ್ನು ಕಾಪಾಡಿಕೊಂಡು ಹೋಗಬೇಕೆಂದರು.

ಗಾಡಿಕೊಪ್ಪದಲ್ಲಿರುವ ಸಿದ್ದಪ್ಪ ಬಡಾವಣೆಯಲ್ಲಿ ಅಂದಾಜು ರೂ.25 ಲಕ್ಷ ಮೊತ್ತದ ಅಭಿವೃದ್ಧಿ ಕಾಮಗಾರಿಗೆ ಗುದ್ದಲಿಪೂಜೆ ನೆರವೇರಿಸಿದ ಅವರು 04 ಸಂಖ್ಯೆ ಡೆಕ್‌ಸ್ಲಾ ?ಯಬ್ ಹಾಗೂ 45 ಮೀ.ಕಾಂಕ್ರಿಟ್ ಬಾಕ್ಸ್ ಚರಂಡಿ ನಿರ್ಮಾಣ, 280 ಮೀ ರಸ್ತೆಗೆ ಡಾಂಬರೀಕರಣ ಮಾಡಲಾಗುವುದು ಎಂದರು.

ವಿದ್ಯಾನಗರದ ಗ್ರಂಥಾಲಯ ಹತ್ತಿರದ



ಉದ್ಯಾನವನಕ್ಕೆ ರೂ.20 ಲಕ್ಷ ಮೊತ್ತದ ಅಭಿವೃದ್ಧಿ ಕಾಮಗಾರಿಗೆ ಗುದ್ದಲಿಪೂಜೆ ನೆರವೇರಿಸಿ, ಇಲ್ಲಿಯ ಉದ್ಯಾನವನದಲ್ಲಿ ಪ್ಲಾಟ್‌ಫಾರ್ಮ್ ನಿರ್ಮಾಣದೊಂದಿಗೆ 12 ಸಂಖ್ಯೆ ಹೊರಾಂಗಣ ವ್ಯಾಯಾಮ ಸಾಮಗ್ರಿ ಅಳವಡಿಕೆ, ಪಾರ್ಕ್ನಲ್ಲಿ ಹಾಲಿ ಇರುವ ಪಾಥ್‌ವೇಗೆ ಮತ್ತು ಗ್ರಿಲ್ ಫೆನ್ಸಿಂಗ್‌ಗೆ ಬಣ್ಣ ಲೇಪಿಸಿವುದು ಹಾಗೂ ಉದ್ಯಾನವನದಲ್ಲಿ 08 ಸಂಖ್ಯೆ ಸಾದರಳ್ಳಿ ಕಲ್ಲಿನ ಬೆಂಚು ಅಳವಡಿಕೆ ಮಾಡಲಾಗುವುದು ಎಂದರು.

ವಿದ್ಯಾನಗದ ಪ್ರೊ.ದಾನಪ್ಪ ಮನೆ ಹತ್ತಿರದ ಪಾರ್ಕಿನಲ್ಲಿ ಅಂದಾಜು ಮೊತ್ತ ರೂ.20 ಲಕ್ಷ ಅನುದಾನದಲ್ಲಿ ಉದ್ಯಾನವನದ ಮುಂಭಾಗದಲ್ಲಿ ಆಯ್ದ ಭಾಗದಲ್ಲಿ ಕಾಂಕ್ರೀಟ್ ಬಾಕ್ಸ್ ಚರಂಡಿ ನಿರ್ಮಾಣ, ಗ್ರಿಲ್ ಕಾಂಪೌಂಡ್ ಹಾಗೂ ಉದ್ಯಾನವನದಲ್ಲಿ ಪ್ಲಾಟ್‌ಫಾರ್ಮ್ ನಿರ್ಮಾಣದೊಂದಿಗೆ 10 ಸಂಖ್ಯೆ ಹೊರಾಂಗಣ ವ್ಯಾಯಾಮ ಸಾಮಗ್ರಿಗಳ ಅಳವಡಿಕೆ ಮಾಡಲಾಗುವುದು.

ಗುರುಪುರದ ಭುವನೇಶ್ವರಿ ಬಡಾವಣೆಯಲ್ಲಿರುವ ಉದ್ಯಾನವನದಲ್ಲಿ ರೂ.20 ಲಕ್ಷ ವೆಚ್ಚದಲ್ಲಿ 15*10 ಮೀ ಅಳತೆಯ ಯೋಗ ಪ್ಲಾಟ್‌ಫಾರ್ಮ್ ನಿರ್ಮಾಣ, ಉದ್ಯಾನವನದಲ್ಲಿ ಪ್ಲಾಟ್‌ಫಾರ್ಮ್ ನಿರ್ಮಾಣದೊಂದಿಗೆ 11 ಸಂಖ್ಯೆ ಹೊರಾಂಗಣ ವ್ಯಾಯಾಮ ಸಾಮಗ್ರಿ ಅಳವಡಿಕೆ, ಹಾಲಿ ಇರುವ ಪಾಥ್‌ವೇಗೆ ಮತ್ತು ಗ್ರಿಲ್ ಫೆನ್ಸಿಂಗ್‌ಗೆ ಬಣ್ಣ ಲೇಪನ ಮತ್ತು 06 ಸಂಖ್ಯೆ ಸಾದರಳ್ಳಿ ಕಲ್ಲಿನ ಬೆಂಚು ಅಳವಡಿಕೆ ಮಾಡಲಾಗುವುದು.

ಮಲವಗೊಪ್ಪದ ಶಿವಪ್ರಿಯ ಉದ್ಯಾನವನಕ್ಕೆ ರೂ.20 ಲಕ್ಷ ಮೊತ್ತದಲ್ಲಿ ಅಭಿವೃದ್ಧಿ ಕಾಮಗಾರಿಗೆ ಗುದ್ದಲಿಪೂಜೆ ನೆರವೇರಿಸಿ, ಪಾರ್ಕ್ನ ಪ್ಲಾಟ್‌ಫಾರ್ಮ್ ನಿರ್ಮಾಣದೊಂದಿಗೆ 10 ಸಂಖ್ಯೆ ಹೊರಾಂಗಣ ವ್ಯಾಯಾಮ ಸಾಮಗ್ರಿ ಅಳವಡಿಕೆ, ಪಾರ್ಕಿನಲ್ಲಿ ಹಾಲಿ ಇರುವ ಪಾಥ್‌ವೇಗೆ ಮತ್ತು ಗ್ರಿಲ್ ಫೆನ್ಸಿಂಗ್‌ಗೆ ಬಣ್ಣ ಲೇಪನ ಹಾಗೂ 75 ಮೀ.ಪಾಥ್‌ವೇ ನಿರ್ಮಾಣ ಹಾಗೂ 8 ಸಂಖ್ಯೆ ಸಾದರಳ್ಳಿ ಕಲ್ಲಿನ ಬೆಂಚು ಅಳವಡಿಕೆ ಮಾಡಲಾಗುವುದು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಶಾಸಕರಾದ ಎಸ್.ಎನ್.ಚನ್ನಬಸಪ್ಪ ಮಾತನಾಡಿ, ನಿವಾಸಿಗಳು ತಮ್ಮ ಬಡಾವಣೆಗಳಲ್ಲಿನ ಉದ್ಯಾನವನಗಳನ್ನು ಸದ್ಬಳಕೆ ಮಾಡಿಕೊಳ್ಳಬೇಕು. ಜೊತೆಗೆ ತಮ್ಮ ಮನೆ ಸುತ್ತಮುತ್ತ ಗಿಡಗಳನ್ನು ನೆಟ್ಟು ಪೋಷಿಸಬೇಕು. ಸುತ್ತಮುತ್ತ ಸ್ವಚ್ಚವಾಗಿಟ್ಟುಕೊಳ್ಳುವ ಮೂಲಕ ನಗರದ ಸೌಂದರ್ಯಕ್ಕೆ ಕೊಡುಗೆ ನೀಡಬೇಕೆಂದರು.

ಕಾರ್ಯಕ್ರಮದಲ್ಲಿ ಸೂಡಾ ಆಯುಕ್ತರಾದ ವಿಶ್ವನಾಥ ಮುದಜ್ಜಿ, ಸೂಡಾ ಕಾರ್ಯಪಾಲಕ ಅಭಿಯಂತರ ಗಂಗಾಧರ್ ಸ್ವಾಮಿ, ಪಾಲಿಕೆ ಮಾಜಿ ಸದಸ್ಯೆ ಯಮುನಾ ರಂಗೇಗೌಡ, ಇತರೆ ಅಧಿಕಾರಿಗಳು, ನಿವಾಸಿಗಳು ಪಾಲ್ಗೊಂಡಿದ್ದರು.

# ಗೃಹ ಸಚಿವರಿಂದ ಬುಗುಡನಹಳ್ಳಿ ಕೆರೆ ವೀಕ್ಷಣೆ

**ತುಮಕೂರು :** ಹೇಮಾವತಿ ನಾಲೆಯಿಂದ ಬುಗುಡನಹಳ್ಳಿಯಲ್ಲಿ ಸಂಗ್ರಹವಾಗುವ ನೀರು ಮುಂದಿನ 8 ತಿಂಗಳ ಕಾಲ ನಗರಕ್ಕೆ ಪೂರೈಕೆ ಮಾಡಬಹುದಾಗಿದೆ ಎಂದು ಗೃಹ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ: ಜಿ. ಪರಮೇಶ್ವರ ಅವರು ತಿಳಿಸಿದರು.

ತುಮಕೂರು ನಗರದ ಬುಗುಡನಹಳ್ಳಿ ಕೆರೆಗೆ ಅಧಿಕಾರಿಗಳೊಂದಿಗೆ ಸೋಮವಾರ ಭೇಟಿ ನೀಡಿದ ನಂತರ ನಗರದ ಎಂ.ಜಿ.ಸ್ಟೇಡಿಯಂನಲ್ಲಿ ಪತ್ರಿಕಾ ಹೇಳಿಕೆ ನೀಡಿ ಮಾತನಾಡಿದ ಅವರು ಗೊರೂರು ಜಲಾಶಯದಿಂದ ಹೇಮಾವತಿ ನಾಲೆಗೆ ಮೇ 23ರಂದು ನೀರು ಹರಿಯಬಿಟ್ಟಿದ್ದು, ಮೇ 25ರ ರಾತ್ರಿ ಬುಗಡನಹಳ್ಳಿ ಕೆರೆಗೆ ನೀರು ತಲುಪಿದೆ ಎಂದು ತಿಳಿಸಿದ ಅವರು ನಗರದಲ್ಲಿ ಕುಡಿಯುವ ನೀರಿಗೆ ತೊಂದರೆಯಾಗಬಾರದೆಂಬ ಉದ್ದೇಶದಿಂದ ಹಾಸನದಲ್ಲಿ ಇತ್ತೀಚೆಗೆ ಜರುಗಿದ ನೀರಾವರಿ ಸಮಿತಿ ನಿರ್ಣಯದಂತೆ ಕುಡಿಯುವ ನೀರಿನ ಉದ್ದೇಶಕ್ಕಾಗಿ ತುಮಕೂರಿಗೆ ಗೊರೂರು ಜಲಾಶಯದಿಂದ ನೀರು ಹರಿಸಲಾಗಿದೆ. ಮುಂದಿನ 50 ದಿನಗಳಿಗೆ ಮಾತ್ರ ಪೂರೈಕೆ ಮಾಡುವಷ್ಟು ಕೆರೆಯಲ್ಲಿ ನೀರು ಲಭ್ಯವಿತ್ತು. ಮುಂದಾಲೋಚನೆಯಿಂದ ಕೆರೆಗೆ ನೀರು ಹರಿಸಲಾಗಿದೆ ಎಂದು ತಿಳಿಸಿದರು.



ಹೇಮಾವತಿ ನೀರನ್ನು ಬುಗುಡನಹಳ್ಳಿ ಕೆರೆಯಲ್ಲಿ ಸಂಗ್ರಹಿಸಿ ಶುದ್ಧೀಕರಿಸಿ ನಾಗರಿಕರಿಗೆ ಪೂರೈಕೆ ಮಾಡಲಾಗುವುದು. ಹೇಮಾವತಿ ಜಲಾಶಯದಿಂದ ಪ್ರತೀ ದಿನ 2 ಟಿಎಂಸಿ ನೀರನ್ನು ಹರಿಸಲು ನೀರಾವರಿ ಸಲಹಾ ಸಮಿತಿಯಲ್ಲಿ ನಿರ್ಣಯ ಕೈಗೊಳ್ಳಲಾಗಿದೆ. ಮುಂದಿನ 8 ದಿನಗಳಲ್ಲಿ ಕೆರೆ ಭರ್ತಿಯಾಗಲಿದ್ದು, ಕೆರೆ ಭರ್ತಿಯಾದ ನಂತರ ಹೆಬ್ಬಾಕ, ನರಸಾಪುರ, ಅಮಾನಿಕೆರೆಗೆ ನೀರನ್ನು ತುಂಬಿಸುವ ಪ್ರಯತ್ನ ಮಾಡಲಾಗುವುದು. ಪ್ರಸಕ್ತ ವರ್ಷ ಅವಧಿಗೂ ಮುನ್ನವೇ ಮಳೆಗಾಲ ಪ್ರಾರಂಭವಾಗಿರುವುದರಿಂದ ಜಿಲ್ಲೆಯಲ್ಲಿ ಕುಡಿಯುವ ನೀರಿಗೆ ಯಾವುದೇ ರೀತಿಯ ತೊಂದರೆ–ಯಾಗದು ಎಂದು ಹೇಳಿದರು.

ಪ್ರಸಕ್ತ ವರ್ಷ ಗ್ರಾಮೀಣ ಪ್ರದೇಶ ಹಾಗೂ ನಗರ ಪ್ರದೇಶಗಳಲ್ಲಿ ನೀರಿನ ಸಮಸ್ಯೆ ತಲೆದೋರದಂತೆ ಜಿಲ್ಲಾಡಳಿತದಿಂದ ಈಗಾಗಲೇ ಸಭೆಗಳನ್ನು ನಡೆಸಿ ನೀಲನಕ್ಷೆಯನ್ನು ಸಿದ್ಧಪಡಿಸಿ, ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಜಿಲ್ಲಾ ಕೇಂದ್ರ ಸ್ಥಾನದಲ್ಲಿ 35 ಲಕ್ಷ ರೂ.ಗಳ ವೆಚ್ಚದಲ್ಲಿ ಅಲಂಕಾರಿಕ ಮೀನುಗಳ ಪ್ರದರ್ಶನಕ್ಕಾಗಿ ಮತ್ಸ್ಯಾಲಯವನ್ನು ಅಭಿವೃದ್ಧಿಗೊಳಿಸಲಾಗುತ್ತಿದೆ. ವಿಶೇಷವಾಗಿ ಶಾಲಾ ಮಕ್ಕಳನ್ನು ದೃಷ್ಟಿಯಲ್ಲಿಟ್ಟುಕೊಂಡು ಈ ಮತ್ಸ್ಯಾಲಯವನ್ನು ನಿರ್ಮಿಸಲಾಗುತ್ತಿದೆ. ವಿವಿಧ ಜಾತಿಯ ಮೀನುಗಳ ಪರಿಚಯ, ಅಧ್ಯಯನಕ್ಕಾಗಿ ವಿದ್ಯಾರ್ಥಿಗಳಿಗೆ ಅನುಕೂಲಕರವಾಗಲಿದೆ. ಸದ್ಯದಲ್ಲಿಯೇ ಈ ಮತ್ಸ್ಯಾಲಯವನ್ನು ಉದ್ಘಾಟಿಸಲಾಗುವುದು ಎಂದು ತಿಳಿಸಿದರು.

ಇದಕ್ಕೂ ಮುನ್ನ ನಗರದ ಹೊರವಲಯದಲ್ಲಿರುವ ನರಸಾಪುರ ಗೇಟ್‌ನಿಂದ ಬುಗುಡನಹಳ್ಳಿ ಜಲ ಸಂಗ್ರಹಾಗಾರದವರೆಗೂ ಕಾಲ್ನಡಿಗೆಯಲ್ಲಿ ಸಾಗಿ ಹೇಮಾವತಿ ನಾಲೆ ನೀರು ಹರಿಯುವಿಕೆಯನ್ನು ಸಚಿವರು ಪರಿವೀಕ್ಷಿಸಿದರು. ಬುಗುಡನಹಳ್ಳಿ ಕೆರೆಯಲ್ಲಿ ಬೆಳೆದಿರುವ ಜಾಲಿಗಿಡ, ಜಂಗಲ್, ಗಿಡ–ಗಂಟೆಗಳನ್ನು ಕೂಡಲೇ ತೆರವುಗೊಳಿಸಲು ಕ್ರಮಕೈಗೊಳ್ಳಬೇಕು. ಕೆರೆಗೆ ಯಾವುದೇ ಕಲುಷಿತ ನೀರು ಸೇರದಂತೆ ಎಚ್ಚರಿಕೆವಹಿಸಬೇಕು ಎಂದು ಪಾಲಿಕೆ ಆಯುಕ್ತ ಅಶ್ವಿಜ ಅವರಿಗೆ ನಿರ್ದೇಶನ ನೀಡಿದರು. ನರಸಾಪುರ ಗೇಟ್‌ನಿಂದ ಜಲ ಸಂಗ್ರಹಾಗಾರಕ್ಕೆ ಸೇರುವ ರಸ್ತೆಯನ್ನು ಅಗಲೀಕರಣಗೊಳಿಸಬೇಕು. ಕೆರೆ ಏರಿ ಮೇಲೆ ತಿರುಗಾಡಲು ಅನುಕೂಲ ಮಾಡಿಕೊಡಬೇಕು ಎಂದು ಸ್ಥಳೀಯ ಗ್ರಾಮಸ್ಥರು ಸಚಿವರಿಗೆ ಮನವಿ ಮಾಡಿದರು.

ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಮಾತನಾಡಿ, ಗೊರೂರು ಜಲಾಶಯದಿಂದ ಮೇ 23 ರಿಂದ ಹೇಮಾವತಿ ನಾಲೆಗೆ ನೀರು ಹರಿಸಲಾಗಿದ್ದು, ಮೇ 25 ರಾತ್ರಿ 11.15 ಗಂಟೆಗೆ ತುಮಕೂರಿಗೆ ನೀರು ತಲುಪಿದೆ. ಸಂಗ್ರಹವಾದ ನೀರನ್ನು ಕುಡಿಯುವ ಉದ್ದೇಶಕ್ಕಾಗಿ ಮಾತ್ರ ಬಳಸಲಾಗುವುದು ಎಂದು ತಿಳಿಸಿದರು.

ಸಜಿಲ್ಲಾ ಪಂಚಾಯತಿ ಮುಖ್ಯಕಾರ್ಯ ನಿರ್ವಾಹಣಾಧಿಕಾರಿ ಜಿ. ಪ್ರಭು ಮಾತನಾಡಿ ಸುಮಾರು 100 ಮಕ್ಕಳು ಕುಳಿತು ಸಾಕ್ಷ್ಯಚಿತ್ರ ವೀಕ್ಷಿಸಲು ವ್ಯವಸ್ಥೆ ಮಾಡಲಾಗುತ್ತಿದೆ. ತುಮಕೂರಿನ ಪ್ರಮುಖ ಆಕರ್ಷಣೆ ಇದಾಗಲಿದೆ. ಹಲವಾರು ವರ್ಷಗಳಿಂದ ಕಾರ್ಯ ನಿರ್ವಹಿಸದೆ ಮುಚ್ಚಲಾಗಿದ್ದ ಮತ್ಸ್ಯಾಲಯಕ್ಕೆ ಮರುಜೀವ ನೀಡಲಾಗುತ್ತಿದೆ. ಮುಂದಿನ 10 ದಿನಗಳೊಳಗಾಗಿ ನವೀಕರಣ ಕಾರ್ಯವನ್ನು ಪೂರ್ಣಗೊಳಿಸಿ ಲೋಕಾರ್ಪಣೆಗೊಳಿಸಲಾಗುವುದು. ಈ ಮತ್ಸ್ಯಾಲಯದಲ್ಲಿ ವಿವಿಧ 36 ಜಾತಿಯ ಅಲಂಕಾರಿಕ ಮೀನುಗಳ ಅಕ್ವೇರಿಯಂಗಳನ್ನು ಅಳವಡಿಸಲಾಗಿದೆ. ಕೋಯಿಕಾರ್ಪ್, ಗೋಲ್ಡ್ ಫಿಶ್, ಅರೋಹನ, ಫ್ಲವರ್‌ಆರ್ಮ್, ಪ್ಯಾರಲ್ಸ್ ಸೇರಿದಂತೆ ಹಲವಾರು ಜಾತಿಯ ಮೀನುಗಳನ್ನು ಪ್ರದರ್ಶನಕ್ಕಿಡಲಾಗುವುದು ಎಂದು ಸಚಿವರಿಗೆ ಮಾಹಿತಿ ನೀಡಿ–ದರು.

ಈ ಸಂದರ್ಭದಲ್ಲಿ ಪಾವಗಡ ಶಾಸಕ ಹೆಚ್.ವಿ.ವೆಂಕಟೇಶ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ವಿ. ಅಶೋಕ್, ಹೇಮಾವತಿ ನಾಲಾ ಉಪವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ ಸಿ. ಸಂಪತ್ ಕುಮಾರ್, ಮೀನುಗಾರಿಕೆ ಇಲಾಖೆ ಉಪನಿರ್ದೇಶಕ ಎ.ಸಿ. ಶಿವಶಂಕರ್, ತೋಟಗಾರಿ–ಕೆ ಉಪನಿರ್ದೇಶಕ ಶಾರದಮ್ಮ, ಪಶುಸಂಗೋಪನಾ ಇಲಾಖೆ ಉಪನಿರ್ದೇಶಕ ಡಾ: ಗಿರೀಶ್ ಬಾಬುರೆಡ್ಡಿ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಮಂಗಳೂರು: ಜೂನ್ 1 ರಂದು ಯಕ್ಷಧ್ರುವ ಪಟ್ಲ ದಶಮ ಸಂಭ್ರಮ 2025, ರಾಷ್ಟ್ರೀಯ ಕಲಾ ಸಮ್ಮೇಳನ

**ಮಂಗಳೂರು:** ಜೂನ್ 1 ರಂದು ಮಂಗಳೂರಿನಲ್ಲಿ ನಡೆಯುವ ಒಂದು ದಿನದ ಯಕ್ಷಧ್ರುವ ಪಟ್ಲ ದಶಮ ಸಂಭ್ರಮ 2025 ಮತ್ತು ರಾಷ್ಟ್ರೀಯ ಕಲಾ ಸಮ್ಮೇಳನವನ್ನು ಕನ್ನಡ ಮತ್ತು ಸಂಸ್ಕೃತಿ ಸಚಿವ ಶಿವರಾಜ್ ತಂಗಡಗಿ ಅವರು ಉದ್ಘಾಟಿಸಲಿದ್ದಾರೆ.

ಯಕ್ಷಧ್ರುವ ಪಟ್ಲ ಫೌಂಡೇಶನ್ ಟ್ರಸ್ಟ್(ಜಕಈಖ) ಆಯೋಜಿಸಿರುವ ಈ ಕಾರ್ಯಕ್ರಮ, ಜೂನ್ 1 ರಂದು ಬೆಳಗ್ಗೆ 9.30 ರಿಂದ ರಾತ್ರಿ 11 ರವರೆಗೆ ದಿನವಿಡೀ ನಡೆಯಲಿದೆ. ಕಾರ್ಯಕ್ರಮದಲ್ಲಿ ಕಲಾ ಪ್ರದರ್ಶನಗಳು ಮತ್ತು ಸಾಂಸ್ಕೃತಿಕ ಪ್ರದರ್ಶನಗಳು ನಡೆಯಲಿವೆ.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಜಕಈಖಿಯ ಸತೀಶ್ ಶೆಟ್ಟಿ ಅವರು, ವಿವಿಧ ಕ್ಷೇತ್ರಗಳಲ್ಲಿನ ಸಾಧಕರನ್ನು ಈ ಕಾರ್ಯಕ್ರಮದಲ್ಲಿ ಸನ್ಮಾನಿಸಲಾಗುವುದು ಎಂದು ತಿಳಿಸಿದರು.

ಆಳ್ವಾಸ್ ಶಿಕ್ಷಣ ಪ್ರತಿಷ್ಠಾನದ ಅಧ್ಯಕ್ಷ ಎಂ. ಮೋಹನ್ ಆಳ್ವ ಅವರ ಸಮನ್ವಯದಲ್ಲಿ, ಈ ಕಾರ್ಯಕ್ರಮದಲ್ಲಿ ಯಕ್ಷಗಾನ ಮತ್ತು ಸಾಂಪ್ರದಾಯಿಕ ಕಲಾ ಛಾಯಾಗ್ರಹಣ ಪ್ರದರ್ಶನದ ಜೊತೆಗೆ ಎಂಟು ಭಾರತೀಯ ಶಾಸ್ತ್ರೀಯ ಕಲಾ ಪ್ರಕಾರಗಳನ್ನು ಪ್ರದರ್ಶಿಸಲಾಗುವುದು ಎಂದರು.

ಅಂದು ಮಧ್ಯಾಹ್ನ 1 ಗಂಟೆಗೆ ಪೇಜಾವರ ಮಠದ ಶ್ರೀ ವಿಶ್ವಪ್ರಸನ್ನ ತೀರ್ಥ ಸ್ವಾಮೀಜಿ ಅವರನ್ನು ಸನ್ಮಾನಿಸಲಾಗುವುದು ಮತ್ತು ಕ್ರಿಕೆಟಿಗ ರೋಹಿತ್ ಶರ್ಮಾ ಅವರು ವಿಶೇಷ ಅತಿಥಿಯಾಗಿ ಭಾಗವಹಿಸುವ ನಿರೀಕ್ಷೆಯಿದೆ ಎಂದು ಅವರು ಹೇಳಿದರು.

ಸಂಜೆ 5.30 ಕ್ಕೆ ನಡೆಯುವ ಸಮಾರೋಪ ಸಮಾರಂಭದಲ್ಲಿ ಒಡಿಯೂರು ಮಠದ ಶ್ರೀ ಗುರುದೇವಾನಂದ ಸ್ವಾಮೀಜಿ ಅವರು ಆಶೀರ್ವಚನ ನೀಡಲಿದ್ದಾರೆ ಮತ್ತು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಭಾಗವಹಿಸಲಿದ್ದಾರೆ ಎಂದು ಶೆಟ್ಟಿ ಹೇಳಿದರು.


ಆಚರಣೆಯ ಭಾಗವಾಗಿ, ಯಕ್ಷಧ್ರುವ ಕಲಾ ಗೌರವ 2025 ಪ್ರಶಸ್ತಿಗಳನ್ನು ವಿವಿಧ ಕಲಾ ಕ್ಷೇತ್ರಗಳಲ್ಲಿನ 16 ಹಿರಿಯ ಸಾಧಕರಿಗೆ ಪ್ರದಾನ ಮಾಡಲಾಗುವುದು. ಈ ಪ್ರಶಸ್ತಿ ತಲಾ 20,000 ರೂ. ನಗದು ಬಹುಮಾನ ಒಳಗೊಂಡಿದೆ ಎಂದು ಶೆಟ್ಟಿ ತಿಳಿಸಿದರು.

2025 ರ ಯಕ್ಷಧ್ರುವ ಪಟ್ಲ ಪ್ರಶಸ್ತಿಯನ್ನು ಹಿರಿಯ ಯಕ್ಷಗಾನ ಭಾಗವತ ಮತ್ತು ವಿದ್ವಾಂಸ ಕುರಿಯ ಗಣಪತಿ ಶಾಸ್ತ್ರಿ ಅವರಿಗೆ ಪ್ರದಾನ ಮಾಡಲಾಗುವುದು ಎಂದು ಶೆಟ್ಟಿ ಹೇಳಿದ್ದಾರೆ.

2025 ರ ಯಕ್ಷಧ್ರುವ ಮಾತೃಪೋಷಕ ಪ್ರಶಸ್ತಿಯನ್ನು ಗ್ಲೋಬಲ್ ಫೆಡರೇಶನ್ ಆಫ್ ಬಂಟ್ ಅಸೋಸಿಯೇಷನ್ಸ್ ಪ್ರತಿನಿಧಿಸುವ ದಂಪತಿಗಳಾದ ಹರೀಶ್ ಶೆಟ್ಟಿ ಮತ್ತು ಚಂದ್ರಿಕಾ ಶೆಟ್ಟಿ ಅವರಿಗೆ ಪ್ರದಾನ ಮಾಡಲಾಗುವುದು ಎಂದರು.

# ಸೋಮಶೇಖರ್-ಹೆಬ್ಬಾರ್ ಉಚ್ಚಾಟನೆ ಬಿಜೆಪಿಯಲ್ಲೇ ಪರ-ವಿರೋಧ ಅಭಿಪ್ರಾಯ

**ಬೆಂಗಳೂರು,ಮೇ27–** ಶಾಸಕರಾದ ಎಸ್.ಟಿ.ಸೋಮಶೇಖರ್ ಮತ್ತು ಅರೆಬೈಲು ಶಿವರಾಮ್ ಹೆಬ್ಬಾರ್ ಅವರನ್ನು ಪಕ್ಷದಿಂದ ಉಚ್ಚಾಟನೆ ಮಾಡಿರುವ ಕೇಂದ್ರದ ಶಿಸ್ತು ಕ್ರಮದ ಕುರಿತು ಪಕ್ಷದೊಳಗೆ ಪರ-ವಿರೋಧ ಅಭಿಪ್ರಾಯ ವ್ಯಕ್ತವಾಗಿದೆ. ಇಬ್ಬರನ್ನೂ ಪಕ್ಷದ ಪ್ರಾಥಮಿಕ ಸದಸ್ಯತ್ವದಿಂದಲೇ ಉಚ್ಚಾಟನೆ ಮಾಡಿರುವ ಕೇಂದ್ರದ ಶಿಸ್ತು ಸಮಿತಿ ಕ್ರಮವನ್ನು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಸ್ವಾಗತಿಸಿದ್ದಾರೆ.



ಆದರೆ ಉಚ್ಚಾಟನೆಗೊಂಡಿರುವ ಶಿವರಾಜ್ ಹೆಬ್ಬಾರ್ ಮತ್ತು ಸೋಮಶೇಖರ್ ಇಬ್ಬರೂ, ನಾವು ಇದನ್ನು ನಿರೀಕ್ಷೆ ಮಾಡಿದ್ದೆವು. ವರ್ಷದ ಹಿಂದೆ ನಮ್ಮನ್ನು ಪಕ್ಷದಿಂದ ಉಚ್ಚಾಟನೆ ಮಾಡುವ ಸುಳಿವು ಸಿಕ್ಕಿತ್ತು. ನಮ್ಮ ಮುಂದಿನ ರಾಜಕೀಯ ನಡೆಯನ್ನು ಕಾದು ನೋಡಿ ಎಂದು ಕುತೂಹಲ ಕೆರಳಿಸಿದ್ದಾರೆ.

ಇದಕ್ಕೆ ಠಕ್ಕರ್ ಎನ್ನುವಂತೆ ಮಾಜಿ ಸಚಿವ ವಿಧಾನಪರಿಷತ್ ಸದಸ್ಯ ಸಿ.ಟಿ.ರವಿ, ಪಕ್ಷ-ಗಿಂತ ಯಾರು ದೊಡ್ಡವರಲ್ಲ, ಪಕ್ಷದ ವಿರೋಧಿ ಚಟುವಟಿಕೆ ನಡೆಸುವವರು ಎಷ್ಟೇ ದೊಡ್ಡವರಾದರೂ ಸಹಿಸುವುದಿಲ್ಲ ಎಂದು ತಿರುಗೇಟು ಕೊಟ್ಟಿದ್ದಾರೆ.

**ಉಚ್ಚಾಟನೆಗೆ ಮನವಿ :** ಸೋಮಶೇಖರ್ ಮತ್ತು ಶಿವರಾಮ್ ಹೆಬ್ಬಾರ್ ಅವರುಗಳು ಬಹಿರಂಗವಾಗಿಯೇ ಕಾಂಗ್ರೆಸ್ ಜೊತೆ ಗುರುತಿಸಿಕೊಂಡಿದ್ದರು. ಅವರು ಪಕ್ಷ ವಿರೋಧಿ ಚಟುವಟಿಕೆ ನಡೆಸುತ್ತಾರೆ ಎಂಬುದು ಅವರಿಗೂ ಗೊತ್ತಿತ್ತು. ಹೀಗಾಗಿ ಈ ಇಬ್ಬರ ವಿರುದ್ಧವೂ ಶಿಸ್ತು ಕ್ರಮ ಜರುಗಿಸಬೇಕೆಂದು ವರಿಷ್ಠರಿಗೆ ಮನವಿ ಮಾಡಿದ್ದೆವು. ಪಕ್ಷದ ನಿರ್ಧಾರವನ್ನು ಸ್ವಾಗತಿಸುವುದಾಗಿ ವಿಜಯೇಂದ್ರ ಹೇಳಿದರು.

ನಮ್ಮದು ಕಾರ್ಯಕರ್ತರ ಆಧಾರಿತ ಪಕ್ಷ. ತಪ್ಪು ಮಾಡಿದವರು ಎಷ್ಟೇ ದೊಡ್ಡವರಾದರೂ ಸಹಿಸುವುದಿಲ್ಲ. ಹಲವು ಬಾರಿ ತಪ್ಪು ಸರಿಪಡಿಸಿಕೊಳ್ಳುವಂತೆ ಸೂಚ್ಯವಾಗಿ ಹೇಳಿದ್ದರೂ ಸರಿಪಡಿಸಿಕೊಂಡಿಲ್ಲ. ಹೀಗಾಗಿ ವರಿಷ್ಠರು ಸರಿಯಾದ ನಿರ್ಧಾರವನ್ನೇ ತೆಗೆದುಕೊಂಡಿದ್ದಾರೆ ಎಂದು ಹೇಳಿದರು.

**ಸ್ವಾಗತ :** ಪಕ್ಷದಿಂದ ಉಚ್ಚಾಟನೆ ಮಾಡಿರುವ ಕೇಂದ್ರ ಶಿಸ್ತು ಸಮಿತಿಯ ತೀರ್ಮಾನವನ್ನು ವಿಧಾನಪರಿಷತ್ ಸದಸ್ಯ ಹಾಗೂ ಮಾಜಿ ಸಚಿವ ಸಿ.ಟಿ.ರವಿ ಸ್ವಾಗತಿಸಿದ್ದಾರೆ.

ಶಿವರಾಮ್ ಹೆಬ್ಬಾರ್ ಸೋಮಶೇಖರ್ ಕಾಂಗ್ರೆಸ್ ಜೊತೆ ಗುರುತಿಸಿಕೊಂಡಿದ್ದು ತಪ್ಪು. ನಮ್ಮ ಪಕ್ಷದ ಚಿಹ್ನೆ ಯಡಿ ಗೆದ್ದು ಬೇರೆ ಪಕ್ಷದವರ ಜೊತೆ ಗುರುತಿಸಿಕೊಂಡರೆ ಯಾರೂ ಸಹಿಸುವುದಿಲ್ಲ. ಇಬ್ಬರ ವಿರುದ್ಧವೂ ಕ್ರಮ ಜರುಗಿಸಬೇಕೆಂದು ಮನವಿ ಮಾಡಿದ್ದೆವು. ತಡವಾದರೂ ವರಿಷ್ಠರು ಸೂಕ್ತವಾದ ನಿರ್ಧಾರವನ್ನು ತೆಗೆದುಕೊಂಡಿದ್ದಾರೆ ಎಂದರು.

ಉಚ್ಚಾಟನೆ ಮಾಡಿರುವುದು ನಮ್ಮ ಪಕ್ಷದ ಆಂತರಿಕ ವಿಚಾರ. ಇದರ ಬಗ್ಗೆ ಡಿಸಿಎಂ ಡಿ.ಕೆ.ಶಿವಕುಮಾರ್ ತಲೆಕೆಡಿಸಿಕೊಳ್ಳುವುದು ಬೇಡ. ನಮ್ಮಲ್ಲಿ ಮುತ್ತುರತ್ನಗಳಿವೆಯೋ ಅಥವಾ ಕೊಹಿನೂರು ವಜ್ರಗಳಿವೆಯೋ ಎಂಬುದನ್ನು ಪಕ್ಷ ನೋಡಿಕೊಳ್ಳುತ್ತದೆ. ಮೊದಲು ಕಾಂಗ್ರೆಸ್ ಪಕ್ಷದಲ್ಲಿರುವವರ ಬಗ್ಗೆ ಮಹಾನಾಯಕರು ನೋಡಿಕೊಳ್ಳಲಿ ಎಂದು ರವಿ ತಿರುಗೇಟು ಕೊಟ್ಟರು.

**ಒಳ್ಳೆಯದೇ ಆಯಿತು :** ಇನ್ನು ಉಚ್ಚಾಟನೆ ಕುರಿತು ಪ್ರತಿಕ್ರಿಯಿಸಿರುವ ಶಿವರಾಮ್ ಹೆಬ್ಬಾರ್. ನಮ್ಮನ್ನು ಬಿಜೆಪಿಯಿಂದ ಉಚ್ಚಾಟಿಸಿದ್ದು ಒಳ್ಳೆಯದೇ ಆಯಿತು. ನಾವೇನೂ ಪಕ್ಷ ವಿರೋಧಿ ಚಟುವಟಿಕೆ ನಡೆಸುತ್ತಿರಲಿಲ್ಲ. ಪಕ್ಷದಲ್ಲಿ ನಮ್ಮನ್ನು ಸಂಪೂರ್ಣವಾಗಿ ಕಡೆಗಣಿಸಲಾಗಿತ್ತು. ಕ್ಷೇತ್ರದ ಹಾಗೂ ಕಾರ್ಯಕರ್ತರ ಹಿತದೃಷ್ಟಿಯಿಂದ ಕಾಂಗ್ರೆಸ್‌ಗೆ ಕೆಲವು ವಿಷಯಗಳಲ್ಲಿ ಬೆಂಬಲ ಸೂಚಿಸಿದ್ದೆವು. ನಮ್ಮನ್ನು ಪಕ್ಷ ವಿರೋಧಿ ಚಟುವಟಿಕೆಯಿಂದ ಉಚ್ಚಾಟಿಸುವುದಾದರೆ ಉಳಿದವರ ಕಥೆ ಏನು ಎಂದು ಪ್ರಶ್ನಿಸಿದರು.

# ಪೊಲೀಸರ ತಪಾಸಣೆಯ ವೇಳೆ ಮೃತಪಟ್ಟ ಮಗುವಿನ ಪೋಷಕರಿಗೆ ಸಚಿವ ಚಲುವರಾಯಸ್ವಾಮಿ ಸಾಂತ್ವನ

ಮಗುವಿನ ಪೋಷಕರ ಬಳಿ ಘಟನೆ ಬಗ್ಗೆ ಮಾಹಿತಿ ಪಡೆದ ಸಚಿವರು ನಂತರ ಮಾತನಾಡಿ ಸಂಚಾರಿ ನಿಯಮಗಳನ್ನು ಪಾಲಿಸದೇ ಇದ್ದಂತಹ ಸಂದರ್ಭದಲ್ಲಿ ಸಾರ್ವಜನಿಕರಿಗೆ ದಂಡ ವಿಧಿಸಬೇಕು. ಬೇರೆ ರೀತಿ ವರ್ತಿಸಿ ತೊಂದರೆ ನೀಡುವುದು ತಪ್ಪು, ತುರ್ತು ಸಂದರ್ಭದಲ್ಲಿ ನಿಯಮ ಪಾಲಿಸುವಂತೆ ಅಡ್ಡ ಹಾಕಿರುವಂತದ್ದು ಅಮಾನವೀಯ ವರ್ತನೆ ಆಗಿದ್ದು ಅವರ ಮೇಲೆ ಕ್ರಮ ಕೈಗೊಳ್ಳಲಾಗುವುದು ಎಂದರು.



ವ್ಯವಸ್ಥೆಯ ನಿಯಮವನ್ನು ಪಾಲಿಸುವುದು ಸರ್ಕಾರಿ ನೌಕರರ ಆದ್ಯ ಕರ್ತವ್ಯವಾಗಿದೆ. ಆದರೆ ವ್ಯವಸ್ಥೆಯಿಂದ ಮತ್ತೊಬ್ಬರ ಪ್ರಾಣ ಹಾನಿಯಾಗುವಂತೆ, ತೊಂದರೆಯಾಗುವಂತೆ ನಡೆದುಕೊಳ್ಳಬಾರದು ಎಂದು ಸರ್ಕಾರಿ ನೌಕರರಿಗೆ ಕಿವಿಮಾತು ಹೇಳಿದರು.

ಮೂರು ಜನ ಪೊಲೀಸರು ಅಮಾನತು : ಈ ಒಂದು ದುರ್ಘಟನೆಗೆ ಕಾರಣರಾಗಿರುವ ಮೂರು ಜನ ಪೊಲೀಸ್ ರನ್ನು ಅಮಾನತ್ತು ಮಾಡುವ ನಿಟ್ಟಿನಲ್ಲಿ ತನಿಖೆ ಶುರುವಾಗಿದ್ದು, ಅವರನ್ನು ಅಮಾನತುಗೊಳಿಸಲಾಗುವುದು ಎಂದರು.

ಆಂಬುಲೆನ್ಸ್ ವ್ಯವಸ್ಥೆ ಬಳಸಿಕೊಳ್ಳಿ : ಮದ್ದೂರಿನ ಆಸ್ಪತ್ರೆಯಿಂದ ಮಗುವನ್ನು ಆಂಬುಲೆನ್ಸ್ ನಿಂದ ಕಳುಹಿಸಿ ಕೊಡುವ ವ್ಯವಸ್ಥೆ ಮಾಡಬಹುದಾಗಿತ್ತು ಮದ್ದೂರು ಆಸ್ಪತ್ರೆಯ ದುಸ್ಥಿತಿ ಕುರಿತು ಮಾಹಿತಿಗಳು ತಿಳಿದು ಬಂದಿದ್ದು ಮದ್ದೂರು ವೈದ್ಯಾಧಿಕಾರಿ ಅವರ ಮೇಲೆ ಕ್ರಮ ಕೈಗೊಳ್ಳಲಾಗುವುದು ಎಂದರು.

ದಿನದ 24 ಗಂಟೆಗಳ ಕಾಲ ಆಂಬುಲೆನ್ಸ್ ವ್ಯವಸ್ಥೆಯಿದೆ ಇಂತಹ ತುರ್ತು ಸಂದರ್ಭಗಳಲ್ಲಿ ಆಂಬುಲೆನ್ಸ್ ವ್ಯವಸ್ಥೆಯನ್ನು ಸಾರ್ವಜನಿಕರು ಬಳಸಿಕೊಳ್ಳಿ ಹಾಗೂ ಜಿಲ್ಲೆಯ ಪ್ರತಿಯೊಂದು ಹಳ್ಳಿಗಳಿಗೂ ಆಂಬುಲೆನ್ಸ್ ತುರ್ತು ಸಂದರ್ಭದಲ್ಲಿ ಆಗಮಿಸುವುದು ಕಡ್ಡಾಯವಾಗಿರುತ್ತದೆ ಎಂದರು.

ಇನ್ನೂ ಕೆಲವೇ ದಿನಗಳಲ್ಲಿ ಸಂಚಾರಿ ಪೋಲೀಸರು ನಿಯಮ ಪಾಲಿಸುವ ಬಗ್ಗೆ ಹಾಗೂ ತುರ್ತು ಸಂದರ್ಭದಲ್ಲಿ ಸಾರ್ವಜನಿಕರಿಗೆ ಸಹಕರಿಸುವ ಬಗ್ಗೆ ಕುರಿತು ಸಭೆ ನಡೆಸಲಾಗುವುದು ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಶಾಸಕರಾದ ಪಿ. ರವಿಕುಮಾರ್ ಅವರು ಸೇರಿತಂದ ಇನ್ನಿತರರು ಹಾಜರಿದ್ದರು.

# ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗಕ್ಕೆ ಡಿಜಿಟಲ್ ಸ್ಪರ್ಶ: ನ್ಯಾ. ಟಿ.ಜಿ.ಶಿವಶಂಕರೇಗೌಡ

**ಬೆಂಗಳೂರು:** ಕರ್ನಾಟಕ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದಲ್ಲಿ ವಿಚಾರಣೆಗೆ ಬಾಕಿಯಿರುವ ಪ್ರಕರಣಗಳನ್ನು ತ್ವರಿತವಾಗಿ ವಿಲೇವಾರಿ ಮಾಡುವ ಮೂಲಕ ದೇಶದಲ್ಲೇ ಮೂರನೇ ಸ್ಥಾನದಲ್ಲಿರುವ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗವನ್ನು ಮೊದಲನೇ ಸ್ಥಾನಕ್ಕೆ ಕೊಂಡೊಯ್ಯಲಾಗುವುದು ಎಂದು ಕರ್ನಾಟಕ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರಾದ ನ್ಯಾಯಮೂರ್ತಿ ಟಿ.ಜಿ.ಶಿವಶಂಕರೇಗೌಡ ಅವರು ಹೇಳಿದರು.



ಕರ್ನಾಟಕ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರಾಗಿ ಕೇಂದ್ರ ಕಚೇರಿಯಲ್ಲಿ ಅಧಿಕಾರ ಸ್ವೀಕರಿಸಿದ ಬಳಿಕ ಮಾತನಾಡಿದ ಅವರು, ರಾಜ್ಯ ಆಯೋಗದಲ್ಲಿ 7 ಸಾವಿರ ಜಿಲ್ಲಾ ಆಯೋಗದಲ್ಲಿ 7 ಸಾವಿರ ಪ್ರಕರಣಗಳು ಬಾಕಿ ಉಳಿದಿದ್ದು ಇವುಗಳನ್ನು ಶೀಘ್ರವಾಗಿ ವಿಲೇವಾರಿ ಮಾಡುವ ಮುಖಾಂತರ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗವನ್ನು ಪ್ರಥಮ ಸ್ಥಾನಕ್ಕೇರಿಸುವ ಗುರಿ ಹೊಂದಲಾಗಿದೆ ಎಂದರು.

ಪ್ರಕರಣಗಳ ವಿಲೇವಾರಿ, ವಿಚಾರಣೆಗೆ ಡಿಜಿಟಲ್ ಸ್ಪರ್ಶ ನೀಡಲಾಗುವುದು. ಕಕ್ಷಿದಾರರು ಹಾಗೂ ಗ್ರಾಹಕರಿಗೆ ಶೀಘ್ರ ಮತ್ತು ಪಾರದರ್ಶಕವಾಗಿ ನ್ಯಾಯ ವಿತರಣೆ ಮಾಡಲಾಗುವುದು. ರಾಜ್ಯ ಆಯೋಗ ಮತ್ತು ಜಿಲ್ಲಾ ಆಯೋಗದ ಆದೇಶಗಳನ್ನು ಆ್ಯಪ್ ಗಳ ಮೂಲಕ ತಲುಪಿಸುವ ಕಾರ್ಯ ಮಾಡಲಾಗುವುದು ಎಂದರು.

ಆಯೋಗದ ಆದೇಶಗಳು ಮತ್ತು ಸಂಪೂರ್ಣ ಮಾಹಿತಿ ಬೆರಳ ತುದಿಯಲ್ಲಿ ಸಿಗುವಂತೆ ಮಾಡಲಾಗುವುದು. ಖಾಲಿಯಿರುವ ಹುದ್ದೆಗಳ ಭರ್ತಿಗೂ ಕ್ರಮವಹಿಸಲಾಗುವುದು. ಕರ್ನಾಟಕ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗಕ್ಕೆ ತನ್ನದೇ ಆದ ಇತಿಹಾಸವಿದೆ. ಮಾತಿಗಿಂತ ಕೃತಿ ಮುಖ್ಯ ಎಂದರು.

ಕರ್ನಾಟಕ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಪ್ರಭಾರ ಅಧ್ಯಕ್ಷರಾದ ರವಿಶಂಕರ್ ಅವರು ಅಧಿಕಾರ ಹಸ್ತಾಂತರಿಸಿದರು. ಈ ಸಂದರ್ಭದಲ್ಲಿ ಆಯೋಗದ ರಿಜಿಸ್ಟರ್ ಮಲ್ಲಿಕಾರ್ಜುನ ಎಮ್. ಕಮಟಗಿ, ಆಯೋಗದ ಸದಸ್ಯರಾದ ಸುನೀತಾ ಬಾಗೇವಾಡಿ ಸೇರಿದಂತೆ ಆಯೋಗದ ಸದಸ್ಯರು ಉಪಸ್ಥಿತರಿದ್ದರು.

ಸಚಿವ ಚಲುವರಾಯಸ್ವಾಮಿ, ಶಾಸಕ ದಿನೇಶ್ ಗೂಳಿಗೌಡ ಅಭಿನಂದನೆ : ಕರ್ನಾಟಕ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿದ ನ್ಯಾಯಮೂರ್ತಿ ಟಿ.ಜಿ.ಶಿವಶಂಕರೇಗೌಡ ಅವರನ್ನು ಕೃಷಿ ಸಚಿವರಾದ ಚಲುವರಾಯಸ್ವಾಮಿ, ಶಾಸಕರಾದ ದಿನೇಶ್ ಗೂಳಿಗೌಡ ಅವರು ಅಭಿನಂದಿಸಿ ಶುಭಕೋರಿದರು.

## ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ

**ಚಿಕ್ಕಮಗಳೂರು :** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ಪಿ.ಯು.ಸಿ, ಐ.ಟಿ.ಐ ಮತ್ತು ಡಿಪ್ಲೋಮ ವಿದ್ಯಾರ್ಥಿಗಳಿಗೆ ಪ್ರವೇಶಕ್ಕೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

2025-26 ನೇ ಸಾಲಿನ ಮೆಟ್ರಿಕ್ ನಂತರದ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿಗಳಲ್ಲಿ ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ-1,2ಎ, 2ಬಿ,3ಎ,3ಬಿ, ಪ.ಜಾ ಮತ್ತು ಪ.ವರ್ಗದ ವಿದ್ಯಾರ್ಥಿಗಳ ಪ್ರವೇಶಕ್ಕೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಜೂನ್ 20 ಕೊನೆಯ ದಿನವಾಗಿರುತ್ತದೆ. ವಿದ್ಯಾರ್ಥಿಗಳು https://shp.karnataka.gov.in/bcwd ವೆಬ್ ಸೈಟ್ ಮೂಲಕ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗೆ ದೂ (8050770004, 8050770005) ಅನ್ನು ಸಂಪರ್ಕಿಸಬಹುದು ಎಂದು ಹಿಂದುಳಿದ ವರ್ಗಗಳ ತಾಲ್ಲೂಕು ಕಲ್ಯಾಣಾಧಿಕಾರಿ ತಿಳಿಸಿದ್ದಾರೆ.

## ಹೂವಿನ ತ್ಯಾಜ್ಯದಿಂದ ಊದುಬತ್ತಿ ತಯಾರಿ

**ಚಿಕ್ಕಮಗಳೂರು :** ನಗರಸಭೆ ವ್ಯಾಪ್ತಿಯ ವಿವಿಧ ವಾರ್ಡ್‌ಗಳಲ್ಲಿರುವ ಹೂವಿನ ಅಂಗಡಿಗಳಲ್ಲಿ ಹೂವಿನ ಮಾರಾಟದ ನಂತರ ಪ್ರತೀ ದಿನ 30 ರಿಂದ 40 ಕೆ.ಜಿ.ಯಷ್ಟು ಹೂವಿನ ತ್ಯಾಜ್ಯ ಉತ್ಪತ್ತಿಯಾಗುತ್ತಿದೆ. ಈ ತ್ಯಾಜ್ಯವು ಘನತ್ಯಾಜ್ಯದೊಂದಿಗೆ ಮಿಶ್ರವಾಗುತ್ತಿದ್ದು, ನಿರುಪಯುಕ್ತವಾಗುತ್ತಿರುತ್ತದೆ. ಈ ತ್ಯಾಜ್ಯದಿಂದ ಧೂಪದ ಬತ್ತಿ, ಊದುಬತ್ತಿ ತಯಾರಿಸಲು ಇಚ್ಛೆ ಇರುವ ಸ್ವಸಹಾಯ ಸಂಘ-ಸಂಸ್ಥೆಗಳು ಆಸಕ್ತಿ ಹೊಂದಿದಲ್ಲಿ ಈ ತ್ಯಾಜ್ಯವನ್ನು ಪ್ರತ್ಯೇಕವಾಗಿ ವಿಂಗಡಿಸಿ ನೀಡಲಾಗುವುದು.

### ಜಿಲ್ಲಾಸ್ಪತ್ರೆಗೆ ಮಕ್ಕಳ ಹಕ್ಕುಗಳ ಆಯೋಗದ ಸದಸ್ಯರ ಭೇಟಿ

# ಮಕ್ಕಳ ಆರೈಕೆ ಕಾರ್ಯಕ್ರಮದಲ್ಲಿ ಲೋಪ ಅಸಮಾಧಾನ

**ಚಿಕ್ಕಮಗಳೂರು:** ನಗರದ ಮಲ್ಲೇಗೌಡ ಜಿಲ್ಲಾಸ್ಪತ್ರೆಗೆ ದಿಢೀರ್ ಭೇಟಿನೀಡಿದ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ಆಯೋಗದ ಸದಸ್ಯರು ತಂಡವು ಮಕ್ಕಳ ಆರೈಕ ಸಂಬಂಧ ಕಾರ್ಯಕ್ರಮಗಳಲ್ಲಿ ಲೋಪಗಳಿರುವುದನ್ನು ಗುರುತಿಸಿ ಅಸಮಾಧಾನ ವ್ಯಕ್ತಪಡಿಸಿದರು.



ಆಯೋಗದ ಸದಸ್ಯರುಗಳಾದ ಶಶಿಧರ ಕೋಸಂಬೆ ಹಾಗೂ ಡಾ. ಕೆ.ಟಿ.ತಿಪ್ಪೆಸ್ವಾಮಿ ನೇತೃತ್ವದ ತಂಡ ಅಪೌಷ್ಠಿಕ ಮಕ್ಕಳ ಪುನಃಶ್ಚೇತನ ಘಟಕ, ವಿಶೇಷ ನವಜಾತ ಶಿಶುಗಳ ಆರೈ-ಕೆ ಘಟಕ ಕಾಂಗರೂ ಮದರ್ ಕೇರ್, ಮಕ್ಕಳ ವಾರ್ಡ್, ಹೆರಿಗೆ ವಾರ್ಡ್, ಹೊರ ರೋಗಿ ವಿಭಾಗಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿತು.

ರಾಷ್ಟ್ರೀಯ ಬಾಲ ಸ್ವಾಸ್ಥ್ಯ ಕಾರ್ಯಕ್ರಮ ಮತ್ತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಪ್ರಕಾರ ಜಿಲ್ಲೆಯಲ್ಲಿ ತೀವ್ರ ಅಪೌಷ್ಠಿಕತೆಯಿಂದ ಬಳಲುತ್ತಿರುವ ಮಕ್ಕಳ ಸಂಖ್ಯೆ 45 ಇವೆ. ಇವುಗಳ ಆರೈಕೆಗೆಂದು ಹತ್ತು ಹಾಸಿಗೆಯ ಸಾಮರ್ಥ್ಯವುಳ್ಳ ಅಪೌಷ್ಠಿಕ ಮಕ್ಕಳ ಪುನಃಶ್ಚೇತನ ಆರೈಕೆ ಘಟಕವಿದೆ ಆದರೆ, ಕೇವಲ ಒಂದು ಮಗು ಮಾತ್ರ ದಾಖಲಾಗಿತ್ತು, ಅದು ಸಹ ಹೊರರೋಗಿ ವಿಭಾಗಲ್ಲಿ ನೊಂದಾಯಿಸಿಕೊಂಡ ಮಗುವಾಗಿತ್ತು. ಇದನ್ನು ಕಂಡ ಆಯೋಗದ ಸದಸ್ಯರು ಅಸಮಾಧಾನ ವ್ಯಕ್ತಪಡಿಸಿದರು.

ಜಿಲ್ಲೆಯಲ್ಲಿ ರಾಷ್ಟ್ರೀಯ ಬಾಲ ಸ್ವಾಸ್ಥ್ಯ ಕಾರ್ಯಕ್ರಮದ ತಂಡದವರು ಏನು ಮಾಡುತ್ತಿದ್ದಾರೆ ಎಂದು ಸ್ಥಳದಲ್ಲಿದ್ದ ಡಿಹೆಚ್‌ಓ ಅವರನ್ನು ಪ್ರಶ್ನಿಸಿದರು. ಅಡುಗೆ ಮನೆ ಪ್ರವೇಶಿಸಿದ ಸದಸ್ಯರು ಅಲ್ಲಿನ ಅವ್ಯವಸ್ಥೆಯ ಕಂಡು ದಂಗಾದರು. ಮಕ್ಕಳ ಆರೈಕೆ ಬಗ್ಗೆ ನಿಗಾ ವಹಿಸುವಂತೆ ಸಿಬ್ಬಂದಿಗಳಿಗೆ ಸೂಚನೆ ನೀಡಿದರು.

ವಿಶೇಷ ನವಜಾತ ಶಿಶುಗಳ ಆರೈಕೆ ಘಟಕಕ್ಕೆ ಭೇಟಿ ನೀಡಿದಾಗ ನವಜಾತ ಶಿಶುಗಳಿಗೆ ಸರಿಯಾದ ರೀತಿಯಲ್ಲಿ ಆರೈ-ಕೆ ಮಾಡದಿರುವುದನ್ನು ಕಂಡು ಗರಂ ಆದರು. ಆಸ್ಪತ್ರೆಯಲ್ಲಿ ಜನಿಸಿದ ಮಕ್ಕಳಿಗೆ ಮಾತ್ರ ಸೂಕ್ತ ಆರೈಕೆ ಸಿಗುತ್ತಿದೆ. ಹೊರಗಿನಿಂದ ಬಂದ ಮಕ್ಕಳಿಗೆ ಸರಿಯಾಗಿ ಸ್ಪಂದನೆ ಸಿಗುತ್ತಿಲ್ಲ. ಈ ರೀತಿ ತಾರತಮ್ಯ ಏಕೆ ಎಂದು ಪ್ರಶ್ನಿಸಿದರು.

ಈ ಭೂಮಿಯ ಮೇಲೆ ಜನಿಸುವ ಪ್ರತಿಯೊಂದು ಮಗುವಿನ ರಕ್ಷಣೆ ಮಾಡುವ ಜವಾಬ್ದಾರಿ ನಮ್ಮದು, ಹೀಗಾಗಿ ಇದನ್ನು ಕೂಡಲೇ ಸರಿಪಡಿಸಿ ಎಂದು ಡಿಎಸ್ ಅವರಿಗೆ ಖಡಕ್ ಎಚ್ಚರಿಕೆ ನೀಡಿದರು.

**ಸ್ಕ್ಯಾನಿಂಗ್ ಸೆಂಟರ್ ಭೇಟಿ**

ನಗರದ ಲಕ್ಷ್ಮಿ ನರ್ಸಿಂಗ್ ಹೋಂ ಮತ್ತು ಪ್ರಶಾಂತಿ ನರ್ಸಿಂಗ್ ಹೋಂಗಳ ಸ್ಕ್ಯಾನಿಂಗ್ ಸೆಂಟರ್‌ಗಳಿಗೆ ಭೇಟಿನೀಡಿ ಆಯೋಗ ಪರಿಶೀಲನೆ ನಡೆಸಿದ ಸದಸ್ಯರು ಪಿಸಿಪಿಎನ್‌ಡಿಟಿ ಕಾಯ್ದೆ ಪ್ರಕಾರ ಸ್ಕ್ಯಾನಿಂಗ್ ಸೆಂಟರ್‌ಗಳು ಕಾರ್ಯ ನಿರ್ವಹಿಸುತ್ತಿಲ್ಲ, ಆದರೆ ನೋಡಲ್ ಅಧಿಕಾರಿ ಇದೆಲ್ಲ ಗಮನಿಸದೆ ಇರುವುದು ನೋವಿನ ಸಂಗತಿ ಎಂದು ಕಳವಳ ವ್ಯಕ್ತಪಡಿಸಿದರು.

# ಜಾತಿ ಸಮೀಕ್ಷೆ: ಪ.ಜಾ ಸಮುದಾಯ ಜಾತಿ-ಉಪಜಾತಿ ನಮೂದಿಸಲು ಸಹಕರಿಸಿ : ದೇವರಾಜ್



**ಚಿಕ್ಕಮಗಳೂರು:** ಜಾತಿ ಸಮೀಕ್ಷೆಗೆ ಮನೆಗೆ ಭೇಟಿ ನೀಡುವ ಗಣತಿದಾರರಿಗೆ ಪ.ಜಾ, ಪ.ಪಂ ಸಮುದಾಯದವರು ತಮ್ಮ ಜಾತಿ-ಉಪಜಾತಿಯನ್ನು ಸಮೀಕ್ಷೆ ಕಾಲಂನಲ್ಲಿ ಕಡ್ಡಾಯವಾಗಿ ನಮೂದಿಸಲು ಸಹಕರಿಸಿದಾಗ ಜಾತಿ ಸಮೀಕ್ಷೆ ಕಾರ್ಯ ಪರಿಪೂರ್ಣವಾಗುತ್ತದೆ ಎಂದು ಉಪವಿಭಾಗಾಧಿಕಾರಿ ಹಾಗೂ ನೋಡಲ್ ಅಧಿಕಾರಿ ದೇವರಾಜ್ ಮನವಿ ಮಾಡಿದರು.

ಅವರು ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಜಾತಿ ಸಮೀಕ್ಷೆಯ ಕುರಿತು ಮಾಹಿತಿ ಸಂಗ್ರಹಣೆಯ ತಾಲ್ಲೂಕು ಮಟ್ಟದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಈ ಸಮೀಕ್ಷೆಯಲ್ಲಿ ಪರಿಶಿಷ್ಟ ಜನಾಂಗದವರು ಪಡೆದಿರುವ ಶಿಕ್ಷಣ, ವೃತ್ತಿ, ವಾಸಿಸುವ ಪ್ರದೇಶ ಹೊಂದಿರುವ ಸೌಲಭ್ಯಗಳು ಇನ್ನೂ ಮುಂತಾದ ಅಗತ್ಯ ಸಾಮಾನ್ಯ ಮಾಹಿತಿಗಳನ್ನು ಜಾತಿ ಗಣತಿದಾರರಿಗೆ ನೀಡಬೇಕೆಂದು ವಿನಂತಿಸಿದರು.

ಈ ರೀತಿಯ ಮಾಹಿತಿ ಕೊಡುವುದರಿಂದ ಈಗ ಲಭ್ಯವಿರುವ ಬಿಪಿಎಲ್ ಪಡಿತರ ಚೀಟಿ ಹಾಗೂ ಇನ್ನಿತರ ಸೌಲಭ್ಯಗಳನ್ನು ಕಡಿತ ಮಾಡುವುದಿಲ್ಲ ಎಂದು ಸ್ಪಷ್ಟಪಡಿಸಿದ ಅವರು, ಆಯೋಗದ ನಿರ್ದೇಶನದಂತೆ ಮಾತ್ರ ಜಾತಿ ಸಮೀಕ್ಷೆ ನಡೆಸಲು ಸೂಚನೆ ನೀಡಿದೆ ಎಂದು ಹೇಳಿದರು.

ಚಿಕ್ಕಮಗಳೂರು ತಾಲ್ಲೂಕಿನಲ್ಲಿ ಮೇ.21 ರವರೆಗೆ ಒಟ್ಟು 85371 ಕುಟುಂಬಗಳ ಸಮೀಕ್ಷಾ ಕಾರ್ಯ ಪೂರ್ಣಗೊಂಡಿದ್ದು, ಇದರಲ್ಲಿ ಪ.ಜಾ ಕ್ಕೆ ಸೇರಿದ ಸುಮಾರು 16275 ಕುಟುಂಬಗಳು ಮತ್ತು 69096 ಕುಟುಂಬಗಳು ಪ.ಜಾ ವ್ಯಾಪ್ತಿಯ ಹೊರಗಿನವು ಎಂದು ಮಾಹಿತಿ ನೀಡಿದರು.

ನ್ಯಾಯಮೂರ್ತಿ ಹೆಚ್.ಎನ್ ನಾಗಮೋಹನ್ ದಾಸ್ ಏಕ ವಿಚಾರಣಾ ಆಯೋಗದ ಶಿಫಾರಸ್ಸಿನಂತೆ ಪ.ಜಾ, ಪ.ಪಂ ಒಳ ಮೀಸಲಾತಿ ವರ್ಗೀಕರಣಗೊಳಿಸಲು ಜಾತಿ ಸಮೀಕ್ಷೆಯನ್ನು ಜಿಲ್ಲಾ ವ್ಯಾಪ್ತಿಯಲ್ಲಿ ನಡೆಸುತ್ತಿರುವ ಮಾದರಿಯಲ್ಲಿ ತಾಲ್ಲೂಕು ಮಟ್ಟದಲ್ಲಿ ಮೂರು ಹಂತಗಳಲ್ಲಿ ಸಮೀಕ್ಷೆ ನಡೆಸಲಾಗುವುದು ಎಂದರು.

ಗಣತಿದಾರರು ಮನೆ ಮನೆಗೆ ಭೇಟಿನೀಡಿ ಸಮೀಕ್ಷೆ ಮಾಡುವಂತದ್ದಾಗಿದ್ದು, ಮತಗಟ್ಟೆವಾರು ಶಿಬಿರಗಳಲ್ಲಿ ಮತ್ತು ಸ್ವಯಂ ಘೋಷಣೆಯ ಮೂಲಕ ಈ ಮೂರು ಹಂತಗಳಲ್ಲಿ ಜಾತಿ ಸಮೀಕ್ಷೆ ನಡೆಸಲಾಗುವುದು ಎಂದು ವಿವರಿಸಿದರು.

ಈಗಾಗಲೇ ಮೇ.5 ರಿಂದ ಆರಂಭವಾಗಿದ್ದ ಜಾತಿ ಸಮೀಕ್ಷೆ ಕಾರ್ಯ ಮೇ.17 ಕ್ಕೆ ಮುಕ್ತಾಯಗೊಂಡಿದ್ದು, ಗಡುವನ್ನು ಮೇ.25 ರವರೆಗೆ ವಿಸ್ತರಿಸಿ ಸರ್ಕಾರ ಆದೇಶಿಸಿದೆ. ಶಿಬಿರದಲ್ಲಿ ಸಮೀಕ್ಷೆ ನಡೆಸುವವರು ಮೇ.25 ರಿಂದ 28 ರವರೆಗೆ ಸ್ವಯಂ ಘೋಷಣೆಯಡಿ ಮೇ.19 ರಿಂದ 28 ರವರೆಗೆ ವಿಸ್ತರಣೆ ಮಾಡಲಾಗಿದೆ ಎಂದರು.

ಸ್ವಯಂ ಘೋಷಣೆಯಲ್ಲಿ ಗಣತಿದಾರರು ಮನೆಗೆ ಬಂದಾಗ ಇಲ್ಲದಿರುವವರು ಆನ್‌ಲೈನ್ ಮೂಲಕ ವೆಬ್‌ಸೈಟ್ ಪೋರ್ಟಲ್‌ನಲ್ಲಿ ಘೋಷಣೆ ಮಾಡಿಕೊಳ್ಳಲು ಅವಕಾಶ ಇದೆ ಎಂದು ಹೇಳಿದರು.

# ದೇಶದ ಆಸ್ತಿಯಾದ ಮಕ್ಕಳನ್ನು ಸಂರಕ್ಷಿಸುವುದು ಎಲ್ಲರ ಜವಾಬ್ದಾರಿ: ಕೆ.ನಾಗಣ್ಣಗೌಡ

**ಚಿಕ್ಕಮಗಳೂರು:** ಮಕ್ಕಳು ಈ ದೇಶದ ನಿಜವಾದ ಆಸ್ತಿ, ಅವರನ್ನು ಸಂರಕ್ಷಿಸುವುದು ನಮ್ಮೆಲ್ಲರ ಸಾಮಾಜಿಕ ಜವಾಬ್ದಾರಿ, ಮಕ್ಕಳ ರಕ್ಷಣೆಗಾಗಿ ಇರುವ ಯೋಜನೆಗಳು ಹಾಗೂ ಕಾಯ್ದೆಗಳನ್ನು ಅರಿತುಕೊಂಡು ಎಲ್ಲಾ ಇಲಾಖೆಗಳ ಸಂಯೋಜನೆಯೊಂದಿಗೆ ಕಾರ್ಯ ನಿರ್ವಹಿಸಬೇಕು ಎಂದು ಕರ್ನಾಟಕ ರಾಜ್ಯ ಮತ್ತು ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಕೆ.ನಾಗಣ್ಣಗೌಡ ಅವರು ತಿಳಿಸಿದರು.




ಇಂದು ನಗರದ ಜಿಲ್ಲಾ ಪಂಚಾಯಿತಿ ಅಬ್ದುಲ್ ನಜೀರ್‌ಸಾಬ್ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಂದಾಯ, ಕಾರ್ಮಿಕ ಹಾಗೂ ಸ್ಥಳೀಯಾಡಳಿತ ಸಂಸ್ಥೆಗಳ ಇಲಾಖೆಗಳು ಒಂದು ತಂಡದ ರೀತಿ ಸಮನ್ವಯತೆಯಿಂದ ಕಾರ್ಯ ನಿರ್ವಹಿಸಬೇಕು. ಪೋಕ್ಸೋ ಕಾಯ್ದೆ, ಬಾಲ್ಯ ವಿವಾಹ ನಿಷೇಧ ಕಾಯ್ದೆ, ಭ್ರೂಣ ಹತ್ಯೆ ನಿಷೇಧ ಕಾಯ್ದೆ, ಮಕ್ಕಳ ಮಾರಾಟ ನಿಷೇಧ ಕಾಯ್ದೆ -ಈ ಕಾಯ್ದೆಗಳನ್ನು ಮಕ್ಕಳ ಸಂರಕ್ಷಣೆಗಾಗಿ ಸರ್ಕಾರ ಕಾನೂನು ಜಾರಿಗೆ ತಂದಿದೆ. ಅಭಿವೃದ್ಧಿ ಆಯೋಗದ ನೇತೃತ್ವದಲ್ಲಿ ಬಾಲ್ಯ ವಿವಾಹ ತಡೆ ಕಾಯ್ದೆ ರಾಜ್ಯ ಮಟ್ಟದಲ್ಲಿ ಮಾತ್ರ ಇದೆ. ಜಿಲ್ಲಾ, ತಾಲ್ಲೂಕು, ಗ್ರಾಮ ಪಂಚಾಯಿತಿ ಹಾಗೂ ಗ್ರಾಮ ಮಟ್ಟದಲ್ಲಿ ಬಾಲ್ಯ ವಿವಾಹ ತಡೆಗಟ್ಟುವ ಸಮಿತಿಗಳು ಅಸ್ತಿತ್ವದಲ್ಲಿವೆ. ತಾಲ್ಲೂಕು ಮಟ್ಟದ ಸಮಿತಿ ಸಭೆಗಳು 3 ತಿಂಗಳಿಗೊಮ್ಮೆ ತಹಶೀಲ್ದಾರ್ ನೇತೃತ್ವದಲ್ಲಿ ಸಭೆಯನ್ನು ಕಡ್ಡಾಯವಾಗಿ ನಡೆಸಬೇಕು ಎಂದು ಹೇಳಿದರು.

ಅಭಿವೃದ್ಧಿ ಯೋಜನಾಧಿಕಾರಿ ಮತ್ತು ಇತರ ಇಲಾಖೆಗಳ ಅಧಿಕಾರಿಗಳು ಸೇರಿ ಸಭೆಯನ್ನು ನಡೆಸಿ, ತಮ್ಮ ಕಾರ್ಯ ವ್ಯಾಪ್ತಿಯ ಸ್ಥಿತಿಗತಿಗಳನ್ನು ಅರಿತುಕೊಂಡು ಬಾಲ್ಯ ವಿವಾಹ ಪ್ರಯತ್ನಗಳನ್ನು ಪರಿಣಾಮಕಾರಿಯಾಗಿ ತಡೆಯಬೇಕು. ಒಂದು ವೇಳೆ ಬಾಲ್ಯವಿವಾಹ ನಡೆದಿದ್ದರೆ ಅದಕ್ಕೆ ಪ್ರೋತ್ಸಾಹಿಸಿದ ಪೋಷಕರು, ಸಂಬಂಧಿಕರು, ಕಲ್ಯಾಣ ಮಂಟಪದ ಮಾಲೀಕರು, ಪುರೋಹಿತರನ್ನು ಕಾನೂನು ಕ್ರಮಕ್ಕೆ ಒಳಪಡಿಸಬೇಕು ಹಾಗೂ ಅಂತಹ ಮಕ್ಕಳ ಪುನರ್ ವಸತಿಗೆ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು.

ಕೃಷಿಹೊಂಡ, ಕೆರೆ, ಕಟ್ಟೆ, ಬಾವಿಗಳಲ್ಲಿ ಮಕ್ಕಳು ಬಿದ್ದು ಸಾವನ್ನಪ್ಪುತ್ತಿರುವ ಪ್ರಕರಣಗಳು ಹೆಚ್ಚುತ್ತಿದ್ದು, ಇಂತಹ ಘಟನೆಗಳನ್ನು ತಪ್ಪಿಸುವ ನಿಟ್ಟಿನಲ್ಲಿ ಸೂಕ್ತ ಕ್ರಮ ಕೈಗೊಳ್ಳುವಂತೆ ಕೃಷಿ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಆಯೋಗದ ಇನ್ನೋರ್ವ ಸದಸ್ಯ ಡಾ. ಕೆ.ಟಿ. ತಿಪ್ಪೇಸ್ವಾಮಿ ಮಾತನಾಡಿ, ಸರ್ಕಾರಿ ಆಸ್ಪತ್ರೆಗಳಲ್ಲಿರುವ ಶಿಶು ಆರೈಕೆ ಗೃಹಗಳನ್ನು ಸದ್ಬಳಕೆ ಮಾಡಿಕೊಳ್ಳಬೇಕು. ಖಾಸಗಿ ಸ್ಕ್ಯಾನಿಂಗ್ ಸೆಂಟರ್‌ಗಳನ್ನು ಅವಲಂಬಿಸದೆ ಸರ್ಕಾರಿ ಆಸ್ಪತ್ರೆಯಲ್ಲಿರುವ ವ್ಯವಸ್ಥೆಯನ್ನೇ ಬಳಸಿಕೊಳ್ಳುವಂತೆ ಸೂಚಿಸಿದರು.

ಮಹಿಳಾ ವಸತಿ ನಿಲಯಗಳಲ್ಲಿ ವಿದ್ಯಾರ್ಥಿಗಳ ಹಾಜರಾತಿಗಾಗಿ ಬಯೋಮೆಟ್ರಿಕ್‌ಗಳನ್ನು ಕಡ್ಡಾಯವಾಗಿ ಅಳವಡಿಸುವಂತೆ ಹಾಗೂ ಪೌಷ್ಟಿಕಾಂಶ, ಶುಚಿ-ರುಚಿಯಾದ ಆಹಾರವನ್ನು ನೀಡುವುದರ ಜೊತೆಗೆ ಸ್ನಾನಗೃಹಗಳಲ್ಲಿ ಬಿಸಿ ನೀರಿನ ವ್ಯವಸ್ಥೆ ಸಮರ್ಪಕವಾಗಿ ಕಲ್ಪಿಸಿ ಚರ್ಮರೋಗ ಬಾರದಂತೆ ಎಚ್ಚರಿಕೆ ವಹಿಸಲು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಸಭೆಯಲ್ಲಿ ಜಿ.ಪಂ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಹೆಚ್.ಎಸ್.ಕೀರ್ತನಾ, ರಾಜ್ಯ ಮಕ್ಕಳ ಹಕ್ಕುಗಳ ಆಯೋಗದ ಸದಸ್ಯರಾದ ಮಂಜು, ವೆಂಕಟೇಶ್, ಅಪರ್ಣಾ ಎಂ. ಕೊಳ್ಳಾ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

ಮೆಸ್ಕಾಂ ಅಧಿಕಾರಿಗಳಿಗೆ ಇತ್ತೀಚಿನ ದಿನಗಳಲ್ಲಿ ದಿನದಿಂದ ದಿನಕ್ಕೆ ಶಾಲೆ, ಅಂಗನವಾಡಿ, ವಸತಿ ನಿಲಯಗಳ ಮೇಲಿನ ವಿದ್ಯುತ್ ತಂತಿಗಳಿಂದಾಗುವ ಅಪಾಯ ತಪ್ಪಿಸುವಂತೆ ಸೂಚಿಸಿದರು.

**-ಶಶಿಧರ್ ಕೊಸಂಬೆ**
ಆಯೋಗದ ಸದಸ್ಯ

# ಹಳ್ಳಿಗಳು ಅಭಿವೃದ್ಧಿಯಾದರೆ ದೇಶಕ್ಕೆ ಬಹುದೊಡ್ಡ ಶಕ್ತಿ : ರಂಭಾಪುರಿ ಶ್ರೀ

**ಕಲಬುರ್ಗಿ:** ಭಾರತ ದೇಶ ಹಳ್ಳಿಗಳ ದೇಶ. ಹಳ್ಳಿಗಳು ಹೆಚ್ಚು ಅಭಿವೃದ್ಧಿಯಾದರೆ ದೇಶಕ್ಕೆ ಬಹುದೊಡ್ಡ ಶಕ್ತಿ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ನಗರದ ತಾಜ್ ಸುಲ್ತಾನಪುರದಲ್ಲಿ ಚಿನ್ನದ ಕಂತಿ ಸಾಂಸ್ಕೃತಿಕ ಸಭಾಭವನದ ಉದ್ಘಾಟನಾ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಸ್ವಾತಂತ್ರ್ಯ ಬಂದು 77 ವರ್ಷಗಳು ಗತಿಸಿದರೂ ಇನ್ನೂ ಹಲವಾರು ಹಳ್ಳಿಗಳಿಗೆ ಓಡಾಡುವ ಒಳ್ಳೆಯ ರಸ್ತೆ, ಶುದ್ಧವಾದ ಕುಡಿಯುವ ನೀರು, ಓದುವ ಮಕ್ಕಳಿಗೆ ಉತ್ತಮವಾದಂಥ ಶಾಲೆಗಳಿಲ್ಲ. ನಗರ ಪ್ರದೇಶಗಳು ಹೆಚ್ಚು ಬೆಳೆಯುತ್ತಾ ಅತಿಯಾದ ಜನಸಂಖ್ಯೆಯಿಂದ ತುಂಬಿತುಳುಕುತ್ತಿವೆ. ಹಳ್ಳಿಯ ಜನ ನಗರಕ್ಕೆ ಸೇರುವುದರಿಂದ ಗ್ರಾಮೀಣ ಭಾಗದಲ್ಲಿ ದುಡಿಯುವ ಜನರು ಇಲ್ಲದಂತಾಗಿದೆ. ಇದರಿಂದಾಗಿ ಕೃಷಿ ಭೂಮಿಯಲ್ಲಿ ಕೆಲಸ ಮಾಡುವ ಜನರ ಕೊರತೆಯಾಗಿದೆ.

ನಗರಗಳಂತೆ ಹಳ್ಳಿಗಳು ಅಭಿವೃದ್ಧಿಯಾದರೆ ಜನಸಂಖ್ಯೆಯನ್ನು ನಿಯಂತ್ರಿಸಬಹುದು. ಆದ್ದರಿಂದ ಪಕ್ಷಾತೀತವಾಗಿ ಜಾತ್ಯಾತೀತವಾಗಿ ನಮ್ಮೆಲ್ಲ ರಾಜಕೀಯ ಧುರೀಣರು ಗಮನಹರಿಸುವ ಅವಶ್ಯಕತೆ ಇದೆ. ತಾಜ್ ಸುಲ್ತಾನಪುರದಲ್ಲಿರುವ ಶ್ರೀನಿವಾಸ ಸರಡಗಿಯ ಚಿನ್ನದ ಕಂತಿ ಚಿಕ್ಕ ವೀರೇಶ್ವರ ಹಿರೇಮಠದ ಡಾ.



ರೇವಣಸಿದ್ಧ ಶಿವಾಚಾರ್ಯ ಸ್ವಾಮಿಗಳು ಶ್ರೀಮಠದ ಆವರಣದಲ್ಲಿ ಸಾಂಸ್ಕೃತಿಕ ಭವನ ನಿರ್ಮಿಸಿ ಗ್ರಾಮದ ಜನತೆಗೆ ಬಹುದೊಡ್ಡ ಅನುಕೂಲವಾಗುವ ಕಾರ್ಯವನ್ನು ಮಾಡಿದ್ದಾರೆ. ಇದರ ಸದುಪಯೋಗವನ್ನು ಗ್ರಾಮಸ್ಥರು ಪಡೆಯುವುದರ ಜೊತೆಗೆ ಮಠದ ಜನಪರ ಕಾರ್ಯಗಳಿಗೆ ಭಕ್ತರು ಸಹಕರಿಸುವಂತಾಗಬೇಕು ಎಂದರು.

ಕಲಬುರ್ಗಿ ದಕ್ಷಿಣ ಮತಕ್ಷೇತ್ರದ ಅಲ್ಲಮಪ್ರಭು ಪಾಟೀಲ್ ಅವರು ತಮ್ಮ ಅನುದಾನದಲ್ಲಿ ಸಭಾಂಗಣವನ್ನು ನಿರ್ಮಿಸಿಕೊಟ್ಟರೆ ಎಲ್ಲ ಸಮುದಾಯದ ಜನತೆಗೆ ಬಹಳಷ್ಟು ಅನುಕೂಲವಾಗುತ್ತದೆ. ಈ ಹಿಂದಿನ ಮಾಜಿ ಶಾಸಕರಾದ ದತ್ತಾತ್ರೇಯ ಪಾಟೀಲ್ ಅವರು ಈ ಸಾಂಸ್ಕೃತಿಕ ಭವನದ ನಿರ್ಮಾಣಕ್ಕೆ ಸಹಕರಿಸಿರುವುದನ್ನು ಕಂಡು ತಮ್ಮ ಸಂತೋಷವನ್ನು ವ್ಯಕ್ತಪಡಿಸಿದರು. ಶ್ರೀನಿವಾಸ ಸರಡಗಿ ಶ್ರೀಗಳು ಧಾರ್ಮಿಕ ಜಾಗೃತಿಯ ಜೊತೆಗೆ ಸಾಮಾಜಿಕ ಸತ್ಕಾರ್ಯಗಳನ್ನು ಮಾಡುತ್ತಿರುವುದು ಅತ್ಯಂತ ಸಂತೋಷವನ್ನು ಉಂಟುಮಾಡುತ್ತದೆ ಎಂದರು.

ಕಲಬುರ್ಗಿ ಗ್ರಾಮೀಣ ಭಾಗದ ಶಾಸಕ ಬಸವರಾಜ್ ಮತ್ತಿಮಡು ಸಮಾರಂಭ ಉದ್ಘಾಟಿಸಿ ಶ್ರೀ ಮಠದ ಅಭಿವೃದ್ಧಿಗೆ ಹೆಚ್ಚಿನ ಸಹಕಾರ ಕೊಡುವುದಾಗಿ ಭರವಸೆ ನೀಡಿದರು. ಕಲಬುರ್ಗಿ ದಕ್ಷಿಣ ಭಾಗದ ಶಾಸಕ ಅಲ್ಲಮಪ್ರಭು ಪಾಟೀಲ್ ಮಾತನಾಡಿ, ಮುಂಬರುವ ದಿನಗಳಲ್ಲಿ ಸಭಾಂಗಣ ನಿರ್ಮಾಣಕ್ಕೆ ವಿಶೇಷವಾದಂತಹ ಅನುದಾನವನ್ನು ದೊರಕಿಸಿಕೊಡಲು ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಮಾತು ಕೊಟ್ಟರು. ಮಾಜಿ ಶಾಸಕ ದತ್ತಾತ್ರೇಯ ಪಾಟೀಲ್ ಮಾತನಾಡಿ, ಮಠ ಮಂದಿರಗಳು ಸಾರ್ವಜನಿಕವಾಗಿ ಜನರಿಗೆ ಅನುಕೂಲ ಕಲ್ಪಿಸಿ ಕೊಡುವ ನಿಟ್ಟಿನಲ್ಲಿ ಪ್ರಾಮಾಣಿಕ ಪ್ರಯತ್ನವನ್ನು ಮಾಡುತ್ತಾ ಬಂದಿವೆ.

## ದೃಶ್ಯಕಲಾ ಮಹಾವಿದ್ಯಾಲಯ ವಜ್ರ ಮಹೋತ್ಸವ ಸಮಾರೋಪ ಸಮಾರಂಭ

**ದಾವಣಗೆರೆ;** ದಾವಣಗೆರ ವಿಶ್ವವಿದ್ಯಾನಿಲಯ ದೃಶ್ಯಕಲಾ ಮಹಾವಿದ್ಯಾಲಯದ ವಜ್ರ ಮಹೋತ್ಸವ ಸಮಾರೋಪ ಸಮಾರಂಭ ಮತ್ತು ರಾಷ್ಟ್ರೀಯ ಮಟ್ಟದ ಕಾರ್ಯಾಗಾರವನ್ನು ಮೇ30 ಮತ್ತು 31 ರಂದು ಕಾಲೇಜಿನ ಆವರಣದಲ್ಲಿ ಏರ್ಪಡಿಸಲಾಗಿದೆ.

ಮೇ.30 ರಂದು ಬೆಳಿಗ್ಗೆ 11 ಗಂಟೆಗೆ ದಕ್ಷಿಣ ವಿಧಾನಸಭಾ ಶಾಸಕರಾದ ಡಾ.ಶಾಮನೂರು ಶಿವಶಂಕರಪ್ಪ ಸಮಾರೋಪ ಸಮಾರಂಭವನ್ನು ಉದ್ಘಾಟಿಸುವರು. ದಾವಣಗೆರೆ ವಿವಿ ಕುಲಪತಿ ಪ್ರೊ.ಬಿ.ಡಿ.ಕುಂಬಾರ ಅಧ್ಯಕ್ಷತೆ ವಹಿಸುವರು.

ಮುಖ್ಯಅತಿಥಿಗಳಾಗಿ ಮುಂಬಯಿಯ ಓಗಿಲ್ವಿ ಸಂಸ್ಥೆಯ ಕ್ರಿಯೇಟಿವ್ ಡೈರೆಕ್ಟರ್ ಹರೀಶ್ ಆಚಾರ್ಯ ಭಾಗವಹಿಸುವರು. ಪರೀಕ್ಷಾಂಗ ಕುಲಸಚಿವರಾದ ಶಬ್ಬೀರ್ ಭಾಷಗಂಟಿ, ಪ್ರೊ.ಸಿ.ಕೆ. ರಮೇಶ,

ಹಣಕಾಸು ಅಧಿಕಾರಿ ದ್ಯಾಮನಗೌಡ ಮುದ್ದನಗೌಡ್ರ, ಪ್ರಾಚಾರ್ಯರರಾದ ಡಾ.ಜೈರಾಜ್ ಎಂ. ಚಿಕ್ಕಪಾಟೀಲ್ ಪಾಲ್ಗೊಳ್ಳುವರು. ಹಾಗೂ ಮಧ್ಯಾಹ್ನ 12 ಗಂಟೆಯಿಂದ ರಾಷ್ಟ್ರೀಯ ಸಮ್ಮೇಳನ, ಕಾರ್ಯಾಗಾರ, ಪ್ರಾತ್ಯಕ್ಷಿಕೆ, ಸಾಂಸ್ಕೃತಿಕ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ದಿನಾಂಕ 31 ರಂದು ಸಂಜೆ 5 ಗಂಟೆಗೆ ಗಣಿ, ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ್ ಸಮಾರೋಪ ಸಮಾರಂಭ ಹಾಗೂ ಸ್ಮರಣ ಸಂಚಿಕೆಯನ್ನು ಉದ್ಘಾಟಿಸುವರು. ಲೋಕಸಭಾ ಸದಸ್ಯರಾದ ಡಾ.ಪ್ರಭಾ ಮಲ್ಲಿಕಾರ್ಜುನ ದೃಶ್ಯದರ್ಪಣ' ಸ್ಮರಣ ಸಂಚಿಕೆಯನ್ನು ಬಿಡುಗಡೆ ಮಾಡುವರು. ಕುಲಪತಿ ಪ್ರೊ.ಬಿ.ಡಿ.ಕುಂಬಾರ ಅಧ್ಯಕ್ಷತೆ ವಹಿಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

## ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳ ಪ್ರವೇಶಾತಿಗೆ ಅರ್ಜಿ ಆಹ್ವಾನ

**ದಾವಣಗೆರೆ;** ಪ್ರಸಕ್ತ ಸಾಲಿಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳ ಪ್ರವೇಶಾತಿ ಅರ್ಜಿಗಳನ್ನು ಆನ್ ಲೈನ್ ಮೂಲಕ ಆಹ್ವಾನಿಸಲಾಗಿದೆ.

ಪಿ.ಯು.ಸಿ ಐ.ಟಿ.ಐ ಡಿಪ್ಲೋಮೋ ಹಾಗೂ ಪ್ರಥಮ ವರ್ಷದ ಪದವಿ ಮಟ್ಟದ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದು. ರಾಜ್ಯ ವಿದ್ಯಾರ್ಥಿ ನಿಲಯ ತಂತ್ರಾಂಶದ https://shp.karnataka.gov.in nನಲ್ಲಿ ಜೂನ್ 28 ರೊಳಗಾಗಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕಚೇರಿ ದೂರವಾಣಿ :08192–250022 ಹಾಗೂ ತಾಲ್ಲೂಕು ವಿಸ್ತರಣಾಧಿಕಾರಿಗಳ ದೂ.ಸಂ : 08192–250066 ಅಥವಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿನಿಲಯಗಳನ್ನು ಸಂಪರ್ಕಿಸಲು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿ ತಿಳಿಸಿದ್ದಾರೆ.

## ಯುಪಿಎಸ್‌ಸಿ, ಬ್ಯಾಂಕಿಂಗ್ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಉಚಿತ ತರಬೇತಿ : ಅರ್ಜಿ ಆಹ್ವಾನ

**ದಾವಣಗೆರೆ:** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ 2025–26 ನೇ ಸಾಲಿನಲ್ಲಿ ಯು.ಪಿ.ಎಸ್.ಸಿ. ನಾಗರಿಕ ಸೇವೆ ಮತ್ತು ಬ್ಯಾಂಕಿಂಗ್ ಪಿ.ಒ. ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಉಚಿತ ಪರೀಕ್ಷಾ ಪೂರ್ವ ತರಬೇತಿ ನೀಡುತ್ತಿದ್ದು, ಹಿಂದುಳಿದ ವರ್ಗಗಳ ಪ್ರವರ್ಗ–1, 2(ಎ), 3(ಎ) ಹಾಗೂ 3(ಬಿ) ಗಳಿಗೆ ಸೇರಿದ ಅರ್ಹ ಅಭ್ಯರ್ಥಿಗಳು ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಜೂನ್ 15 ಕೊನೆಯ ಕೊನೆಯ ದಿನವಾಗಿದೆ. ಹೆಚ್ಚಿನ ವಿವರಗಳಿಗಾಗಿ ಇಲಾಖಾವೆಬ್‌ಸೈಟ್ https://bcwd.karnataka.gov.in ಅಥವಾ sevasindhuservices.karnataka.gov.in ನ್ನು ನೋಡಬಹುದು. ಹೆಚ್ಚಿನ ಮಾಹಿತಿಗಾಗಿ ಇಲಾಖೆಯ ಸಹಾಯವಾಣಿ ಸಂಖ್ಯೆ: 8050370006 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

## ಆತಿಥ್ಯ ಕ್ಷೇತ್ರದಲ್ಲಿ ಕೌಶಲ್ಯಾಭಿವೃದ್ಧಿ ತರಬೇತಿ

**ದಾವಣಗೆರೆ;** ಎನ್‌ಸಿಎಸ್ ಟಿ, ಟಿಎಸ್‌ಪಿ ಯೋಜನೆಯಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಪ್ರವಾಸೋದ್ಯಮ ಅತಿಥ್ಯ ಕ್ಷೇತ್ರದಲ್ಲಿ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

ಪರಿಶಿಷ್ಟ ಜಾತಿಗೆ 6 ಗುರಿ, ಪರಿಶಿಷ್ಟ ಪಂಗಡಕ್ಕೆ 5 ಗುರಿಯನ್ನು ನೀಡಲಾಗಿದೆ. ಅರ್ಜಿಯನ್ನು ಸಹಾಯಕ ನಿರ್ದೇಶಕರ ಕಚೇರಿ, ಪ್ರವಾಸೋದ್ಯಮ ಇಲಾಖೆ ಇಲ್ಲಿ ಪಡೆದು ಅಗತ್ಯ ದಾಖಲೆಗಳೊಂದಿಗೆ ಜೂನ್ 6 ರೊಳಗಾಗಿ ಕಚೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಪ್ರವಾಸೋದ್ಯಮ ಇಲಾಖೆ, ಉಪವಿಭಾಗಾಧಿಕರಿಗಳ ಕಚೇರಿ ಆವರಣ ರೈಲ್ವೆ ನಿಲ್ದಾಣ ಪಕ್ಕ ದಾವಣಗೆರೆ ದೂ.ಸಂ:08192–23023 ನ್ನು ಸಂಪರ್ಕಿಸಲು ಇಲಾಖೆ ಅಧಿಕಾರಿ ಕಾವ್ಯ ತಿಳಿಸಿದ್ದಾರೆ.

## ಭಾಗ್ಯಲಕ್ಷ್ಮೀ ಬಾಂಡ್ ಪಡೆದ ಫಲಾನುಭವಿಗಳಿಗೆ ಪರಿಪಕ್ವ ಮೊತ್ತ ಪಾವತಿಗೆ ಪ್ರಾಸ್ತಾವನೆ ಸಲ್ಲಿಕೆ

**ದಾವಣಗೆರೆ;** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ 2006–07ನೇ ಸಾಲಿನಲ್ಲಿ ಭಾಗ್ಯಲಕ್ಷ್ಮಿ ಯೋಜನೆಯಡಿ ಬಾಂಡ್ ಪಡೆದ ಫಲಾನುಭವಿಗಳಿಗೆ ಪರಿಪಕ್ವ ಮೊತ್ತ ಪಾವತಿಸಲು ಪ್ರಸ್ತಾವನೆ ಸಲ್ಲಿಸಬಹುದು.

2006–07ನೇ ಸಾಲಿನಲ್ಲಿ ಭಾಗ್ಯಲಕ್ಷ್ಮಿ ಬಾಂಡ್ ಪಡೆದ ಫಲಾನುಭವಿಗಳು ತಮ್ಮ ಹತ್ತಿರದ ಅಂಗನವಾಡಿ ಕೇಂದ್ರ ಅಥವಾ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ, ನಂದಗೋಕುಲ ಬಿಲ್ಡಿಂಗ್, ದುರ್ಗಾಂಬಿಕಾ ಸ್ಕೂಲ್ ಎದುರು ದಾವಣಗೆರೆ ದೂ.ಸಂ: 08192–263219 ಇಲ್ಲಿಗೆ ಅಗತ್ಯ ದಾಖಲಾತಿಗಳೊಂದಿಗೆ ಮೂಲ ಭಾಗ್ಯಲಕ್ಷ್ಮಿ ಬಾಂಡ್, ಬ್ಯಾಂಕ್ ಖಾತೆಯ ಪಾಸ್ ಪುಸ್ತಕ, ಬಿಪಿಎಲ್ ರೇಷನ್ ಕಾರ್ಡ್, ವ್ಯಾಸಂಗ ಪ್ರಮಾಣ ಪತ್ರ, ತಂದೆ, ತಾಯಿ ಮಗುವಿನ ಆಧಾರ್ ಕಾರ್ಡ್ ಜನನ ಪ್ರಮಾಣ ಪತ್ರ ಸಲ್ಲಿಸಬೇಕೆಂದು ಶಿಶು ಅಭಿವೃದ್ಧಿ ಯೋಜನಾಧಿಕಾರಿ ತಿಳಿಸಿದ್ದಾರೆ.

## ಪದ್ಮಶ್ರೇಣಿ ಪ್ರಶಸ್ತಿಗಳಿಗೆ ಅರ್ಜಿ ಆಹ್ವಾನ

**ಶಿವಮೊಗ್ಗ:** ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು ಸಮಾಜದ ಯಾವುದೇ ಕ್ಷೇತ್ರದಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿರುವ ವ್ಯಕ್ತಿಗಳಿಗೆ 2025ನೇ ಸಾಲಿನ ಪದ್ಮಶ್ರೇಣಿಯ ಪ್ರಶಸ್ತಿಗಳಾದ ಪದ್ಮ ವಿಭೂಷಣ, ಪದ್ಮ ಭೂಷಣ ಮತ್ತು ಪದ್ಮಶ್ರೀ ಪ್ರಶಸ್ತಿಗಳನ್ನು ಗಣರಾಜ್ಯೋತ್ಸವದ ಹಿಂದಿನ ದಿನದಂದು ಕೇಂದ್ರ ಸರ್ಕಾರದಿಂದ ಕೊಡಮಾಡುತ್ತಿದ್ದು, ಕಲೆ, ಸಮಾಜ ಕಾರ್ಯ, ಸಾರ್ವಜನಿಕ ವ್ಯವಹಾರ, ವಿಜ್ಞಾನ ತಂತ್ರಜ್ಞಾನ, ವ್ಯಾಪಾರ ಮತ್ತು ಕೈಗಾರಿಕೆ, ವೈದ್ಯಕೀಯ, ಸಾಹಿತ್ಯ ಶಿಕ್ಷಣ, ನಾಗರೀಕ ಸೇವೆ, ಕ್ರೀಡೆ ಅಥ್ಲೇಟಿಕ್, ಸಾಹಸ ಕ್ರೀಡೆ, ಪರಿಸರ ಸಂರಕ್ಷಣೆ, ವನ್ಯಮೃಗ ಸಂರಕ್ಷಣೆ ಮುಂತಾದವುಗಳಲ್ಲಿ ಗಣನೀಯವಾಗಿ ಸೇವೆ ಸಲ್ಲಿಸಿದ ಸಾಧಕರಿಂದ ಅರ್ಜಿ ಆಹ್ವಾನಿಸಿದೆ.

ಆಸಕ್ತರು ತಮ್ಮ ಸ್ವ–ವಿವರಗಳೊಂದಿಗೆ ತಮ್ಮ ಸಾಧನೆಯ ದಾಖಲೆಗಳನ್ನು ಕನ್ನಡ ಮತ್ತು ಇಂಗ್ಲೀಷ್ ಭಾಷೆಯಲ್ಲಿ ಸಿದ್ಧಪಡಿಸಿ kanbhavblr@gmail.com ಹಾಗೂ dkc.shivamogga@gmail.com ಇ–ಮೇಲ್ ವಿಳಾಸಕ್ಕೆ ಜೂನ್ 15 ರೊಳಗಾಗಿ ಕಳುಹಿಸುವಂತೆ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

### ಮಲೇರಿಯಾ ಎಂದರೆನು. ಮಲೇರಿಯಾ ಹೇಗೆ ಬರುತ್ತದೆ. ಅದಕ್ಕೆ ತಡೆಗಟ್ಟಲು ಸಾಮಾನ್ಯ ಅಂಶಗಳು,

# ಜಿಲ್ಲಾಡಳಿತದಿಂದ ಮಲೇರಿಯಾ ತಡೆಗಟ್ಟಲು ಕೈಗೊಂಡ ಕ್ರಮಗಳು

ಮುಂಗಾರುಮಳೆ ಪ್ರಾರಂಬಗೊಂಡಿದೆ. ಮಳೆಗಾಲದ ಸಮಯದಲ್ಲಿ ಹಲವಾರು ಕಾಯಿಲೆಗಳು, ಮನುಷ್ಯರನ್ನು ಕಾಡುತ್ತವೆ. ಅವುಗಳಲ್ಲಿ ಶೀತ, ಕೆಮ್ಮು, ತಲೆನೂವು, ಜ್ವರ, ಮೈ ಕೈ ನೂವು ಸಹಜವಾಗಿವೆ. ಮತ್ತು ಮಕ್ಕಳು, ವೃದ್ಧರು, ಮಹಿಳೆಯರು, ಪುರುಷರು ಸೇರಿ ಎಲ್ಲ ವಯೋಮಾನದವರನ್ನು ಭಾಧಿಸುತ್ತವೆ, ಮತ್ತು ಕಾಡುತ್ತವೆ, ಅದ್ದರಿಂದ ಆದರೆ ಮಳೆಗಾಲದ ಸಮಯದಲ್ಲಿ ಹಲವಾರು ಬಂದು ಹೊಗುವ ಕಾಯಿಲೆಯ ಜೊತೆಗೆ ಮಲೇರಿಯಾ, ಡೆಂಗ್ಯೂ, ಚೀಕನ್ ಗೂನ್ಯ, ದಂತಹ ದೊಡ್ಡ ಪ್ರಮಾಣದ ಕಾಯಿಲೆಗಳು ಭಾಧಿಸಲು ಶುರು ಮಾಡಿಕೊಂಡಿವೆ. ಇವುಗಳಿಂದ ರಕ್ಷಿಕೋಳ್ಳಲು ಹತ್ತು ಹಲವಾರು ಮುಂಜಾಗೃತ ಕಾರ್ಯಾಗಾರಗಳು ಮತ್ತು ಮುನ್ನೆಚರಿಕೆ ಕ್ರಮಗಳನ್ನು ಡಾ. ಸಲಹೆಯಂತೆ ತೆಗೆದುಕೊಳ್ಳುವುದು ಮತ್ತು ಕಾಪಾಡಿಕೊಳ್ಳವುದು ಸಾರ್ವಜನಿಕರ ಜವಬ್ದಾರಿಯಾಗಿದೆ. ಎಂದರೆ ತಪ್ಪಾಗಲಾರದು.


ವ್ಯಕ್ತಿಯಿಂದ ವ್ಯಕ್ತಿಗೆ ಮಲೇರಿಯಾ ಹರಡಬಹುದೇ? ಹಾಗಾದರೆ ಅದನ್ನು ನಿಯಂತ್ರಿಸುವುದು ಹೇಗೆ?

ಮಲೇರಿಯಾ ಎಂದರೆ ? ಸಾಂಕ್ರಾಮಿಕ ರೋಗವಲ್ಲ, ಅಂದರೆ ಅದು ವ್ಯಕ್ತಿಯಿಂದ ವ್ಯಕ್ತಿಗೆ ಹರಡುವುದಿಲ್ಲ. ಇದು ಸೋಂಕಿತ ಹೆಣ್ಣು ಅನಾಫಿಲಿಸ್ ಸೊಳ್ಳೆಯ ಕಚ್ಚುವಿಕೆಯ ಮೂಲಕ ಹರಡುತ್ತದೆ. ಮಲೇರಿಯಾ ನಿಯಂತ್ರಣಕ್ಕೆ ಸೊಳ್ಳೆಗಳ ಕಾಟ ತಡೆಯುವುದು ಅತ್ಯಗತ್ಯ. ಸೊಳ್ಳೆ ನಿವಾರಕಗಳನ್ನು ಬಳಸುವುದು, ರಕ್ಷಣಾತ್ಮಕ ಬಟ್ಟೆಗಳನ್ನು ಧರಿಸುವುದು ಮತ್ತು ಸೊಳ್ಳೆ ಪರದೆಗಳ ಅಡಿಯಲ್ಲಿ ಮಲಗುವುದು ಮೂಲಕ ಇದನ್ನು ಮಾಡಬಹುದು. ಅಲ್ಲದೆ, ನಿಂತ ನೀರನ್ನು ತೆಗೆದುಹಾಕುವ ಮೂಲಕ ಸೊಳ್ಳೆಗಳ ಉತ್ಪತ್ತಿ ತಾಣಗಳನ್ನು ನಿರ್ಮೂಲನೆ ಮಾಡುವುದು ಸೊಳ್ಳೆಗಳ ಸಂಖ್ಯೆಯನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ

ಯಾವುದೇ ಜ್ವರವಿರಲ್ಲಿ ಮೊದಲು ರಕ್ತ ಪರೀಕ್ಷೆ ಮಾಡಿಸಿ. :

**ಮಲೇರಿಯಾದ ಲಕ್ಷಣಗಳು:**

ಮಲೇರಿಯಾದ ಲಕ್ಷಣಗಳು ಸಾಮಾನ್ಯವಾಗಿ ಸೋಂಕಿನ ನಂತರ 10 ದಿನಗಳಿಂದ 4 ವಾರಗಳವರೆಗೆ ಬೆಳವಣಿಗೆಯಾಗುತ್ತವೆ ಮತ್ತು ಸೋಂಕಿಗೆ ಕಾರಣವಾದ ಪ್ಲಾಸ್ಮೋಡಿಯಂ ಪರಾವಲಂಬಿ ಪ್ರಕಾರವನ್ನು ಅವಲಂಬಿಸಿ




ಬದಲಾಗಬಹುದು. ಮಲೇರಿಯಾದ ಕೆಲವು ಸಾಮಾನ್ಯ ಲಕ್ಷಣಗಳು:

ಫೀವರ್, ತಲೆನೋವು, ಚಿಲ್, ಸ್ನಾಯುನೋವು, ಆಯಾಸ, ಬೆವರುವಿಕೆ, ವಾಕರಿಕೆ

**ಈಡೀಸ್ ಸೊಳ್ಳೆಗಳು ಉತ್ಪತ್ತಿ;**

ಡೆಂಗ್ಯೂ, ಚಿಕುಂಗುನ್ಯ ರೋಗವು ಈಡಿಸ್ ಇಜಿಪ್ಟೆ ಸೊಳ್ಳೆಯು ಕಚ್ಚುವಿಕೆಯಿಂದ ಒಬ್ಬರಿಂದ ಒಬ್ಬರಿಗೆ ಹರಡುತ್ತದೆ ಈ ಸೊಳ್ಳೆಯು ಸ್ವಚ್ಚವಾದ ನೀರಿನಲ್ಲಿ ಮೊಟ್ಟೆಗಳನ್ನಿಟ್ಟು, ತನ್ನ ವಂಶಾಭಿವೃದ್ಧಿಯನ್ನು ಮಾಡುತ್ತವೆ ಈ ರೋಗದ ಲಕ್ಷಣವು ವಿಪರೀತ ಜ್ವರ ಮೈ–ಕೈ ನೋವು, ತಲೆ ನೋವು ಹಾಗೂ ಕಣ್ಣುಗಳು ಕೆಂಪಾಗುವುಕೆ ಲಕ್ಷಣಗಳು ಕಂಡು ಬರುತ್ವೆ

ಹಾಗೂ ನಿಯಂತ್ರಣ: ಈಡೀಸ್ ಜಾತಿಯ ಸೊಳ್ಳೆಗಳು ವಿಶಿಷ್ಟ ಲಕ್ಷಣಗಳಾದ ಹಗಲು ಹೊತ್ತಿನಲ್ಲಿ ಮನುಷ್ಯರನ್ನು ಕಚ್ಚುವವು, ಶುದ್ಧವಾದ ನೀರಿನಲ್ಲಿ ಮತ್ತು ನೀರು ಶೇಖರಣಾ ಪರಿಕರಗಳು ಘನ ತ್ಯಾಜ್ಯ ವಸ್ತುಗಳಲ್ಲಿ ಸಂಗ್ರಹವಾಗುವ ನೀರಿನಲ್ಲಿ ವಂಶಾಭಿವೃದ್ಧಿಯಾಗುವ ಕುರಿತು ಜಾಗೃತಿ ಮೂಡಿಸಬೇಕು. ಈಡೀಸ್ ಸೊಳ್ಳೆಗಳು, ಮೊಟ್ಟೆಗಳು, ಸೂಕ್ತಾವ್ಯಸ್ಥೆಯಲ್ಲಿ ತಿಂಗಳಗಟ್ಟಲೆ ಇರುವ ಕುರಿತು ತಿಳಿಸಿ, ಪೈಯರ್ ಬಕೆಟುಗಳಲ್ಲಿ, ಸಂಗ್ರಹವಿರುವ ನೀರಿನಲ್ಲಿ ಈಡೀಸ್ ಸೊಳ್ಳೆಗಳು ಉತ್ಪತ್ತಿಯಾಗುತ್ತವೆ ಮತ್ತು ನಿಯಂತ್ರಣಕ್ಕಾಗಿ ಟೈರ್ಗಳನ್ನು ಮಳೆ ನೀರು ಸಂಗ್ರಹವಾಗದಂತಾಹ ಪ್ರದೇಶಗಲ್ಲಿ ವಿಲೇವಾರಿ ಮಾಡುವುದು, ಲಾರ್ವಾ ನಾಶಕ ಬಳಸುವುದು, ಪ್ಲಾಸ್ಟಿಕ್ ಹೋದಿಕೆಯಿಂದ ನೀರು ಶೇಖರಣೆಯಾಗದಂತೆ ನೋಡಿಕೊಳ್ಳುವುದು, ಸೊಳ್ಳೆ ನಿರೋಧಕಗಳನ್ನು ಬಳಸುವುದು ಅವಶ್ಯ.ವಾಗಿದೆ.

ಡೆಂಗ್ಯೂ ಜ್ವರದಲ್ಲಿ 3 ವಿಧಗಳು; 1.ಡೆಂಗ್ಯೂ ಜ್ವರ 2.ಡೆಂಗ್ಯೂ ರಕ್ತ ಸ್ರಾವ 3. ಡೆಂಗ್ಯೂ ಶಾಕ ಸಿಡ್ರೋಮ್

ಈ ರೋಗಕ್ಕೆ ನಿಖರವಾದ ಚಿಕಿತ್ಸೆ ಇರುವುದಿಲ್ಲಾ ರೋಗದ ಲಕ್ಷಣಗಳ ಆಧಾರದ ಮೇಲೆ ಚಿಕಿತ್ಸೆ ನೀಡಲಾಗುವುದು

ಅದಕ್ಕಾಗಿ ಈ ಒಂದು ರೋಗದ ಬಗ್ಗೆ ಜನರಿಗೆ ಹೆಚ್ಚಿಗೆ ಅರಿವನ್ನು ಮೂಡಿಸಬೇಕು ಈ ರೋಗ ಬರದ ಹಾಗೇ ಮುನ್ನೇಚರಿಕೆ ಕ್ರಮಗಳನ್ನು ವಹಿಸಬೇಕು,

ಮನೆಯ ಸುತ್ತ ಮುತ್ತ ನೀರು ನಿಲ್ಲದ ಹಾಗೆ ಸ್ವಚ್ಚವಾಗಿ ಇಡಬೇಕು ಮತ್ತು ಮನೆಯ ಒಳಗೆ ನೀರು ತುಂಬುವ ಪತ್ರೆಗಳನ್ನು ವಾರಕ್ಕೊಮ್ಮೆ ಸ್ವಚ್ಚವಾಗಿ ತೊಳೆದು ಒಣಗಿಸಿ ನೀರು ತುಂಬಿ ಮೇಲಗಡೆ ಮುಚ್ಚಬೇಕು. ಮತ್ತು ಮನೆಯ ಕಿಡಕಿಗಳಿಗೆ ಜಾಲರಿಗಳನ್ನು ಬಳಸಬೇಕು, ಮಲಗುವಾಗ ಸೊಳ್ಳೆ ಪರದೇಗಳನ್ನು ಬಳಸಬೇಕು ಮತ್ತು

ಡಾ. ಹೆಚ್.ಎಲ್ ಗಿರಡ್ಡಿ: ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಅಧಿಕಾರಿಗಳು ಗದಗ, ಡೆಂಗೀ ನಿವಾರಣೆ ನಿಟ್ಟಿನಲ್ಲಿ ಸಮುದಾಯ ಪಾತ್ರವು ಮಹತ್ವದಾಗಿದ್ದು, ಈ ನಿಟ್ಟಿನಲ್ಲಿ ಅಗ್ಯತ ಸಾರ್ವಜನಿಕರ ಸಹಕಾರವು ದೊರೆತಾಗ ಮಾತ್ರವೇ ಗುರಿ ಸಾಧನೆಯು ಸುಲಭ ಸಾಧ್ಯವಾಗುತ್ತದೆ. ಈ ವರ್ಷದ ಸರ್ಕಾರದ ಘೋಷ ವಾಕ್ಯವಾದ ? check clean, Cover: Steps to Defeat Dengue, ಡೆಂಗೀ ಸೋಲಿಸಲು ಹೆಜ್ಜೆಗಳು ಪರಿಶೀಲಿಸಿ, ಸ್ವಚ್ಚಗೊಳಿಸಿ, ಮುಚ್ಚಿಡಿ ಉತ್ತೇಜನ ನೀಡೋಣ.

ಸಾಯಂಕಾಲ ಬೇವಿನ ಸೊಪ್ಪಿನ ಹೊಗೆಯನ್ನು ಹಾಕಬೇಕು ಮತ್ತು ಯಾವುದೇ ಜ್ವರವಿರಲ್ಲಿ ಮೊದಲು ರಕ್ತ ಪರೀಕ್ಷೆ ಮಾಡಿಸಿ .

ಜಿಲ್ಲಾಡಳಿತದಿಂದ ಮಲೇರಿಯಾ ತಡೆಗಟ್ಟಲು ಕೈಗೊಂಡ ಕ್ರಮಗಳು

ಜಿಲ್ಲಾ ಮಟ್ಟದ ರಾಷ್ಟ್ರೀಯ ಡೆಂಗೀ ದಿನ, ಜಾಥಾ ಮತ್ತು ಮಾನವ ಸರಪಳಿ ಪ್ರದರ್ಶನ ಜನಜಾಗೃತಿ ಜಿಲ್ಲೆಯಲ್ಲಿ ಡೆಂಗೀ ನಿಯಂತ್ರಣ ಮಾಡಲು ಗುಣಮಟ್ಟದ ಲಾರ್ವಾ ಸಮೀಕ್ಷೆ ಹಾಗೂ ಜ್ವರ ಸಮೀಕ್ಷೆ ಮಾಡಿ ಖಚಿತ ಪ್ರಕರಣಗಳು

ಕಂಡು ಬಂದಲ್ಲಿ ಸೂಕ್ತ ಚಿಕಿತ್ಸೆ ನೀಡಿ, ಸೂಕ್ತ ಆರೈಕೆ ಹಾಗೂ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲು ಆರೋಗ್ಯ ಇಲಾಖೆಯ ಅಧಿಕಾರಿಗಳು ಹಾಗು ಸಿಬ್ಬಂದಿ ವರ್ಗದವರಿಗೆ ಕರೆ, ಜಿಲ್ಲೆಯಲ್ಲಿ ಕ್ರಿಯಾ ಯೋಜನೆ ತಯಾರಿಸಿ ಗುಣಮಟ್ಟದ ಲಾರ್ವಾ ಸಮೀಕ್ಷೆ ಮಾಡಲು ಗ್ರಾಮೀಣ/ಶಹರ ಮಟ್ಟದಲ್ಲಿ ಹೆಚ್ಚಿನ ಕಾರ್ಯನಿರ್ವಹಿಸಿ ಜಿಲ್ಲೆಯಲ್ಲಿ ಸ್ಥಳೀಯವಾಗಿ ಯಾವುದೇ ಡೆಂಗೀ ಪ್ರಕರಣಗಳು ಕಂಡು ಬರಲಾರದ ಹಾಗೇ ನೋಡಿಕೊಳ್ಳಲು ಕ್ರಮವಹಿಸಬೇಕು.

**ಜಿಲ್ಲಾಡಳಿತದಿಂದ ಕೈಗೊಂಡ ಮುಂಜಾಗ್ರತಾ ಕ್ರಮಗಳು:**

ಗದಗ ಬೆಟಗೇರಿ ನಗರಸಭೆ ಪೌರ ಕಾರ್ಮಿಕರಿಗೆ ಮಲೇರಿಯಾ ಮುನ್ನೆಚರಿಕಾ ಅರಿವು ಮೂಡಿಸುವ ಸಿದ್ದತೆ ಕಾರ್ಯಕ್ರಮಗಳು ಮತ್ತು ರಾಷ್ಟ್ರೀಯ ಡೆಂಗೀ ದಿನದ ಅಂಗವಾಗಿ ಜಿಲ್ಲಾ ಮಟ್ಟದ ಜಾಥಾ ಮತ್ತು ಮಾನವ ಸರಪಳಿ ಪ್ರದರ್ಶನ ಜನಜಾಗೃತಿ ಕಾರ್ಯಕ್ರಮ ಹಮ್ಮಿಕೊಂಡಿದೆ

ಡಾ. ಸಲಹೆಗಳು ಅನುಸರಿಸಿ : ಮಲೇರಿಯಾದ ಯಾವುದೇ ರ'ೂ ೀ ಗ' ಲ ಕ್ಷ್ ಣ ಗ' ಳ' ನ'್ನ ಅನುಭವಿಸಿದರೆ, ವಿಶೇಷವಾಗಿ ಮಲೇರಿಯಾ ಹರಡುವ ಹೆಚ್ಚಿನ ಅಪಾಯವಿರುವ ಪ್ರದೇಶಕ್ಕೆ ಇತ್ತೀಚೆಗೆ ಪ್ರಯಾಣಿಸಿದರೆ, ತಕ್ಷಣವೇ ವೈದ್ಯಕೀಯ ಆರೈಕೆಯನ್ನು ಪಡೆಯಬೇಕು. ಸಮಯೋಚಿತ ರೋಗ ನಿರ್ಣಯ ಮತ್ತು ಸರಿಯಾದ ಚಿಕಿತ್ಸೆಯು ಗಂಭೀರ ತೊಡಕುಗಳನ್ನು ತಡೆಯಲು ಮತ್ತು ಜೀವಗಳನ್ನು ಉಳಿಸಲು ಸಹಾಯ ಮಾಡುತ್ತದೆ

ಪೌರ ಕಾರ್ಮಿಕರು ಮತ್ತು ಸಾರ್ವಜನಿಕರಿಗೆ ಮಾರ್ಗಸೂಚಿಗಳು

ಈ ವರ್ಷದ ಘೋಷವಾಕ್ಯ ?ಡೆಂಗಿ ಸೋಲಿಸಲು ಹೆಜ್ಜೆಗಳು: ಪರಿಶೀಲಿಸಿ, ಸ್ವಚಗೊಳಿಸಿ, ಮುಚ್ಚಿಡಿ? ಮತ್ತು ಸಾರ್ವಜನಿಕರಿಗೆ ಈ ರೋಗದ ಬಗ್ಗೆ ಹೆಚ್ಚಿನ ಅರಿವು ಮೂಡಿಸಲು ಕಸದ ವಾಹನದಲ್ಲಿ ಆಡಿಯೋ ಕ್ಲಿಪಂಗ್‌ಗಳನ್ನು ಹಾಕಿ ಹೆಚ್ಚಿನ ಜಾಗೃತಿ ವಹಿಸಬೇಕು ಪುರಸಭೆಯ

ಪೌರಸಭೆಯ ಪೌರ ಕಾರ್ಮಿಕರು ತಮ್ಮ ದೈನಂದಿನ ಕಾರ್ಯಗಳಲ್ಲಿ ಟೈಯರ್‌ಗಳು, ಪ್ಲಾಸ್ಟಿಕ್ ತ್ಯಾಜ ವಿಲೇವಾರಯನ್ನು ಸರಿಯಾದ ವಿಧಾನದಲ್ಲಿ ಮಾಡಬೇಕು ಹಾಗೂ ಎಲ್ಲಾ ವಾರ್ಡಗಳಲ್ಲಿ ಮಳೆಯ ನೀರು ನಿಲ್ಲದ ಹಾಗೇ ಸರಗವಾಗಿ ಹರಿಯುವಂತೆ ಮಾಡುವುದು, ಚರಂಡಿ ಸ್ವಚ್ಚಗೊಳಿಸುವುದು, ಮೋಡಕಾ ವಸ್ತುಗಳಾದ ಬಕೆಟ್, ಡಬ್ಬಿ, ಕೊಡ ಮುಂತಾದ ಘನತ್ಯಾಜ ವಸ್ತುಗಳನ್ನು ಗುಜರಿ ಅಂಗಡಿ ಮಾಲಿಕರಿಗೆ ಸೂಕ್ತ ಸ್ಥಳಗಳಲ್ಲಿ ಸ್ಥಳಾಂತರಿಸಲು ಸೂಚಿಸಬೇಕು.

ಜನರಿಗೆ ಡೆಂಗ್ಯೂ ರೋಗದ ಬಗ್ಗೆ ಪೌರ ಕಾರ್ಮಿಕರು ಸಮುದಾಯದವರಿಗೆ ಈ ರೋಗದ ಬಗ್ಗೆ ಒಳ್ಳೆಯ ತಿಳುವಳಿಕೆಯನ್ನು ನೀಡಬೇಕು ಈ ತಿಳುವಳಿಕೆಯಿಂದ ಎಲ್ಲಾ ಕಾರ್ಮಿಕರು ತಮ್ಮ ತಮ್ಮ ಮನೆಯ ಸುತ್ತ–ಮುತ ದಿನ ನಿತ್ಯವು ಪರಿಸರವನ್ನು ಸ್ವಚ್ಚವಾಗಿ ಇಟ್ಟುಕೊಳ್ಳಬೇಕಾಗಿದೆ.

**ರಾಘವೇಂದ್ರ ಶಾಂತಗೀರಿ**
**ಅಪ್ರೆಂಟಿಸ್, ವಾರ್ತಾ ಮತ್ತು ಸಾ.ಸಂ. ಇಲಾಖೆ. ಗದಗ**

## ಪ್ರಧಾನ ಮಂತ್ರಿಗಳ ಕಿರು ಆಹಾರ ಸಂಸ್ಕರಣ ಉದ್ದಿಮೆಗಳ ಯೋಜನೆ ಸದುಪಯೋಗಪಡಿಸಿಕೋಳ್ಳಿ (ಪಿ.ಎಮ್.ಎಫ್.ಎಮ್.ಇ)

**ಗದಗ :** ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಆತ್ಮ ನಿರ್ಭರ ಭಾರತ ಅಭಿಯಾನದ ಅಂಗವಾಗಿ ಭಾರತ ಸರ್ಕಾರವು ಪ್ರಧಾನಮಂತ್ರಿಗಳ ಕಿರು ಆಹಾರ ಸಂಸ್ಕರಣ ಉದ್ದಿಮೆಗಳ ನಿಯಮಬದ್ಧಗೊಳಿಸುವಿಕೆ (ಪಿ.ಎಮ್.ಎಫ್.ಎಮ್.ಇ) ಯೋಜನೆಯನ್ನು ಕಳೆದ 5 ವರ್ಷಗಳಿಂದ ಜಾರಿಗೊಳಿಸಿರುತ್ತಾರೆ.. ರೈತರು ಕೃಷಿ ಉತ್ಪನ್ನಗಳನ್ನು ನೇರವಾಗಿ ಮಾರಾಟ ಮಾಡದೇ ಮೌಲ್ಯವರ್ಧನೆ, ಉತ್ಪನ್ನಗಳ ವರ್ಗಿಕರಣ, ಶ್ರೇಣಿಕರಣ, ಬ್ರಾಂಡಿಂಗ್, ಲೇಬಲಿಂಗ್ ಮಾರುಕಟ್ಟೆಯ ಬೆಂಬಲ ಮತ್ತು ರಫ್ತಿಗೆ ಪ್ರೋತ್ಸಾಹ ನೀಡುವ ಮೂಲಕ ಅಂತಹ ವ್ಯಕ್ತಿ, ಸ್ವ ಸಹಾಯ ಸಂಘ, ರೈತ ಉತ್ಪಾದಕರ ಸಂಸ್ಥೆಗಳ ಆದಾಯವನ್ನು ದ್ವಿಗುಣಗೊಳಿಸುವುದು ಹಾಗೂ ಅವರನ್ನು ಉದ್ಯಮೆದಾರರಾಗಿ ರೂಪಿಸುವುದು ಮುಖ್ಯ ಉದ್ದೇಶವಾಗಿದೆ.

ಕೇಂದ್ರ ಸರ್ಕಾರದ ಶೇ. 35 ಹಾಗೂ ರಾಜ್ಯ ಸರ್ಕಾರದ ಶೇ. 15 ಸಹಾಯಧನ ಒಟ್ಟು ಶೇ. 50 ಸಹಾಯಧನ ಬ್ಯಾಂಕ ಮೂಲಕ ನೀಡಲು ಅವಕಾಶವಿರುತ್ತದೆ. ವಿಸ್ತ್ರತ ಯೋಜನಾ ವರದಿ ತಯಾರಿಸಿ ಶೇ. 50 ರಷ್ಟು ಸಹಾಯಧನ ಮತ್ತು ಉಳಿದ ಶೇ. 50 ಅನುದಾನ ಬ್ಯಾಂಕ ಸಾಲ ದೊರೆಯಲಿದೆ. ಈ ವರ್ಷವು ಯೋಜನಾ ಅನುಷ್ಠಾನದ ಕೊನೆಯ ವರ್ಷವಾಗಿರುವುದರಿಂದ ಜಿಲ್ಲೆಯ ರೈತರು ಸದರಿ ಯೋಜನೆಯ ಹೆಚ್ಚಿನ ಲಾಭ ಪಡೆಯಲು ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ ಜಿ ಹೆಚ್ ಇವರು ಕೋರಿದ್ದಾರೆ.ಈ ಯೋಜನೆಯಡಿ ಕಿರು ಆಹಾರ ಸಂಸ್ಕರಣ ಉದ್ದಿಮೆಗಳಾದ ಬ್ಯಾಡಗಿ ಮೆಣಸಿನಕಾಯಿ ಪುಡಿ, ಹಿಟ್ಟಿನ ಗಿರಣಿಗಳು, ಎಣ್ಣೆ ಗಾಣಗಳು, ಮಿನಿ ದಾಲ್ ಮಿಲ್, ಅರಿಷಿಣ ಸಂಸ್ಕರಣೆ, ಮಸಾಲಾ ಪದಾರ್ಥಗಳು, ಸಿರಿಧಾನ್ಯಗಳಿಂದ ಉಪ ಉತ್ಪನ್ನಗಳ ತಯಾರಿಕೆ, ಶ್ಯಾವಿಗೆ, ರವಾ, ನೂಡಲ್ಸ್ ತಯಾರಿಕೆ, ಕುಕ್ಕುಟ ಉತ್ಪನ್ನಗಳು, ವಿವಿಧ ಹಣ್ಣು ಹಾಗೂ ತರಕಾರಿ ಉತ್ಪನ್ನಗಳ ಮೌಲ್ಯವರ್ಧನೆ ಹಾಗೂ ಇತರೆ ಆಹಾರ ಸಂಸ್ಕರಣಾ ಘಟಕಗಳನ್ನು ಹೊಸದಾಗಿ ಉದ್ಯಮ ಪ್ರಾರಂಭಿಸಲು ಅಥವಾ ಚಾಲ್ತಿಯಲ್ಲಿರುವ ಉದ್ಯಮಗಳನ್ನು ವಿಸ್ತರಿಸಲು ಅವಕಾಶವಿರುತ್ತದೆ. ಹೆಚ್ಚಿನ ವಿವರಗಳಿಗಾಗಿ ಸಮೀಪದ ಕೃಷಿ ಇಲಾಖೆ, ತೋಟಗಾರಿಕೆ ಇಲಾಖೆ ಹಾಗೂ ರೈತ ಸಂಪರ್ಕ ಕೇಂದ್ರಗಳಿಗೆ ಸಂಪರ್ಕಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಹಾಯಕ ಕೃಷಿ ನಿರ್ದೇಶಕರು ಸೀಮಾ ಸವಣೂರ 8277931425 ಹಾಗೂ ಸಂಪನ್ಮೂಲ ವ್ಯಕ್ತಿಗಳಾದ ಶ್ರೀನಿವಾಸ ರಾಠೋಡ 9686641134, ಮಂಜುನಾಥ ಭರಮಗೌಡರ 9449339531, ಗೌರಿಶಂಕರ ಸಜ್ಜನ 9986789162, ಪ್ರಭಾಕರ ಹೂಗಾರ 9620624838, ಸಂತೋಷ ಜವಳಿ 9241333555, ಪ್ರಕಾಶ ಕೊಣ್ಣೂರು 9901553190, ಸುರೇಶ ಸಾವಳಗಿ 9663971865, ಕಾರ್ತಿಕ ಹಿರೇಮಠ 8748945132, ಗಿರೀಶ 9686762766 ಹಾಗೂ ಬಸಪ್ಪ ಮುಧೋಳ 8217682195 ಇವರನ್ನು ಸಂಪರ್ಕಿಸಲು ಕೋರಿದೆ.

## ಸಹಕಾರದಿಂದ ಸ್ವಚ್ಛತಾ ಅಭಿಯಾನ ಕಾರ್ಯಕ್ರಮ

**ಗದಗ :** ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ., ಬೆಂಗಳೂರು, ಗದಗ ಜಿಲ್ಲಾ ಸಹಕಾರ ಯೂನಿಯನ್ ನಿ., ಸಹಕಾರ ಇಲಾಖೆ, ಕೆ.ಸಿ.ಸಿ. ಬ್ಯಾಂಕ್ ಲಿ., ಧಾರವಾಡ, ಕೆ.ಎಂ.ಎಫ್. ಧಾರವಾಡ ಹಾಗೂ ಗದಗ ಜಿಲ್ಲೆಯ ಸಹಕಾರ ಸಂಘ/ಬ್ಯಾಂಕುಗಳ ಸಂಯುಕ್ತ ಆಶ್ರಯದಲ್ಲಿ ಅಂತರಾಷ್ಟ್ರೀಯ ಸಹಕಾರ ವರ್ಷಾಚರಣೆ 2025 ರ ಅಂಗವಾಗಿ "ಸಹಕಾರದಿಂದ ಸ್ವಚ್ಚತಾ ಅಭಿಯಾನ" ಕಾರ್ಯಕ್ರಮ ಗುರುವಾರ ಕೆ.ಸಿ.ಸಿ. ಬ್ಯಾಂಕ್ ಲಿ., ಗದಗ ಇದರ ಹಿಂಭಾಗ ಆವರಣ, ಗಾಂಧಿ ಸರ್ಕಲ್ ಪಿ.ಬಿ. ರೋಡ, ಗದಗದಲ್ಲಿ ಜರುಗಿತು.

ಕೆ.ಸಿ.ಸಿ. ಬ್ಯಾಂಕ್ ಲಿ., ಧಾರವಾಡ ಇದರ ನಿರ್ದೇಶಕರಾದ ಎಂ.ಎಫ್. ಕಲಗುಡಿರವರು ಸಹಕಾರ ಜ್ಯೋತಿ ಬೆಳಗಿಸುವದರೊಂದಿಗೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡುತ್ತಾ ಭಾರತ ಸರ್ಕಾರದ ಮಹತ್ವಾಕಾಂಕ್ಷಯ ಯೋಜನೆ "ಸ್ವಚ್ಚ ಭಾರತ ಅಭಿಯಾನ" ಅಕ್ಟೋಬರ್ 2, 2014 ರಲ್ಲಿ ಪ್ರಾರಂಭಗೊಂಡಿರುತ್ತದೆ. ಆದರೆ ಕೇಂದ್ರ ಸರ್ಕಾರವು 2025 ನೇ ವರ್ಷವನ್ನು ಅಂತರಾಷ್ಟ್ರೀಯ ಸಹಕಾರ ವರ್ಷ ಎಂದು ಘೋಷಿಸಿದ್ದು ಅದರ ಧ್ಯೇಯ : ಸಹಕಾರ ಸಂಸ್ಥೆಗಳು ಉತ್ತಮ ಜಗತ್ತನ್ನು ನಿರ್ಮಿಸಬಲ್ಲವು ಹಾಗೂ ವಿಷಯ : ಸಹಕಾರದಿಂದ ಸ್ವಚ್ಚತೆ ಅಭಿಯಾನ ಕಾರ್ಯಕ್ರಮವನ್ನು ಇಂದು ಆಯೋಜಿಸಿದ್ದು ತಾವೆಲ್ಲರೂ ಹೆಚ್ಚಿನ




ಸಂಖ್ಯೆಯಲ್ಲಿ ಭಾಗವಹಿಸಿದ್ದು ಸಂತಸ ತಂದಿದೆ. ಕಾರಣ ಜಿಲ್ಲೆಯಲ್ಲಿರುವ ಎಲ್ಲಾ ಸಹಕಾರ ಸಂಘಗಳು ತಮ್ಮ ಸಂಸ್ಥೆಗಳು ಹಾಗೂ ಸರ್ಕಾರಿ ರಸ್ತೆ, ಆಟದ ಮೈದಾನ, ಉದ್ಯಾನವನ ಹಾಗೂ ಗ್ರಾಮ ಪಂಚಾಯತ ಈ ರೀತಿ ವಿವಿಧ ಸ್ಥಳಗಳಲ್ಲಿ ವರ್ಷಾಧ್ಯಂತ ಸ್ವಚ್ಚತೆಯನ್ನು ಕೈಕೊಳ್ಳಲು ಕರೆ ನೀಡಿದರು.ಎಸ್. ವ್ಹಿ. ಚಳಗೇರಿ ಹಾಗೂ ಧಾರವಾಡ ಹಾಲು ಒಕ್ಕೂಟದ ಜಿಲ್ಲಾ ಮುಖ್ಯಸ್ಥರಾದ ಡಾ. ಪ್ರಸನ್ನ ಪಟ್ಟೇದ ಹಾಗೂ ಜಿಲ್ಲೆಯ ಎಲ್ಲಾ ತಾಲೂಕುಗಳ ವಿಸ್ತರಣಾಧಿಕಾರಿಗಳು ಉಪಸ್ಥಿತರಿದ್ದರು. ತರಬೇತಿ ಕಾರ್ಯಾಗಾರದಲ್ಲಿ ಪದವಿ ಪೂರ್ವ ಕಾಲೇಜ, ಗದಗ ಇದರ ಅರ್ಥಶಾಸ್ತ್ರ ಉಪನ್ಯಾಸಕರು, ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಇದರ ಮುಖ್ಯಸ್ಥರಾದ ಬಸವರಾಜ ಮಲ್ಲಾಪೂರ ವಿಶೇಷ ಉಪನ್ಯಾಸಕರಾಗಿ ಆಗಮಿಸಿ ಸ್ವಚ್ಚತೆ, ನೈರ್ಮಲ್ಯ, ವಾಯು ಮಾಲಿನ್ಯ, ಜಲ ಮಾಲಿನ್ಯ ಭೂ ಮಾಲಿನ್ಯ, ಉಸಿರಾಡಿಸುವ ಶುದ್ಧ ಗಾಳಿ,

ಪರಿಸರ ಕಾಪಾಡುವಲ್ಲಿ ಪ್ರಜೆಗಳ ಪಾತ್ರ, ಸಾಮಾಜಿಕ ಜವಾಬ್ದಾರಿ, ನೈತಿಕ ಮೌಲ್ಯಗಳು, ಆರೋಗ್ಯದ ಕುರಿತು ವಿವರವಾದ ಮಾಹಿತಿಯನ್ನು ನೀಡಿದರು.

ಪ್ರಾರಂಭದಲ್ಲಿ ಗದಗ ಜಿಲ್ಲಾ ಸಹಕಾರ ಯೂನಿಯನ್ನಿನ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಚಂದ್ರಶೇಖರ ಎಸ್. ಕರಿಯಪ್ಪನವರ ಇವರು ಸ್ವಾಗತಿಸಿ ನಿರೂಪಿಸಿದರು ನಂತರ ಮಹಿಳಾ ಸಹಕಾರ ಶಿಕ್ಷಕಿಯರಾದ ಶ್ರೀಮತಿ ರಶೀದಾಬಾನು ಸಿ. ಯಲಿಗಾರ ಇವರು ವಂದಿಸಿದರು.

### ಕಚ್ಚಾರಿ ತಾರಕೇಶ್ ಅವರಿಗೆ ಸಾರಿಗೆ ರತ್ನ ಪ್ರಶಸ್ತಿ

**ಗದಗ:** ಬೆಂಗಳೂರಿನಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಪರಿಶಿಷ್ಟ



ಜಾತಿ, ಪರಿಶಿಷ್ಟ ಪಂಗಡ ನೌಕರರ ಸಂಘದ ರಾಜ್ಯ ಸಮಿತಿ ವತಿಯಿಂದ ಹಮ್ಮಿಕೊಂಡಿದ್ದ ಡಾ. ಬಿ.ಆರ್. ಅಂಬೇಡ್ಕರ್ ಅವರ 134ನೇ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ಗದಗ ವಿಭಾಗದ ಕಚ್ಚಾರಿ ತಾರಕೇಶ್ ಅವರಿಗೆ 2025ನೇ ಸಾಲಿನ ಸಾರಿಗೆ ರತ್ನ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಸಂಘದ ರಾಜ್ಯ ಗೌರವ ಅಧ್ಯಕ್ಷ ಮಾವಳ್ಳಿ ಶಂಕರ, ಎಫ್.ಟಿ. ಚಿಕ್ಕಪ್ಪನವರ್, ರವಿಪ್ರಕಾಶ್ ಎಂ. ಇದ್ದರು. ಮೇ 31ರಂದು. ಕಚ್ಚಾರಿ ತಾರಕೇಶ್ ಅವರು ಸೇವಾ ನಿವೃತ್ತಿ ಹೊಂದಲಿದ್ದಾರೆ.

### ವಿದ್ಯಾರ್ಥಿನಿಲಯ ಪ್ರವೇಶಕ್ಕೆ ಅರ್ಜಿಆಹ್ವಾನ

**ಹಾಸನ:** ಅಲ್ಪಸಂಖ್ಯಾತರಕಲ್ಯಾಣ ಇಲಾಖಾವತಿಯಿಂದ2025–26ನೇ ಶೈಕ್ಷಣಿಕ ಸಾಲಿಗೆ ಹಾಸನ ಜಿಲ್ಲೆಯಲ್ಲಿಕಾರ್ಯನಿರ್ವಹಿಸುತ್ತಿರುವ ' ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ವಿದ್ಯಾರ್ಥಿಗಳಿಗೆ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್, ಮತ್ತು ಪಾರ್ಸಿ 75% ಹಾಗೂ ಇತರೆ ಓಬಿಸಿ 25% ಆನ್‌ಲೈನ್ (ರಾಜ್ಯ ವಿದ್ಯಾರ್ಥಿನಿಲಯತಂತ್ರಾಂಶದ) State Hostel Portal https://shp.karnataka.gov.in ಮೂಲಕ ದಿನಾಂಕ 17–05–2025 ರಿಂದ ದಿನಾಂಕ 25–06–2025 ರವರೆಗೆ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳಿಗೆ ಅರ್ಜಿ ಸಲ್ಲಿಸಬಹುದಾಗಿದೆ.

## ರಿಯಾಯ್ತಿ ದರದಲ್ಲಿ ಸಸಿಗಳು ಲಭ್ಯ

**ಚಿಕ್ಕಮಗಳೂರು:** ರೈತರಿಗೆ ವಿತರಿಸಲು 2025–26ನೇ ಸಾಲಿನ ಆರ್.ಎಸ್.ಪಿ.ಡಿ. ಮತ್ತು ಆರ್.ಕೆ.ವಿ.ವೈ. ಯೋಜನೆಯಡಿಯಲ್ಲಿ ಸಸಿಗಳನ್ನು ಬೆಳೆಸಿದ್ದು ಜೂನ್ 2 ರಂದು ಚಿಕ್ಕಮಗಳೂರು ತಾಲ್ಲೂಕಿನ ಮತ್ತಾವರ ಸಸ್ಯ ಕ್ಷೇತ್ರದಲ್ಲಿ ರಿಯಾಯ್ತಿ ದರದಲ್ಲಿ (6ಫಿ9 ಬ್ಯಾಗಿನ ಅಳತೆ ಸಸಿಗಳಿಗೆ ತಲಾ 3 ರೂ. ಮತ್ತು 8ಫಿ12 ಬ್ಯಾಗಿನ ಅಳತೆ ಸಸಿಗಳಿಗೆ ತಲಾ 6 ರೂ.) ಅತ್ತಿ, ಹಲಸು, ಹೆಬ್ಬಲಸು, ಮಹಾಗನಿ, ನೇರಳೆ, ಸಂಪಿಗೆ, ಸಿಲ್ವರ್, ಬೇವು, ಹೊನ್ನೆ, ಶಿವನೆ ಜಾತಿಯ ಸಸಿಗಳು ಕಭ್ಯವಿದ್ದು, ರೈತರು ಸದುಪಯೋಗಪಡಿಸಿಕೊಳ್ಳಲು ಕೋರಲಾಗಿದೆ. ಮೊದಲು ಬಂದವರಿಗೆ ಆದ್ಯತೆ ನೀಡಲಾಗುವುದು.

ಸಸಿ ಬೇಡಿಕೆ ಅರ್ಜಿ, ಪಹಣಿ, ಆಧಾರ್ ಕಾರ್ಡ್ ಪ್ರತಿ, ಬ್ಯಾಂಕ್ ಪಾಸ್‌ಬುಕ್ ಪ್ರತಿ, ಫೋನ್ ನಂ. ಹಾಗೂ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರ ಒದಗಿಸಬೇಕೆಂದು ಸಾಮಾಜಿಕ ಅರಣ್ಯ ವಲಯದ ವಲಯಾರಣ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಉಪನ್ಯಾಸಕರ ಪ್ರವೇಶ ಪರೀಕ್ಷೆ

**ಚಿಕ್ಕಮಗಳೂರು:** ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಡಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಕಾಲೇಜು ಹಾಗೂ ಡಾ.ಎ.ಪಿ.ಜೆ. ಅಬ್ದುಲ್ ಕಲಾಂ ವಸತಿ ಶಾಲೆ – ಕಾಲೇಜು ಹಾಗೂ ಮೌಲಾನಾ ಆಜಾದ್ ಮಾದರಿ ಶಾಲೆಗಳಲ್ಲಿ ಪ್ರಸಕ್ತ ಸಾಲಿನಲ್ಲಿ ತಾತ್ಕಾಲಿಕವಾಗಿ ಅತಿಥಿ ಶಿಕ್ಷಕ, ಉಪನ್ಯಾಸಕರ ಹುದ್ದೆಗಳಿಗೆ ಜೂನ್ 1 ರಂದು ಪ್ರವೇಶ ಪರೀಕ್ಷೆ ನಡೆಯಲಿದೆ.

ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳು ಜೂ. 1 ರಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ನಗರದ ಎಐಟಿ ವೃತ್ತ ಸಮೀಪದಲ್ಲಿರುವ ಐ.ಡಿ.ಎಸ್.ಜಿ. ಕಾಲೇಜಿನಲ್ಲಿ ಪರೀಕ್ಷೆ ನಡೆಯಲಿದ್ದು, ಅಭ್ಯರ್ಥಿಗಳು ಜಿಲ್ಲಾ ಕಚೇರಿಯಲ್ಲಿ ಪ್ರವೇಶ ಪತ್ರ ಪಡೆದು ಪರೀಕ್ಷೆಗೆ ಹಾಜರಾಗಬಹುದು. ಹೆಚ್ಚಿನ ಮಾಹಿತಿಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಕಚೇರಿ (08262–295848, ಮೊ: 9535323262, 6363294975, 9844866263) ಯನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಕಚೇರಿ ಪ್ರಕಟಣೆ ತಿಳಿಸಿದೆ.

## 6ನೇ ತರಗತಿಗೆ ಪ್ರವೇಶಕ್ಕೆ ಸೀಟು ಹಂಚಿಕೆ

**ಚಿಕ್ಕಮಗಳೂರು:** ಅಲ್ಪಸಂಖ್ಯಾತರ ನಿರ್ದೇಶನಾಲಯದ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕಡೂರು ಗೆದ್ಲೇಹಳ್ಳಿಯ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ ಮತ್ತು ತೇಗೂರಿನ ಡಾ.ಎ.ಪಿ.ಜೆ. ಅಬ್ದುಲ್ ಕಲಾಂ ವಸತಿ ಶಾಲೆಗಳಿಗೆ ಪ್ರಸಕ್ತ ಸಾಲಿನ 6ನೇ ತರಗತಿ ಪ್ರವೇಶ ಪರೀಕ್ಷೆ ಉತ್ತೀರ್ಣರಾಗಿರುವ ವಿದ್ಯಾರ್ಥಿಗಳ ಕೌನ್ಸೆಲಿಂಗ್ ಮೂಲಕ ಸೀಟು ಹಂಚಿಕೆಯ ಪ್ರಕ್ರಿಯೆ ಮೇ 31 ರಂದು ನಡೆಯಲಿದೆ. ಅಂದು ಬೆಳಿಗ್ಗೆ ತೇಗೂರಿನ ಡಾ.ಎ.ಪಿ.ಜೆ. ಅಬ್ದುಲ್ ಕಲಾಂ ವಸತಿ ಶಾಲೆಗೆ ದಾಖಲೆಗಳೊಂದಿಗೆ ಕಡ್ಡಾಯವಾಗಿ ಹಾಜರಾಗಬೇಕು. ಈಗಾಗಲೇ ಉತ್ತೀರ್ಣರಾದ ವಿದ್ಯಾರ್ಥಿಗಳ ಆಯ್ಕೆ ಪಟ್ಟಿಯನ್ನು ಪೋಷಕರ ನೋಂದಾಯಿತ ದೂರವಾಣಿ ಸಂಖ್ಯೆಗೆ ಲಿಂಕ್ ಕಳುಹಿಸುವ ಮುಖೇನ ಮತ್ತು ಇಲಾಖೆಯ ಅಧಿಕೃತ ವೆಬ್‌ಸೈಟ್‌ನಲ್ಲಿ ಹಾಗೂ ಜಿಲ್ಲಾ ಕಚೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಜಿಲ್ಲಾ ಕಚೇರಿ(ದೂರವಾಣಿ ಸಂಖ್ಯೆ: 08262–295848, ಮೊ: 6363773997, 9036958376, 9845229695, 9611094548) ಯನ್ನು ಸಂಪರ್ಕಿಸಬಹುದು ಎಂದು ಇಲಾಖೆಯ ಕಚೇರಿ ಪ್ರಕಟಣೆ ತಿಳಿಸಿದೆ.

### ಅಲ್ಪಸಂಖ್ಯಾತರ ವಸತಿ ಶಾಲೆ/ಕಾಲೇಜುಗಳ ಉಪನ್ಯಾಸಕರ/ಶಿಕ್ಷಕರ ಹುದ್ದೆಗಳಿಗೆ ಪ್ರವೇಶ ಪರೀಕ್ಷೆ

**ಶಿವಮೊಗ್ಗ:** : ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆ/ಕಾಲೇಜುಗಳಿಗೆ ಹಾಗೂ ಮೌಲಾನಾ ಆಜಾದ್ ಮಾದರಿ ಶಾಲೆಗಳಲ್ಲಿ ಪ್ರಸಕ್ತ ಸಾಲಿನಲ್ಲಿ ತಾತ್ಕಾಲಿಕವಾಗಿ ಅತಿಥಿ ಶಿಕ್ಷಕ/ಉಪನ್ಯಾಸಕರ ಹುದ್ದೆಗಳಿಗೆ ಜೂನ್ 01 ರಂದು ಪ್ರವೇಶ ಪರೀಕ್ಷೆ ನಡೆಯಲಿದೆ.ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳು ಜೂನ್ 01 ರಂದು ಬೆಳಗ್ಗೆ 11.00 ರಿಂದ ಮಧ್ಯಾಹ್ನ 1.00 ರವರೆಗೆ ಡಾ.ಎ.ಪಿ.ಜೆ.ಅಬ್ದುಲ್ ಕಲಾಂ ವಸತಿ ಶಾಲೆ/ಕಾಲೇಜು, ಮೇಲಿನ ಹನಸವಾಡಿ, ಗೋಂಧಿಚಟ್ನಹಳ್ಳಿ, ಹೊನ್ನಾಳಿ ರಸ್ತೆ, ಶಿವಮೊಗ್ಗ ಇಲ್ಲಿ ನಡೆಯುವ ಪ್ರವೇಶ ಪರೀಕ್ಷೆಗೆ ಜಿಲ್ಲಾ ಕಚೇರಿಯಲ್ಲಿ ಪ್ರವೇಶ ಪತ್ರ ಪಡೆದು ಸಮಯಕ್ಕೆ ಸರಿಯಾಗಿ ಹಾಜರಾಗುವಂತೆ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

